13 March 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ


**ಭಾವನಾಂತರಂಗ**

ಜೀವನದಲ್ಲಿ ನಾವು ಒಂದೇ ಏಟಿಗೆ ಗೆದ್ದರೆ ಜೀವನದಲ್ಲಿ ಅನುಭವ ಕಡಿಮೆ ಸಂತಸ ಜಾಸ್ತಿ ಆಗಬಹುದು! ಒಂದು ವೇಳೆ ಸೋತರೆ ಅನುಭವವೇ ಜಯದ ಹಾದಿಗೆ ಪ್ರೇರಣೆ!

-ಸ್ನೇಹಾ ಆನಂದ್



ಕನ್ನಡ ಶಾಲೆಗಳ ಉಳಿವಿಗಾಗಿ ಹೋರಾಟ ವಾಟಾಳ್ ಬಂಧನ — ಪುಟ ಸಂ. 2



ಚುನಾವಣೆ: ಹಂಪ್ಯಾ ಕೃಷಿ ಪತ್ತಿನ ಸೊಸೈಟಿ ಕಾಂಗ್ರೆಸ್ ವಶ — ಪುಟ ಸಂ. 3

ಕರೆ ಸ್ವೀಕರಿಸದ ನಿಗಮ: ಮಾಹಿತಿಗೆ ದೂರವಾದ ಮಹಿಳಾ ಅಭಿವೃದ್ಧಿ ನಿಗಮ — ಪುಟ ಸಂ. 4


info.varthaman@gmail.com

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 121 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3


## ಬಿಜೆಪಿ ಸಂಸದರು ಸಂಸತ್ತಿನಲ್ಲಿ ಮಾತಾಡಲಿ: ಡಿಕೆಶಿ ಒತ್ತಾಯ



**ಬೆಂಗಳೂರು:** ರಾಜ್ಯದ ಬಿಜೆಪಿ ಸಂಸದರು ಅಡುಗೆ ಅನಿಲ ಕೊರತೆ ವಿಚಾರವಾಗಿ ಸಂಸತ್ತಿನಲ್ಲಿ ಮಾತನಾಡಬೇಕು. ರಾಜ್ಯಕ್ಕೆ ನ್ಯಾಯ ಒದಗಿಸಿಕೊಡಬೇಕು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಆಗ್ರಹಿಸಿದರು.

ಬೆಂಗಳೂರಿನಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಅಡುಗೆ ಅನಿಲ ಸಿಲಿಂಡರ್ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿದೆ. ಈ ವಿಚಾರವಾಗಿ ಬಿಜೆಪಿಯ ಯಾವುದೇ ಸಂಸದರು ಬಾಯಿ ಬಿಡುತ್ತಿಲ್ಲ. ಹಳ್ಳಿ ಜನರು, ರೈತರು ಹಾಗೂ ಹೋಟೆಲ್‌ಗಳಿಗೆ ಸೌದೆ ಒಲೆ ಬಳಸಲು, ಕಟ್ಟಿಗೆ ಬಳಸಿಕೊಳ್ಳಲು ಅವಕಾಶ ನೀಡುವುದಿಲ್ಲ ಎಂದು ಟೀಕಿಸಿದರು.

ಇಂಧನ ಬೆಲೆ ಏರಿಕೆಯಿಂದ ಜನ ಪರದಾಡುತ್ತಿದ್ದಾರೆ. ಇದರಲ್ಲಿ ರಾಜ್ಯ ಸರ್ಕಾರ ಏನೂ ಮಾಡಲು ಆಗುವುದಿಲ್ಲ. ಕೇಂದ್ರ ಸರ್ಕಾರ ಇದಕ್ಕೆ ಹೊಣೆ. ಕೇಂದ್ರ ಸರ್ಕಾರ ವಿದೇಶಾಂಗ ನೀತಿ ಬಗ್ಗೆ ಸ್ಪಷ್ಟವಾಗಿ ಮಾತನಾಡುತ್ತಿಲ್ಲ. ಈ ವಿಚಾರದಲ್ಲಿ ಕೇಂದ್ರದ ಧೋರಣೆ ಖಂಡನೀಯ. ಪುಟ 2ಕ್ಕೆ

# 270 ಆರೋಗ್ಯ ಕೇಂದ್ರ ಬಂದ್

### 30 ಹೆರಿಗೆ ಮಾಡಿಸುವ ಟಾರ್ಗೆಟ್ | ಸರ್ಕಾರದ ವಿರುದ್ಧ ವಿಪಕ್ಷ ಶಾಸಕರ ಆಕ್ರೋಶ

**ಬೆಂಗಳೂರು:** ರಾಜ್ಯದಲ್ಲಿ 270 ಸಮುದಾಯ ಆರೋಗ್ಯ ಕೇಂದ್ರಗಳನ್ನು ಬಂದ್ ಮಾಡುವ ರಾಜ್ಯ ಸರ್ಕಾರದ ನಿರ್ಧಾರಕ್ಕೆ ವಿರೋಧ ಪಕ್ಷಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದವು.

ವಿಧಾನಸಭೆಯಲ್ಲಿ ಈ ವಿಚಾರ ಪ್ರಸ್ತಾಪಿಸಿದ ಜೆಡಿಎಸ್ ಶಾಸಕಿ ಶಾರದಾ ಪೂರ್ಯ ನಾಯಕ್ ಅವರು, ತಿಂಗಳಿಗೆ 30 ಪ್ರಸವ ಪ್ರಕರಣ ದಾಖಲಾಗದ ಸಮುದಾಯ ಆರೋಗ್ಯ ಕೇಂದ್ರಗಳನ್ನು ಮುಚ್ಚುವ ನಿರ್ಧಾರವನ್ನು ಸರ್ಕಾರ ತೆಗೆದುಕೊಂಡಿದೆ. ಈ ಕೇಂದ್ರಗಳ ಸಿಬ್ಬಂದಿಯನ್ನು ತಾಲ್ಲೂಕು ಆಸ್ಪತ್ರೆಗಳಿಗೆ ವರ್ಗಾಯಿಸುತ್ತಿದೆ ಎಂದು ಆರೋಪಿಸಿದರು.

ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಆಸ್ಪತ್ರೆಗಳನ್ನು ಮುಚ್ಚಿದರೆ ಜನರು ಸರ್ಕಾರದ ವಿರುದ್ಧ ದಂಗೆ ಏಳುತ್ತಾರೆಂದು ಎಚ್ಚರಿಸಿದರು. ಕಾಂಗ್ರೆಸ್ ಶಾಸಕ ಬಿ.ಆರ್.ಪಾಟೀಲ್ ಕೂಡ ಈ ವಿಷಯದಲ್ಲಿ ಸರ್ಕಾರ ಕ್ರಮ ಕೈಗೊಳ್ಳುತ್ತಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದರು.

ಈ ವೇಳೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅನುಪಸ್ಥಿತಿಯಲ್ಲಿ, ವೈದ್ಯಕೀಯ ಶಿಕ್ಷಣ ಸಚಿವ ಶರಣ್ ಪ್ರಕಾಶ್ ಪಾಟೀಲ್ ಅವರು ಸರ್ಕಾರವನ್ನು ಸಮರ್ಥಿಸಿಕೊಳ್ಳಲು ಪ್ರಯತ್ನಿಸಿದರು. ಆದರೆ, ಪ್ರಯತ್ನ ವ್ಯರ್ಥವಾಯಿತು.

ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಮಾತನಾಡಿ, ಯಲಹಂಕ ಪ್ರದೇಶದಲ್ಲಿ ಡಾ.ಶಿವರಾಮ್ ಕಾರಂತ್ ಲೇಔಟ್‌ಗಾಗಿ ತಮ್ಮ ಭೂಮಿ ನೀಡಿದ ರೈತರಿಗೆ ಶೀಘ್ರದಲ್ಲೇ ಸೈಟ್‌ಗಳನ್ನು ನೀಡಲಾಗುತ್ತದೆ ಎಂದು ಹೇಳಿದರು.



ಯಲಹಂಕ ಬಿಜೆಪಿ ಶಾಸಕ ಎಸ್.ಆರ್. ವಿಶ್ವನಾಥ್ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಶಿವಕುಮಾರ್, ನ್ಯಾಯಾಲಯವು ನಿವೇಶನ ಹಂಚಿಕೆಗೆ ಅನುಮತಿ ನೀಡದ ಕಾರಣ ಸರ್ಕಾರ ಪ್ರತಿ ವರ್ಷ 1,000 ಕೋಟಿ ರೂ.ಗಳನ್ನು ಕಳೆದುಕೊಳ್ಳುತ್ತಿದೆ ಎಂದು ಹೇಳಿದರು. ಶೀಘ್ರದಲ್ಲೇ ರೈತರಿಗೆ 9,600 ನಿವೇಶನಗಳನ್ನು ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಇನ್ನೊಂದೆಡೆ ತೆಂಗು ರೈತರು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸಲು ಮುಖ್ಯಮಂತ್ರಿ ಕೇವಲ 10 ಕೋಟಿ ರೂ.ಗಳನ್ನು ಮೀಸಲಿಟ್ಟಿದ್ದಾರೆ ಎಂದು ಹೇಳಿದ ಕಾಂಗ್ರೆಸ್ ಶಾಸಕ





ಕೆ.ಎಂ.ಶಿವಲಿಂಗೇಗೌಡ ಅವರು, ಅದನ್ನು 100 ಕೋಟಿ ರೂ.ಗಳಿಗೆ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

## 56 ಸಾವಿರ ಖಾಲಿ ಹುದ್ದೆ ಭರ್ತಿ

* ನೇಮಕಾತಿಗೆ ಶೀಘ್ರ ಪ್ರಕ್ರಿಯೆ ಶುರು: ಸಚಿವ ಬೋಸರಾಜು

**ಬೆಂಗಳೂರು:** ರಾಜ್ಯದಲ್ಲಿ ಖಾಲಿ ಇರುವ 56 ಸಾವಿರ ಹುದ್ದೆಗಳ ಭರ್ತಿಗೆ ಸರ್ಕಾರ ನಿರ್ಧಾರ ಮಾಡಿದೆ. ಆದಷ್ಟೂ ಬೇಗ ಪ್ರಕ್ರಿಯೆ ಶುರು ಮಾಡಲಾಗುವುದು ಎಂದು ಸಚಿವ ಬೋಸರಾಜು ತಿಳಿಸಿದರು.



ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯ ಶಶೀಲ್ ನಮೋಶಿ ಪ್ರಶ್ನಿಸಿ, ರಾಜ್ಯದಲ್ಲಿ 2.84 ಲಕ್ಷ ಹುದ್ದೆ ಖಾಲಿ ಇವೆ. ಯಾಕೆ ಇಷ್ಟು ಹುದ್ದೆ ಖಾಲಿ ಇವೆ. ಭರ್ತಿ ಮಾಡಲು ಸರ್ಕಾರಕ್ಕೆ ಏನು ಸಮಸ್ಯೆ. ಗುತ್ತಿಗೆ ಆಧಾರದಲ್ಲಿ ನೇಮಕಾತಿ ಮಾಡಲಾಗಿದೆ. ಒಳಮೀಸಲಾತಿ ನೆಪದಿಂದ ನೇಮಕಾತಿ ಮಾಡ್ತಿಲ್ಲ. ಕೋರ್ಟ್ ಸಮಸ್ಯೆ ಪರಿಹಾರ ಮಾಡಿದರೆ 3 ವರ್ಷ ಪ್ರಕ್ರಿಯೆ ನಿಲ್ಲುತ್ತಿರಲಿಲ್ಲ. ಯುವಕರಿಗೆ ಈ ಸರ್ಕಾರ ಅನ್ಯಾಯ ಮಾಡ್ತಿದೆ ಎಂದು ಆರೋಪ ಮಾಡಿದರು.

ಸಿಎಂ ಅವರು 40 ಸಾವಿರ ಪುಟ 2ಕ್ಕೆ

## ಆಡಳಿತದಲ್ಲಿ ಎಐ ಬಳಕೆಗೆ ಸಂಶೋಧನೆ ಅಗತ್ಯ: ಡಿಕೆಶಿ

**ಬೆಂಗಳೂರು:** ಸರ್ಕಾರದ ಆಡಳಿತದಲ್ಲಿ ಎಐ ಬಳಕೆ ಮಾಡಿಕೊಳ್ಳುವ ಬಗ್ಗೆ ಸಂಶೋಧನೆ ಆಗಬೇಕು. ಅಧ್ಯಯನದ ಬಳಿಕ ಎಐ ಬಳಕೆ ಬಗ್ಗೆ ನಿರ್ಧಾರ ಮಾಡುವುದಾಗಿ ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.


ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಭಾರತಿ ಶೆಟ್ಟಿ ಪ್ರಶ್ನೆ ಕೇಳಿದರು. ರಾಜ್ಯದ ಆಡಳಿತ ಸುಧಾರಣೆ ಕುರಿತು ಹಾರನಹಳ್ಳಿ ರಾಮಸ್ವಾಮಿ ವರದಿ ಅನುಷ್ಠಾನ ಸರ್ಕಾರ ಮಾಡಿಲ್ಲ. ವರದಿಯಲ್ಲಿ ಶೇ.15ರಷ್ಟು ಶಿಫಾರಸು ಅನುಷ್ಠಾನ ಮಾಡಿಲ್ಲ. ವರದಿ ಮೂಲೆ ಹಿಡಿದಿದೆ. ಸರ್ಕಾರದ ವ್ಯವಹಾರದಲ್ಲಿ ಎಐ ಅನುಷ್ಠಾನ ಆಗಬೇಕು. ಈ ಬಗ್ಗೆ ಕ್ರಮ ಆಗಬೇಕು ಎಂದು ಮನವಿ ಮಾಡಿದರು.

ಇದಕ್ಕೆ ಡಿಸಿಎಂ ಡಿ.ಕೆ ಶಿವಕುಮಾರ್ ಉತ್ತರ ನೀಡಿ, ಇಡೀ ವಿಶ್ವವೇ ಎಐ ಅಡಿ ಕೆಲಸ ಮಾಡ್ತಿದೆ ಸರ್ಕಾರದ ಆಡಳಿತದಲ್ಲಿ ಎಐ ತರಬೇಕಾದರೆ ರಿಸರ್ಚ್ ಆಗಬೇಕು. ಬಳಿಕ ಅನುಷ್ಠಾನದ ಬಗ್ಗೆ ಚಿಂತನೆ ಮಾಡ್ತೀವಿ ಎಂದರು.

ನಾನು ಸಹ ಎಐ ಬಳಕೆ ಪುಟ 2ಕ್ಕೆ

## ಸಂಪ್‌ಗೆ ಬಿದ್ದು ಮಗು ಸಾವು


**ಬೆಂಗಳೂರು:** ನೀರಿನ ಸಂಪ್‌ಗೆ ಬಿದ್ದು ಎರಡೂವರೆ ವರ್ಷದ ಮಗು ಸಾವನ್ನಪ್ಪಿದ ಘಟನೆ ಬೆಂಗಳೂರು ಉತ್ತರ ತಾಲೂಕಿನ ಬ್ಯಾಡರಹಳ್ಳಿಯಲ್ಲಿ ನಡೆದಿದೆ. ಮೃತ ಮಗುವನ್ನು ಬ್ಯಾಡರಹಳ್ಳಿ ಅಣ್ಣಯ್ಯ ಹಾಗೂ ಋತು ದಂಪತಿಯ ಮಗ ಚಿರಾಗ್ ಎಂದು ಗುರುತಿಸಲಾಗಿದೆ.



ದಂಪತಿ ಸಂಬಂಧಿಕರ ಮದುವೆಗೆ ತೆರಳಲು ರೆಡಿಯಾಗುತ್ತಿದ್ದರು. ಕಾರ್ ತೊಳೆಯಲು ಸಂಪಿನ ಕ್ಯಾಪ್ ತೆರೆದು ಅಣ್ಣಯ್ಯ ಮನೆಯೊಳಗೆ ತೆರಳಿದ್ದ. ಈ ವೇಳೆ ಆಟವಾಡುತ್ತಿದ್ದ ಚಿರಾಗ್ ಸಂಪ್‌ಗೆ ಬಿದ್ದು ಮೃತ ಪಟ್ಟಿದ್ದಾನೆ. ಮನೆಯಿಂದ ಹೊರಬಂದು ನೋಡಿದಾಗ ಘಟನೆ ಬೆಳಕಿಗೆ ಬೆಳಕಿಗೆ ಬಂದಿದೆ. ಈ ಸಂಬಂಧ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಹೋಟೆಲ್ ಗಳಲ್ಲಿ ಗ್ಯಾಸ್ ಸಪ್ಲೈ ಚಾರ್ಜ್ ಗ್ರಾಹಕರಿಗೆ ವರ್ಗಾವಣೆ!

**ಬೆಂಗಳೂರು:** ಇರಾನ್–ಇಸ್ರೇಲ್ ಯುದ್ಧದ ಪರಿಣಾಮದಿಂದ ನಗರದಲ್ಲಿ ಅಡುಗೆ ಅನಿಲದ ಅಭಾವ ಉಂಟಾಗಿದೆ. ಇದರ ಪರಿಣಾಮ ಗ್ರಾಹಕರಿಗೂ ತಟ್ಟುತ್ತಿದೆ. ಹೋಟೆಲ್ ಒಂದರಲ್ಲಿ ಬ್ರೇಕ್‌ಫಾಸ್ಟ್ ಮಾಡಿದವರಿಗೆ ಗ್ಯಾಸ್ ಸಪ್ಲೈ ಚಾರ್ಜ್ ಕೂಡ ಸೇರಿಸಿ ಬಿಲ್ ನೀಡಲಾಗಿದೆ. ಇದು ಗ್ರಾಹಕರ ಆಕ್ರೋಶಕ್ಕೆ ಕಾರಣವಾಗಿದೆ.




ಗ್ರಾಹಕರೊಬ್ಬರು ಆಂಧ್ರ ಮೀಲ್ಸ್ ಹೋಟೆಲ್‌ಗೆ ತೆರಳಿ ಬ್ರೇಕ್‌ಫಾಸ್ಟ್ ತೆಗೆದುಕೊಂಡ ಬಳಿಕ ಅದರಲ್ಲಿ ಗ್ಯಾಸ್ ಸಪ್ಲೈ ಚಾರ್ಜ್ ಹೆಚ್ಚುವರಿಯಾಗಿ ಸೇರಿದ್ದನ್ನು ನೋಡಿ ಬೇಸರ ವ್ಯಕ್ತಪಡಿಸಿದ್ದಾರೆ. ಬಿಲ್ ಅನ್ನು ಬೆಂಗಳೂರು ಸಿಟಿ ಪೊಲೀಸರಿಗೆ ಟ್ಯಾಗ್ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

ವೈರಲ್ ಆಗುತ್ತಿರುವ ಬಿಲ್‌ಗೆ ನೆಟ್ಟಿಗರು ಕಾಮೆಂಟ್ ಮಾಡಿದ್ದಾರೆ. ಇದೊಂದು ದೊಡ್ಡ ಸ್ಕ್ಯಾಮ್, ಸಾರ್ವಜನಿಕರನ್ನು ಲೂಟಿ ಮಾಡುವ ಕೆಲಸ ಎಂದು ಅಸಮಾಧಾನ ಹೊರಹಾಕಿದರು.

## ಗ್ಯಾಸ್ ಸಿಲಿಂಡರ್ ಕದ್ದಿದ್ದ ಇಬ್ಬರು ಕಳ್ಳರ ಬಂಧನ

**ರಾಮನಗರ:** ಗ್ಯಾಸ್ ಸಿಲಿಂಡರ್ ಸರಬರಾಜು ವಾಹನದಲ್ಲಿ ಸಿಲಿಂಡರ್ ಕದ್ದು ಎಸ್ಕೇಪ್ ಆಗಿದ್ದ ಇಬ್ಬರು ಕಳ್ಳರನ್ನು ಬಿಡದಿ ಪೊಲಿಸರು ಬಂಧಿಸಿದ್ದಾರೆ. ಮಹೇಶ್ ನಾಯಕ್ (19), ಗೋವಿಂದರಾಜು (20) ಬಂಧಿತ ಆರೋಪಿಗಳು. ರಾಮನಗರ ತಾಲೂಕಿನ ಬನ್ನಿಕುಪ್ಪೆ ಗ್ರಾಮದಲ್ಲಿ ಮನೆಮುಂದೆ ನಿಂತಿದ್ದ ಗ್ಯಾಸ್ ಸರಬರಾಜು ವಾಹನದಲ್ಲಿ 8 ಸಿಲಿಂಡರ್ ಕದ್ದು ಖದೀಮರು ಎಸ್ಕೇಪ್ ಆಗಿದ್ದರು. ಈ ಸಂಬಂಧ ಬಿಡದಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಕಾರ್ಯಾಚರಣೆ ನಡೆಸಿ ಇಬ್ಬರು ಆರೋಪಿಗಳ ಬಂಧನ ಮಾಡಲಾಗಿದೆ. ಆರೋಪಿಗಳಿಂದ 8 ಗ್ಯಾಸ್ ಸಿಲಿಂಡರ್‌ಗಳು ಹಾಗೂ ಕೃತ್ಯಕ್ಕೆ ಬಳಸಿದ್ದ 1 ಬೈಕ್ ವಶಕ್ಕೆ ಪಡೆಯಲಾಗಿದೆ. ಆರೋಪಿಗಳನ್ನ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

## ರೂಪಾಯಿ ಮೌಲ್ಯ ದಾಖಲೆ ಕುಸಿತ

**ನವದೆಹಲಿ:** ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ಮುಂದುವರಿದ ಪರಿಣಾಮ ಕಚ್ಚಾತೈಲ ಬೆಲೆಯಲ್ಲಿ ತೀವ್ರ ಏರಿಕೆ ಮತ್ತು ಡಾಲರ್‌ಗೆ ಬೇಡಿಕೆ ಹೆಚ್ಚಳದಿಂದ ಗುರುವಾರ ಅಮೆರಿಕದ ಡಾಲರ್ ಎದುರು ಭಾರತದ ರೂಪಾಯಿ ಸಾರ್ವಕಾಲಿಕ ಕನಿಷ್ಠ ಮಟ್ಟಕ್ಕೆ ಕುಸಿತ ಕಂಡಿದೆ.


ಜಾಗತಿಕ ಕಚ್ಚಾ ತೈಲ ಬೆಲೆಗಳು ರಾತ್ರಿಯಿಡೀ ಏರುತ್ತಲೇ ಇದ್ದುದರಿಂದ ಡಾಲರ್ ಎದುರು ರೂಪಾಯಿ ಮೌಲ್ಯ 35 ಪೈಸೆ ಕುಸಿದು ದಿನದ ಕನಿಷ್ಠ ಮಟ್ಟ 92.36ಕ್ಕೆ ತಲುಪಿತು. ದೇಶೀಯ ಷೇರು ಮಾರುಕಟ್ಟೆ ಕುಸಿತದಿಂದ ಡಾಲರ್ ಮತ್ತಷ್ಟು ಪ್ರಬಲವಾಗುತ್ತಿದೆ. ಈಕ್ವಿಟಿ ಮಾರುಕಟ್ಟೆಗಳಲ್ಲಿ ವಿದೇಶಿ ಬಂಡವಾಳ ಹೂಡಿಕೆ ಹಿಂತೆಗೆತ ಹೆಚ್ಚುತ್ತಿರುವುದು ವಹಿವಾಟು ದುರ್ಬಲಗೊಳ್ಳಲು ಕಾರಣವಾಗಿದೆ.

ಅಂತರಬ್ಯಾಂಕ್ ವಿದೇಶಿ ವಿನಿಮಯದಲ್ಲಿ ರೂಪಾಯಿ ಮೌಲ್ಯವು 92.25ರಿಂದ ಆರಂಭವಾಯಿತು. ಬಳಿಕ ಕುಸಿತ ಕಂಡು, ಯುಎಸ್ ಡಾಲರ್ ಎದುರು ಸಾರ್ವಕಾಲಿಕ ಕನಿಷ್ಠವಾದ 92.36ಕ್ಕೆ ಇಳಿಯಿತು. ಈ ಹಿಂದಿನ ಅಂದರೆ ಮಾರ್ಚ್ 9ರಂದು ಸಾರ್ವಕಾಲಿಕ ಕನಿಷ್ಠವಾಗಿದ್ದ 92.35 ದರವನ್ನು ಮೀರಿದೆ.

## ತಜ್ಞರ ವರದಿ ಪಡೆದು ಸಫಾರಿ ಆರಂಭ

### ಮಾನವ–ವನ್ಯಜೀವಿ ಸಂಘರ್ಷ ತಪ್ಪಿಸಲು ಬಂದ್ | ಅರಣ್ಯ ಸಚಿವ ಈಶ್ವರ್ ಖಂಡ್ರೆ

**ಬೆಂಗಳೂರು:** ಬಂಡೀಪುರ ಮತ್ತು ನಾಗರಹೊಳೆಯಲ್ಲಿ ಸಫಾರಿಯನ್ನು ತಾತ್ಕಾಲಿಕವಾಗಿ ಬಂದ್ ಮಾಡಿ, ಈಗ ಷರತ್ತು ಬದ್ಧವಾಗಿ ಪುನಾರಂಭ ಮಾಡಿರುವ ವಿಚಾರದಲ್ಲಿ ಅರಣ್ಯ ಸಚಿವ ಈಶ್ವರ್ ಖಂಡ್ರೆ ಸಮರ್ಥಿಸಿಕೊಂಡಿದ್ದಾರೆ.



ವಿಧಾನಸಭೆ ಪ್ರಶ್ನೋತ್ತರ ಕಲಾಪದಲ್ಲಿ ಮಧ್ಯಪ್ರವೇಶಿಸಿದ ಪ್ರತಿಪಕ್ಷ ನಾಯಕ ಆರ್.ಅಶೋಕ್ ಅವರು, ಸಫಾರಿ ಸ್ಥಗಿತಗೊಳಿಸಿದ್ದರಿಂದ 4 ಸಾವಿರಕ್ಕೂ ಹೆಚ್ಚು ಜನರು ಉದ್ಯೋಗ ಕಳೆದುಕೊಂಡಿದ್ದರು. ಸಫಾರಿ ದೇಶಾದ್ಯಂತ ಹಲವು ವರ್ಷದಿಂದ ನಡೆಯುತ್ತಿದೆ. ಒಂದು ಸಮೀಕ್ಷೆಯನ್ನೂ ಮಾಡದೆ ಸಫಾರಿಯನ್ನು ಏಕಾಏಕಿ ನಿಲ್ಲಿಸಿದ್ದು ಸರಿಯಲ್ಲ ಎಂದು ಟೀಕಿಸಿದರು.



ಇದಕ್ಕೆ ಉತ್ತರಿಸಿದ ಅರಣ್ಯ ಸಚಿವರು, ಸಫಾರಿಯನ್ನು ಏಕಾಏಕಿ ನಿಲ್ಲಿಸಲಿಲ್ಲ. ಕಳೆದ ನವೆಂಬರ್ ತಿಂಗಳಲ್ಲಿ 15 ದಿನಗಳ ಅಂತರದಲ್ಲಿ ಮೂರು ಅಮೂಲ್ಯ ಜೀವಹಾನಿ ಆಗಿತ್ತು. ಒಬ್ಬರು ಶಾಶ್ವತವಾಗಿ ಅಂಗವಿಕಲರಾದರು, ಹುಲಿಗಳು ಕಾಡಿನಿಂದ ಹೊರಗೆ ಬಂದು ದಾಳಿ ಮಾಡುತ್ತಿದ್ದವು. ಜನರ ಅಮೂಲ್ಯ ಜೀವ ರಕ್ಷಣೆ ನಿಟ್ಟಿನಲ್ಲಿ ಈ ಕ್ರಮ ಕೈಗೊಳ್ಳಲಾಯಿತು ಎಂದು ಸ್ಪಷ್ಟಪಡಿಸಿದರು.

ಚಾಮರಾಜನಗರದಲ್ಲಿ ನವೆಂಬರ್‌ನಲ್ಲಿ ಈ ಸಂಬಂಧ ಸಭೆ ನಡೆಸಿದಾಗ ಪುಟ 2ಕ್ಕೆ

### ಹುಲಿ ಸಂಖ್ಯೆ 175ಕ್ಕೆ ಏರಿಕೆ

1972ರಲ್ಲಿ ಬಂಡೀಪುರದಲ್ಲಿ ಕೇವಲ 12 ಹುಲಿಗಳಿದ್ದವು. ಕಳೆದ 3 ವರ್ಷದ ಹಿಂದೆ ಗಣತಿ ನಡೆದಾಗ ಅಲ್ಲಿ 150 ಹುಲಿ ಇದ್ದವು. ಈಗ ಹುಲಿಗಳ ಸಂಖ್ಯೆ 175ಕ್ಕೆ ಏರಿಕೆಯಾಗಿದೆ. ಕಾಡಿನ ಧಾರಣಾ ಸಾಮರ್ಥ್ಯ ತಿಳಿಯಲು ತಜ್ಞರ ಸಮಿತಿಯಿಂದ ವರದಿ ತರಿಸಿಕೊಳ್ಳುತ್ತಿದ್ದೇವೆ. ಕಾಡು ಹೆಚ್ಚುತ್ತಿಲ್ಲ. ಬದಲಾಗಿ ಕ್ಷೀಣಿಸುತ್ತಿದೆ. ಸಫಾರಿ ಪುನಾರಂಭ ಮಾಡಿದ ಬಳಿಕ ಪ್ರತಿಷ್ಠಾನಕ್ಕೆ ಸಫಾರಿಯಿಂದ ಬರುವ ಆದಾಯದಲ್ಲಿ ಶೇ.35ರಷ್ಟನ್ನು ಕಾಡಿನಂಚಿನ ಗ್ರಾಮದಲ್ಲಿ ಜನಸಂಪರ್ಕ ಸಭೆ ಮಾಡಲು, ಶಿಕ್ಷಣ, ಮೂಲಸೌಕರ್ಯ ಹೆಚ್ಚಳಕ್ಕೆ, ಉದ್ಯೋಗ ಸೃಷ್ಟಿಗೆ ಬಳಸಲು ಸೂಚಿಸಲಾಗಿದೆ ಎಂದು ಸಚಿವ ಈಶ್ವರ್ ಖಂಡ್ರೆ ಸದನಕ್ಕೆ ತಿಳಿಸಿದರು.


## ನೀರಿನ ಕ್ಯಾನ್‌ಗಳಲ್ಲಿ ಪೆಟ್ರೋಲ್ ಸಂಗ್ರಹ!

ಚೆನ್ನೈ: ತಮಿಳುನಾಡಿನಲ್ಲಿ ಬಂಕ್ ಮುಂದೆ ಜನರು ಸಾಲುಗಟ್ಟಿ ನಿಂತು ನೀರಿನ ಕ್ಯಾನ್ ಗಳನ್ನು ತಂದು ಪೆಟ್ರೋಲ್ ಹಾಕಿಸುತ್ತಿದ್ದಾರೆ. ಈಗ ಸಿಲಿಂಡರ್‌ಗೆ ಸಮಸ್ಯೆಯಾಗಿದೆ ಮುಂದೆ ಪೆಟ್ರೋಲ್ ಕೂಡ ಸಿಗುವುದಿಲ್ಲ. ದರ ಭಾರೀ ಏರಿಕೆಯಾಗಲಿದೆ ಎಂಬ ಗಾಳಿ ಸುದ್ದಿ ವೈರಲ್ ಆದ ಬೆನ್ನಲ್ಲೇ ತಮಿಳುನಾಡಿನ ಪೆಟ್ರೋಲ್ ಬಂಕ್ ಮುಂದೆ ಜನ ಪೆಟ್ರೋಲ್ ಹಾಕಿಸಲು ಮುಗಿಬಿದ್ದಿದ್ದಾರೆ.



ವಾಹನಗಳಿಗೆ ಫುಲ್ ಟ್ಯಾಂಕ್ ಪೆಟ್ರೋಲ್ ತುಂಬಿಸುವುದರ ಜೊತೆಗೆ ಮನೆಯಲ್ಲಿದ್ದ 20 ಲೀಟರ್ ವಾಟರ್ ಕ್ಯಾನ್ ತಂದು ಪೆಟ್ರೋಲ್ ತುಂಬಿಸಿಕೊಂಡು ಹೋಗಿದ್ದಾನೆ. ತಮಿಳುನಾಡಿನ ಪೆಟ್ರೋಲ್ ಬಂಕ್‌ನ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಈಗ ಫುಲ್ ವೈರಲ್ ಆಗಿದೆ. ಮಧ್ಯಪ್ರಾಚ್ಯದಲ್ಲಿ ತೈಲ ಬಿಕ್ಕಟ್ಟು ಸಂಭವಿಸಿದರೂ ಭಾರತಕ್ಕೆ ಯಾವುದೇ ಸಮಸ್ಯೆ ಇಲ್ಲ. ನಮ್ಮಲ್ಲಿ ತೈಲಗಳನ್ನು ತುರ್ತು ದಾಸ್ತಾನು ಸಂಗ್ರಹಿಸಿ ಇಡಲಾಗಿದೆ. ಬೇರೆ ದೇಶಗಳಿಂದಲೂ ಕಚ್ಚಾ ತೈಲ ಬರುತ್ತಿದೆ. ಯಾವುದೇ ಸಮಸ್ಯೆ ಇಲ್ಲ ಎಂದು ಕೇಂದ್ರ ಸರ್ಕಾರ ಈಗಾಗಲೇ ಸ್ಪಷ್ಟಪಡಿಸಿದೆ. ಪುಟ 2ಕ್ಕೆ


## ಆನೆ ದಾಳಿಗೆ ರೈತ ಬಲಿ



**ಮಡಿಕೇರಿ:** ಕೊಡಗಿನಲ್ಲಿ ಕಾಡಾನೆ ದಾಳಿ ಪ್ರಕರಣ ಹೆಚ್ಚುತ್ತಿವೆ. ವಿರಾಜಪೇಟೆ ತಾಲೂಕಿನ ಸಿದ್ದಾಪುರ ಸಮೀಪ ಹೈಸ್ಕೂಲ್ ಪೈಸಾರಿಯಲ್ಲಿ ಕಾಫಿ ತೋಟಕ್ಕೆ ತೆರಳಿದ್ದ ಕಾಫಿ ಬೆಳೆಗಾರನ ಮೇಲೆ ಆನೆ ದಾಳಿ ಮಾಡಿದೆ. ಆನೆ ದಾಳಿಗೊಳಗಾದ ರೈತ ಗಣಪತಿ (49) ಸ್ಥಳದಲ್ಲೇ ಪುಟ 2ಕ್ಕೆ

## ಬಜೆಟ್ ಬಗ್ಗೆ ಕೈ ಶಾಸಕ ಇಕ್ಬಾಲ್ ಅಸಮಾಧಾನ

**ರಾಮನಗರ:** ರಾಜ್ಯ ಬಜೆಟ್ ನನಗೆ ಸಮಾಧಾನ ತಂದಿಲ್ಲ. ಬಜೆಟ್‌ಗೆ ಮುಂಚೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ನನ್ನ ಕ್ಷೇತ್ರದ ಸಮಸ್ಯೆಗಳ ಬಗ್ಗೆ ಮನವರಿಕೆ ಮಾಡಿಕೊಟ್ಟಿದ್ದೆ. ವಿಶೇಷ ಅನುದಾನಕ್ಕೆ ಮನವಿ ಮಾಡಿದ್ದೆ. ಪಾರದರ್ಶಕವಾಗಿ ಅನುದಾನ ಕೊಡುವ ನಂಬಿಕೆ ಹುಸಿಯಾಗಿದೆ ಎಂದು ಡಿ.ಕೆ.ಶಿವಕುಮಾರ್ ಆಪ್ತ ಶಾಸಕ ಎಚ್.ಎ.ಇಕ್ಬಾಲ್ ಹುಸೇನ್ ಅಸಮಾಧಾನ ವ್ಯಕ್ತಪಡಿಸಿದರು.



ತಾಲ್ಲೂಕಿನ ಮೊಟ್ಟೆದೊಡ್ಡಿಯಲ್ಲಿ ಗುರುವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಮಳೆಗೆ ಭಕ್ಷಿಕೆರೆ ಒಡೆದು ಪ್ರವಾಹ ಉಂಟಾಗಿದ್ದರ ಬಗ್ಗೆ ಫೋಟೊ ಸಮೇತ ಮುಖ್ಯಮಂತ್ರಿಗೆ ಮಾಹಿತಿ ನೀಡಿದ್ದೆ. ಕ್ಷೇತ್ರದ ರಸ್ತೆ, ಚರಂಡಿ ಹಾಗೂ ನೀರಾವರಿ ಅಗತ್ಯಗಳ ಕುರಿತು ನಾಲ್ಕೈದು ಬಾರಿ ಮನವಿ ಮಾಡಿದ್ದೆ. ಹಿಂದೆ ಇದ್ದವರು ಕ್ಷೇತ್ರವನ್ನು ಅಭಿವೃದ್ಧಿ ಪುಟ 2ಕ್ಕೆ

## ಜಿಲ್ಲೆಯಲ್ಲಿ ಗ್ಯಾಸ್ ಸಮಸ್ಯೆ ಇಲ್ಲ

**ಮೈಸೂರು:** ಗೃಹ ಬಳಕೆ ಅಡುಗೆ ಅನಿಲದ ಪೂರೈಕೆಯಲ್ಲಿ ಯಾವುದೇ ತೊಂದರೆ ಇಲ್ಲ. ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಭರವಸೆ ನೀಡಿದರು.



**ಗೃಹ ಬಳಕೆ ಸಿಲಿಂಡರ್ ಪೂರೈಕೆಗೆ ಆತಂಕ ಬೇಡ: ಜಿಲ್ಲಾಧಿಕಾರಿ**

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ತೈಲ ಸರಬರಾಜು ಕಂಪನಿಗಳಾದ ಎಚ್.ಪಿ., ಬಿ.ಪಿ. ಸಿ.ಎಲ್, ಐ.ಓ.ಸಿ. ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರಿಂದ ಮಾಹಿತಿ ಪಡೆದು ಜಿಲ್ಲೆಯಲ್ಲಿ ಗೃಹಬಳಕೆ ಸಿಲಿಂಡರ್ ಸರಬರಾಜಿನಲ್ಲಿ ಪ್ರಸ್ತುತ ಯಾವುದೇ ವ್ಯತ್ಯಯ ಉಂಟಾಗಿಲ್ಲ ಎಂದು ತಿಳಿಸಿದರು. ಸಾರ್ವಜನಿಕರು ಗೃಹಬಳಕೆ ಅನಿಲದ ಕೊರತೆ ಉಂಟಾಗಬಹುದು ಪುಟ 2ಕ್ಕೆ




## ಸಫಾರಿ ಬಂದ್: 6 ಕೋಟಿ ಆದಾಯ ನಷ್ಟ

### ಬಂಡೀಪುರ ಮತ್ತು ನಾಗರಹೊಳೆ ಅರಣ್ಯದಲ್ಲಿ ತಾತ್ಕಾಲಿಕ ಸ್ಥಗಿತ

**ಮೈಸೂರು:** ಬಂಡೀಪುರ ಹುಲಿ ಮೀಸಲು ಅರಣ್ಯ ಮತ್ತು ನಾಗರಹೊಳೆ ಹುಲಿ ಮೀಸಲು ಪ್ರದೇಶಗಳಲ್ಲಿ ನವೆಂಬರ್ 7ರಿಂದ ಫೆಬ್ರವರಿ 21 ರವರೆಗೆ ವನ್ಯಜೀವಿ ಸಫಾರಿ ಸೇವೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದ್ದರಿಂದ ಒಟ್ಟಾರೆ ಸುಮಾರು 6 ಕೋಟಿ ರೂ. ಆದಾಯ ನಷ್ಟವಾಗಿದೆ.

ಈ ಅವಧಿಯಲ್ಲಿ ಸಫಾರಿ ಸ್ಥಗಿತಗೊಳಿಸುವುದರಿಂದ ಅರಣ್ಯ ಇಲಾಖೆಗೆ ಬರುವ ಆದಾಯದ ಮೇಲೆ ಗಮನಾರ್ಹವಾಗಿ ಪರಿಣಾಮ ಬೀರಿದೆ. ಎರಡು ಮೀಸಲು ಪ್ರದೇಶಗಳಲ್ಲಿ, ಬಂಡೀಪುರ ಹುಲಿ ಮೀಸಲು ಪ್ರದೇಶವು ಸುಮಾರು 2.5 ಕೋಟಿ ನಷ್ಟವನ್ನು ಅನುಭವಿಸಿದೆ.

ನಾಗರಹೊಳೆ ಹುಲಿ ಮೀಸಲು ಪ್ರದೇಶದಲ್ಲಿ ಸುಮಾರು 3.5 ಕೋಟಿ ನಷ್ಟ ಉಂಟಾಗಿದೆ. ಎರಡು ಸಂರಕ್ಷಿತ ಅರಣ್ಯ ಪ್ರದೇಶಗಳ ಸುತ್ತಮುತ್ತಲಿನ ಅಂಚಿನ ಹಳ್ಳಿಗಳಲ್ಲಿ ಹುಲಿಗಳ ಓಡಾಟದ ಸರಣಿ ಘಟನೆಗಳು ವರದಿಯಾದ ನಂತರ ಸಫಾರಿ ಕಾರ್ಯಾಚರಣೆಗಳನ್ನು ಸ್ಥಗಿತಗೊಳಿಸುವ ನಿರ್ಧಾರ ತೆಗೆದುಕೊಳ್ಳಲಾಗಿದೆ. ಅರಣ್ಯ ಗಡಿಯಲ್ಲಿರುವ ಹಳ್ಳಿಗಳಲ್ಲಿ ಹುಲಿಗಳು ಮೂವರನ್ನು




ಕೊಂದಿದ್ದವು. ಹಲವು ಮಂದಿ ಗಾಯಗೊಂಡಿದ್ದರು. ಜಾನುವಾರುಗಳನ್ನು ಬೇಟೆಯಾಡಿದ ನಂತರ ಈ ಘಟನೆಗಳು ನಿವಾಸಿಗಳು ಮತ್ತು ಅಧಿಕಾರಿಗಳಲ್ಲಿ ವ್ಯಾಪಕ ಕಳವಳವ ಉಂಟುಮಾಡಿದವು.

ಹುಲಿ ದಾಳಿ ಘಟನೆಗಳ ನಂತರ, ಅರಣ್ಯ ಸಚಿವ ಈಶ್ವರ್ ಖಂಡ್ರೆ ಮುನ್ನೆಚ್ಚರಿಕೆ ಕ್ರಮವಾಗಿ ಸಫಾರಿ ಚಟುವಟಿಕೆಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವುದಾಗಿ ಮತ್ತು ಈ ಪ್ರದೇಶದಲ್ಲಿ ಹುಲಿಗಳ ಚಲನವಲನಗಳ ಮೇಲ್ವಿಚಾರಣೆಯನ್ನು ತೀವ್ರಗೊಳಿಸಲು ಅಧಿಕಾರಿಗಳಿಗೆ ತಿಳಿಸಿರುವುದಾಗಿ ಘೋಷಿಸಿದರು. ಪುಟ 2ಕ್ಕೆ

## ಕೋಳಿ ಮೊಟ್ಟೆ ಬೆಲೆ ಭಾರೀ ಕುಸಿತ

### ಮಧ್ಯಪ್ರಾಚ್ಯ ದೇಶಗಳಿಗೆ ರಫ್ತು ಸ್ಥಗಿತ | ಗ್ರಾಹಕರಿಗೆ ಸಂತಸ, ಕೋಳಿ ಸಾಕಾಣಿಕೆದಾರರ ಆತಂಕ

**ಮೈಸೂರು:** ಕೆಲವು ದಿನಗಳಿಂದ ಕೋಳಿ ಮೊಟ್ಟೆ ಬೆಲೆಯಲ್ಲಿ ಭಾರೀ ಇಳಿಕೆ ಕಂಡಿದೆ. 7.5 ರೂ. ಇದ್ದ ಮೊಟ್ಟೆ ಬೆಲೆ ಈಗ 5 ರೂ.ಗೆ ಇಳಿಕೆಯಾಗಿದೆ. ಇದು ಗ್ರಾಹಕರಿಗೆ ಸಂತಸ ತಂದಿದೆ. ಆದರೆ, ಕೋಳಿ ಸಾಕಾಣಿಕೆದಾರರಲ್ಲಿ ಆತಂಕ ಮೂಡಿಸಿದೆ.

ಮಧ್ಯಪ್ರಾಚ್ಯ ಯುದ್ಧದ ಹಿನ್ನೆಲೆ ಯಲ್ಲಿ ರಫ್ತು ವ್ಯತ್ಯಯ, ಹಬ್ಬದ ಕಾಲದ ಬೇಡಿಕೆ ಕುಸಿತ ಹಾಗೂ ಬೇಸಿಗೆ ಪರಿಣಾಮ ಮೊಟ್ಟೆ ಬೆಲೆ ಇಳಿಕೆಗೆ ಕಾರಣವಾಗಿದೆ ಎನ್ನಲಾಗಿದೆ. ಕಳೆದ ಸುಮಾರು 15 ದಿನಗಳಲ್ಲಿ ರಾಜ್ಯದ ಹಲವು ಭಾಗಗಳಲ್ಲಿ ಮೊಟ್ಟೆ ದರದಲ್ಲಿ ದೊಡ್ಡ ಮಟ್ಟದ ಇಳಿಕೆ ಕಂಡುಬಂದಿದೆ ಎಂದು ರಾಷ್ಟ್ರೀಯ ಮೊಟ್ಟೆ ಸಮನ್ವ ಯ ಸಮಿತಿ (ಎನ್‌ಇಸಿಸಿ) ತಿಳಿಸಿದೆ.



ರಾಜ್ಯದಲ್ಲಿ ಪ್ರತಿದಿನ ಸುಮಾರು 2.2 ಕೋಟಿ ಮೊಟ್ಟೆಗಳು ಉತ್ಪಾದನೆಯಾಗುತ್ತವೆ. ಈ ಮೊಟ್ಟೆಗಳ ಒಂದು ಭಾಗವನ್ನು ತಮಿಳುನಾಡಿನ ನಾಮಕ್ಕಲ್ ಕೇಂದ್ರಕ್ಕೆ ಕಳುಹಿಸಿ ಅಲ್ಲಿಂದ ಗಲ್ಫ್ ರಾಷ್ಟ್ರಗಳಿಗೆ ರಫ್ತು ಮಾಡಲಾಗುತ್ತದೆ. ನಾಮಕ್ಕಲ್‌ನಿಂದ ದಿನಕ್ಕೆ ಸುಮಾರು 70 ಲಕ್ಷದಿಂದ 1 ಕೋಟಿ ಮೊಟ್ಟೆಗಳು ಗಲ್ಫ್ ದೇಶಗಳಿಗೆ ರಫ್ತಾಗುತ್ತವೆ. ರಾಜ್ಯದಲ್ಲಿ ಹೊಸಪೇಟೆ ಮೊಟ್ಟೆ ಉತ್ಪಾದನೆಯಲ್ಲಿ ಪ್ರಮುಖ ಸ್ಥಾನದಲ್ಲಿದೆ. ನಂತರದ ಸ್ಥಾನ ವನ್ನು ಮೈಸೂರು ಪಡೆದುಕೊಂಡಿದೆ. ಆದರೆ, ಪುಟ 2ಕ್ಕೆ

# ಪಾಲಿಕೆಯಿಂದ 70 ಅಕ್ರಮ ಬೀದಿ ಅಂಗಡಿಗಳ ತೆರವು





ಮೈಸೂರು: ಬೆಳ್ಳಂಬೆಳ್ಳಗ್ಗೆ ನಗರಪಾಲಿಕೆ ಕಾರ್ಯಾಚರಣೆಯಲ್ಲಿ ನಡೆಸಿದ್ದು, ವಲಯ ಕಚೇರಿ 5ರ ವಿಜಯ ನಗರ ನೀರಿನ ಟ್ಯಾಂಕ್ ಬಳಿ ಹೈಟೆನ್ಷನ್ ವಿದ್ಯುತ್ ಮಾರ್ಗ ಉದ್ಯಾನವನದ ಕೆಳಗೆ ಬೀದಿ ವ್ಯಾಪಾರಿಗಳು ಸ್ಥಾಪಿಸಿದ್ದ 70ಕ್ಕೂ ಅನಧಿಕೃತ ಅಂಗಡಿಗಳನ್ನು ತೆರವುಗೊಳಿಸಿತು.

ಅಭಯ ಸ್ಕ್ವಾಡ್ ಸಹಾಯದಿಂದ ಎಂಸಿಸಿ ಅಧಿಕಾರಿಗಳು ಐದು ಟಿಪ್ಪರ್‌ಗಳು, ನಾಲ್ಕು ಟ್ರ್ಯಾಕ್ಟರ್‌ಗಳು ಮತ್ತು ಸಣ್ಣ ಸರಕು ವಾಹನಗಳನ್ನು ತೆರವು ಮಾಡಿದರು. ಎಂಸಿಸಿ ವಲಯ –5 ರ ಸಹಾಯಕ ಆಯುಕ್ತ ಮಂಜುನಾಥ್ ರೆಡ್ಡಿ ನೇತೃತ್ವದಲ್ಲಿ ಬೆ.6 ಗಂಟೆಗೆ ಕಾರ್ಯಾಚರಣೆ ನಡೆಯಿತು. ಈ ವೇಳೆ 70ಕ್ಕೂ ಹೆಚ್ಚು ಅಂಗಡಿಗಳನ್ನು ಕೆಡವಲಾಯಿತು. ಸುದ್ದಿ ಹರಡುತ್ತಿದ್ದಂತೆ, ನೂರಕ್ಕೂ ಹೆಚ್ಚು ಬೀದಿ ವ್ಯಾಪಾರಿಗಳು ಸ್ಥಳದಲ್ಲಿ ಜಮಾಯಿಸಿ ಪ್ರತಿಭಟನೆ ನಡೆಸಿದರು. ಪೂರ್ವ ಸೂಚನೆ ಇಲ್ಲದೆ ತೆರವು ಕಾರ್ಯ ನಡೆದಿದೆ ಎಂದು ಆರೋಪಿಸಿದರು. ಎಸಿ ಮಂಜು ನಾಥ್ ರೆಡ್ಡಿ ಮತ್ತು ಅಭಿವೃದ್ಧಿ ಅಧಿಕಾರಿ ಹಿತೇಶ್ ಅವರ ವಾಹನಗಳನ್ನು ತಡೆದು ಪ್ರತಿಭಟಿಸಲು ಯತ್ನಿಸಿದರು. ವಿಜಯನಗರ ಪೊಲೀಸರು ಗುಂಪನ್ನು ಚದುರಿಸಿದರು. ಸಹಾಯಕ ಆಯುಕ್ತ ಮಂಜುನಾಥ ರೆಡ್ಡಿ ಮಾತನಾಡಿ, ಹತ್ತು ದಿನಗಳ ಹಿಂದೆಯಷ್ಟೇ, ನಗರದ ಬೀದಿ ವ್ಯಾಪಾರಿಗಳ ಸಮಿತಿಯ ಸಭೆಯನ್ನು ನಡೆಸಲಾಯಿತು ಮತ್ತು ಮಾರಾಟಗಾರರಿಗೆ ತಮ್ಮ ವ್ಯವಹಾರವನ್ನು ಬೇರೆ ಸ್ಥಳಕ್ಕೆ ಸ್ಥಳಾಂತರಿಸಲು ಸೂಚಿಸಲಾಯಿತು. ಅಂಗಡಿಗಳು ಹೈಟೆನ್ಷನ್ ವಿದ್ಯುತ್ ಮಾರ್ಗದ ಕೆಳಗೆ ಕಾರ್ಯನಿರ್ವಹಿಸುತ್ತಿದ್ದರಿಂದ, ಸಂಭಾವ್ಯ ಅಪಾಯಗಳ ಬಗ್ಗೆ ಸಿಇಎಸ್‌ಸಿ ಅಧಿಕಾರಿಗಳು ಎಚ್ಚರಿಕೆ ನೀಡಿದ್ದರು. ಇದಲ್ಲದೆ, ಎಲ್ಲಾ ಅಂಗಡಿಗಳಲ್ಲಿ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್‌ಗಳನ್ನು ಅಕ್ರಮವಾಗಿ ಬಳಸಲಾಗುತ್ತಿತ್ತು. ಆದ್ದರಿಂದ ಮೈಸೂರು ಅರಮನೆ ಬಳಿ ಇತ್ತೀಚೆಗೆ ಸಂಭವಿಸಿದ ಸ್ಫೋಟದಂತಹ ಯಾವುದೇ ಘಟನೆಯನ್ನು ತಡೆಗಟ್ಟಲು ಮುನ್ನೆಚ್ಚರಿಕೆ ಕ್ರಮವಾಗಿ ತೆರವು ಕಾರ್ಯಾಚರಣೆ ನಡೆಸಲಾಯಿತು ಎಂದರು.

**ಪರ್ಯಾಯ ವ್ಯವಸ್ಥೆಗೆ ಆಗ್ರಹ**

**ಹಲವು ವರ್ಷಗಳಿಂದ ಇದನ್ನೇ ನಂಬಿ ವ್ಯಾಪಾರ ಮಾಡುತ್ತಿದ್ದೇವೆ. ಪರ್ಯಾಯ ವ್ಯವಸ್ಥೆ ಕಲ್ಪಿಸಿಕೊಡದ ಪಾಲಿಕೆ ಏಕಾಏಕಿ ಧ್ವಂಸ ಮಾಡಿರುವುದು ಸರಿಯಲ್ಲ. ಹೀಗಾಗಿ ಸೂಕ್ತ ವ್ಯವಸ್ಥೆ ಮಾಡಿಕೊಡುವಂತೆ ವ್ಯಾಪಾರಸ್ಥರು ಕೋರಿದರು.**

# ಸ್ತ್ರೀ ಗೆ ಶಿಕ್ಷಣವೇ ಶಕ್ತಿ: ಸೀಮಾಲಾಟ್ಕರ್

ಮೈಸೂರು: ಇಂದಿನ ಯುಗದಲ್ಲಿ ಸ್ತ್ರೀಯರಿಗೆ ನಾವು ನೀಡಬಹುದಾದ ದೊಡ್ಡ ಶಕ್ತಿಯೆಂದರೆ ಅದು ಶಿಕ್ಷಣವಾಗಿದ್ದು, ಅದನ್ನು ಎಲ್ಲರಿಗೂ ಸಿಗುವ ನಿಟ್ಟಿನಲ್ಲಿ ನಾವು ಚಿಂತನೆ ನಡೆಸಬೇಕಿದೆ ಎಂದು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಹೇಳಿದರು.

ಮಾನಸಗಂಗೋತ್ರಿಯ ಮೈಸೂರು ವಿಶ್ವವಿದ್ಯಾನಿಲುಂದ ಮಹಿಳಾ ಅಧ್ಯಯನ ಕೇಂದ್ರ ಮತ್ತು ಆಡಳಿತ ಸಿಬ್ಬಂದಿ ವರ್ಗದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 115ನೇ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಮಹಿಳೆಯರು ತಾವು ಎದುರಿಸುವ ಸಮಸ್ಯೆಗಳನ್ನು ಸಹಿಸಿಕೊಳ್ಳುವ ಗುಣವನ್ನು ಅತಿಯಾಗಿ ಬೆಳೆಸಿಕೊಳ್ಳುವುದು ಸರಿಯಲ್ಲ. ಮಹಿಳೆಗೆ ನೀಡಬಹುದಾದ ಅತಿದೊಡ್ಡ ಶಕ್ತಿಯೆಂದರೆ ಶಿಕ್ಷಣ. ಮಹಿಳೆಯರು ತಾವು ಎದುರಿಸುವ ಸಮಸ್ಯೆಗಳನ್ನು ಸಹಿಸಿಕೊಳ್ಳುವ ಗುಣವನ್ನು ಅತಿಯಾಗಿ ಬೆಳೆಸಿಕೊಳ್ಳುವುದು ಸರಿ?ಲ್ಲ. ಸಹಿಸಿಕೊಳ್ಳುವುದೇ ದಿನಚರಿಯಾದರೆ ಅದೇ ಜೀವನ ವಿಧಾನವಾಗಲಿದೆ. ಇದು ವೈಯಕ್ತಿಕ ಹಾಗೂ ಸಾಮಾಜಿಕವಾಗಿ ಅಪಾಯಕಾರಿ ಎಂದು ಪ್ರತಿಪಾದಿಸಿದರು. ಎದುರಾಗುವ ಸಣ್ಣ ಸಮಸ್ಯೆಯನ್ನು ಪ್ರಶ್ನಿಸಬೇಕು, ಧೈರ್ಯದಿಂದ ಎದುರಿಸಬೇಕು. ಸಣ್ಣ ತೊಂದರೆಗಳನ್ನು ಸಹಿಸಿಕೊಳ್ಳದೇ ಇರುವ ನಿರ್ಧಾರವನ್ನು ಮಹಿಳೆಯರು ಮಾಡುವುದು ಅತ್ಯಗತ್ಯ. ಮಹಿಳೆಯರು ತಮ್ಮನ್ನು ತಾವು ಅನ್ವೇಷಿಸಿಕೊಂಡರೆ ಅಭಿವೃದ್ಧಿ ಸಾಧ್ಯ. ಕುಟುಂಬ ಮತ್ತು ವೃತ್ತಿಯಲ್ಲಿ ಸದಾ ನಿರತರಾಗುವ ಮಹಿಳೆಯರು ತಮ್ಮ ಆರೋಗ್ಯವನ್ನು ನಿರ್ಲಕ್ಷಿಸಬಾರದು. ನಿಯಮಿತವಾಗಿ ಆರೋಗ್ಯ ತಪಾಸಣೆಗೆ ಆದ್ಯತೆ ನೀಡಬೇಕು. ತಮ್ಮ ರಕ್ಷಣೆಗಿರುವ ಕಾನೂನುಗಳ ಬಗ್ಗೆಯೂ ಅರಿತುಕೊಂಡು ಸುರಕ್ಷಿತ ಜೀವನ ನಡೆಸಬೇಕು. ಪೋಕ್ಸೊದಂತಹ ಕಾನೂನುಗಳ ಮಾಹಿತಿ ಹೊಂದುವ ಮೂಲಕ ಬಾಲಕಿಯರ ಹಕ್ಕುಗಳ ರಕ್ಷಣೆಗೂ ಮುಂದಾಗಬೇಕು ಎಂದರು. ಡಾ.ಜ್ಯೋತೀಸ್ ಹೆಲ್ತ್‌ಕೇರ್‌ನ ಪ್ರಸೂತಿ ತಜ್ಞೆ ಡಾ.ಜ್ಯೋತಿ ಉಮೇಶ, ಮೈಸೂರು ವಿಶ್ವವಿದ್ಯಾನಿಲಯ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಅಧ್ಯಯನ ಕೇಂದ್ರದ ಅಧ್ಯಕ್ಷೆ ಪ್ರೊ.ಎಂ.ಪುಷ್ಪಾ ಮಾತನಾಡಿದರು. ವಿವಿಯ ಪರೀಕ್ಷಾಂಗ ಕುಲಸಚಿವ ಪ್ರೊ.ಎನ್.ನಾಗರಾಜು, ಸಿಂಡಿಕೇಟ್ ಸದಸ್ಯರಾದ ಜೆ.ಶಿಲ್ಪಾ ಹಾಜರಿದ್ದರು. ಗಾಯಕ ನಿಂಗರಾಜು ಮತ್ತು ತಂಡದವರಿಂದ ಗಾಯನ ನಡೆಯಿತು.



ಮೊದಲ ಪುಟದಿಂದ

## ಆಡಳಿತದಲ್ಲಿ ಎಐ ಬಳಕೆಗೆ ಸಂಶೋಧನೆ ಅಗತ್ಯ: ಡಿಕೆಶಿ

ಮಾಡಿದ್ದೇನೆ. ನಾನೇ ಚಾಟ್ ಜಿಪಿಟಿ ಬಳಸಿದ್ದೇನೆ. ನನ್ನ ಭಾಷಣದ ಬಗ್ಗೆ ಪಿಎಗೆ ಕೇಳ್ತಿದ್ದೆ. ನನ್ನ ಮಗಳು ಹೇಳಿದಳು ಯಾಕೆ ಅವರಿಗೆ ಕೇಳ್ತಿರಾ ಚಾಟ್ ಜಿಪಿಟಿಯಲ್ಲಿ ಕೇಳಿ ಅಂತ ತೋರಿಸಿಕೊಟ್ಟಳು. ನಾನು ಅಸ್ಸಾಂಗೆ ಹೋದಾಗ ಹೌ ಟು ವಿನ್ ಅಸ್ಸಾಂ ಎಲೆಕ್ಷನ್ ಅಂತ ಕೇಳಿದೆ. ಅಸ್ಸಾಂ ಚುನಾವಣೆ ಗೆಲ್ಲೋದು ಹೇಗೆ ಎಂದರೆ ಕರ್ನಾಟಕ ಮಾಡೆಲ್ ಫಾಲೋ ಮಾಡಿ ಅಂತ ತೋರಿಸುತ್ತದೆ. ಬೇಕಾದರೆ ನೀವೂ ನನ್ನ ಜೊತೆ ಬನ್ನಿ ಇಲ್ಲೇ ಕೂರೋಣ ನಾನೇ ಮೊಬೈಲ್‌ನಲ್ಲಿ ತೋರಿಸ್ತೀನಿ ಎಂದು ಬಿಜೆಪಿ ಸದಸ್ಯರ ಕಾಲೆಳೆದರು.

## ಕೋಳಿ ಮೊಟ್ಟೆ ಬೆಲೆ ಭಾರೀ ಕುಸಿತ

ಈಗ ಯುದ್ಧ ಪರಿಸ್ಥಿತಿ ಹಿನ್ನೆಲೆಯಲ್ಲಿ ರಫ್ತು ಸಂಪೂರ್ಣವಾಗಿ ಸ್ಥಗಿತಗೊಂಡಿದೆ. ಪರಿಣಾಮವಾಗಿ ದೇಶೀಯ ಮಾರುಕಟ್ಟೆಯಲ್ಲಿ ಮೊಟ್ಟೆಗಳ ಸಂಗ್ರಹ ಹೆಚ್ಚಾಗಿದೆ. ಇದೂ ಕೂಡ ಬೆಲೆ ಕುಸಿತಕ್ಕೆ ಕಾರಣವಾಗಿದೆ. ಬೆಲೆ ಕುಸಿತಕ್ಕೆ ಮತ್ತೊಂದು ಕಾರಣ ಹಬ್ಬದ ಸೀಸನ್. ರಂಜಾನ್ ಅವಧಿಯಲ್ಲಿ ಕೆಲ ಸಮುದಾಯಗಳಲ್ಲಿ ಮೊಟ್ಟೆ ಬಳಕೆ ಕಡಿಮೆಯಾಗುತ್ತದೆ. ಜೊತೆಗೆ ಈಸ್ಟರ್ ಕಾಲ ಮತ್ತು ಬೇಸಿಗೆ ಆರಂಭವಾಗಿರುವುದರಿಂದ ಸಹ ಸಾಮಾನ್ಯವಾಗಿ ಮೊಟ್ಟೆ ಬೇಡಿಕೆ ಇಳಿಕೆಯಾಗುತ್ತದೆ. ಬೆಲೆ ಇಳಿಕೆಯಾಗಿದ್ದರೂ ಮೊಟ್ಟೆ ಉತ್ಪಾದನೆ ಕಡಿಮೆ ಆಗಿಲ್ಲ. ಪರಿಣಾಮವಾಗಿ ಹೆಚ್ಚುವರಿ ಮೊಟ್ಟೆಗಳನ್ನು ಶೀತಗೃಹಗಳಲ್ಲಿ ಸಂಗ್ರಹಿಸಲಾಗುತ್ತಿದೆ. ಶೀತಗೃಹಗಳಲ್ಲಿ ಮೊಟ್ಟೆಗಳನ್ನು ಸುಮಾರು ಮೂರು ತಿಂಗಳುಗಳವರೆಗೆ ಸಂರಕ್ಷಿಸಬಹುದು. ಕೆಲವು ಹೆಚ್ಚುವರಿ ಮೊಟ್ಟೆಗಳನ್ನು ಎಗ್ ಪೌಡರ್ ಆಗಿ ಪರಿವರ್ತಿಸಲಾಗುತ್ತಿದೆ. ಈ ಪೌಡರ್ ಅನ್ನು ತಾಜಾ ಮೊಟ್ಟೆಗಳು ಸುಲಭವಾಗಿ ಲಭ್ಯವಿಲ್ಲದ ದೇಶಗಳಿಗೆ ರಫ್ತು ಮಾಡಲಾಗುತ್ತದೆ. ಭಾರತದಲ್ಲಿ ನಾಮಕ್ಕಲ್, ಮುಂಬೈ ಹಾಗೂ ಕೋಲಾರ ಜಿಲ್ಲೆಯಲ್ಲಿ ಎಗ್ ಪೌಡರ್ ಘಟಕಗಳಿವೆ.

ಮೊಟ್ಟೆ ಬೆಲೆ ಕುಸಿತದಿಂದ ಕೋಳಿ ಸಾಕಾಣಿಕೆದಾರರಿಗೆ ನಷ್ಟದ ಭೀತಿ ಹೆಚ್ಚಾಗಿದೆ. ಆಹಾರ ವೆಚ್ಚ, ಸಾರಿಗೆ ಮತ್ತು ನಿರ್ವಹಣಾ ವೆಚ್ಚ ಹೆಚ್ಚುತ್ತಿರುವ ಸಮಯದಲ್ಲಿ ದರ ಇಳಿಕೆಯಾಗಿರುವುದು ಉತ್ಪಾದಕರಿಗೆ ದೊಡ್ಡ ಸವಾಲಾಗಿದೆ. ಗಲ್ಫ್ ರಫ್ತು ಮತ್ತೆ ಆರಂಭವಾದರೆ ಮಾರುಕಟ್ಟೆ ಸ್ಥಿರವಾಗುವ ಸಾಧ್ಯತೆ ಇದೆ. ಅಲ್ಲಿಯವರೆಗೆ ರಾಜ್ಯದ ಮೊಟ್ಟೆ ಮಾರುಕಟ್ಟೆ ಅನಿಶ್ಚಿತತೆಯಲ್ಲೇ ಮುಂದುವರಿಯುವ ಸಾಧ್ಯತೆ ಇದೆ.

## ತಜ್ಞರ ವರದಿ ಪಡೆದು ಸಫಾರಿ

ಹಲವು ರೈತ ಸಂಘಟನೆಗಳು ಸಫಾರಿ ರಾತ್ರಿಯವರೆಗೂ ನಡೆ ಯುತ್ತಿದೆ. ಹೆಚ್ಚಿನ ವಾಹನಗಳ ಸಂಚಾರ ಇದೆ. ಹೆಚ್ಚು ಪ್ರವಾಸಿಗರು

ಆಗಮಿಸುತ್ತಿದ್ದಾರೆ. ಇದರಿಂದ ವಿಚಲಿತವಾಗಿ ವನ್ಯಜೀವಿಗಳು ಕಾಡಿನಿಂದ ಹೊರಬರುತ್ತಿವೆ. ಸಫಾರಿ ನಿಲ್ಲಿಸಬೇಕು ಎಂದು ಆಗ್ರಹಿಸಿದರು. ಈ ಹಿನ್ನೆಲೆಯಲ್ಲಿ ಸಫಾರಿಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿ, ಸಿಬ್ಬಂದಿ ಮತ್ತು ವಾಹನವನ್ನು ಕಾಡಿನಂಚಿನ ಗ್ರಾಮದಲ್ಲಿ ನಿಗಾ ಇಡಲು ಬಳಸಲಾಯಿತು ಎಂದು ತಿಳಿಸಿದರು.

ಬಂಡೀಪುರದಲ್ಲಿ 314 ಕಿ.ಮೀ. ಗಡಿ ಇದೆ. ಅದರಲ್ಲಿ 100 ಕಿ.ಮೀ ಹೆಚ್ಚು ಗಡಿ ಸಂಘರ್ಷ ಪ್ರದೇಶವಾಗಿದೆ. ಆ ಪ್ರದೇಶದಲ್ಲಿ 25 ಕಳ್ಳಬೇಟೆ ನಿಗ್ರಹ ಶಿಬಿರ ಸ್ಥಾಪಿಸಿ, ಸಿಬ್ಬಂದಿ ನೇಮಿಸಿ ಅವರಿಂದ 14 ಗಂಟೆ ಗಸ್ತು ಹಾಕಲು ಸೂಚಿಸಲಾಯಿತು. ಸಮಗ್ರ ಕಮಾಂಡ್ ಸೆಂಟರ್ ಕಾರ್ಯಾರಂಭ ಮಾಡಿಸಲಾಯಿತು. ಮುಂದೆ ಅನಾಹುತ ನಡೆಯದಂತೆ ಎಲ್ಲ ಪೂರ್ವಸಿದ್ಧತೆ ಮಾಡಿಕೊಂಡ ಬಳಿಕ ಸಫಾರಿ ಪುನಾರಂಭಿಸಲಾಗಿದೆ. ಮಿಗಿಲಾಗಿ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ನಡೆದ ವನ್ಯಜೀವಿ ಮಂಡಳಿಯ ಸಭೆಯಲ್ಲಿ ಈ ಬಗ್ಗೆ ಚರ್ಚಿಸಿ, ಕೇಂದ್ರ ವನ್ಯಜೀವಿ ಸಂಸ್ಥೆಯ ಪ್ರತಿನಿಧಿಯನ್ನೂ ಒಳಗೊಂಡ ತಜ್ಞರ ಸಮಿತಿ ರಚಿಸಿ, ಆ ತಜ್ಞರ ಸಮಿತಿಯ ಪ್ರಾಥಮಿಕ ವರದಿಯ ಆಧಾರದಲ್ಲಿ ಸಫಾರಿ ಪುನಾರಂಭ ಮಾಡಲಾಗಿದೆ ಎಂದು ವಿವರಿಸಿದರು.

## ಬಿಜೆಪಿ ಸಂಸದರು ಸಂಸತ್ತಿನಲ್ಲಿ ಮಾತಾಡಲಿ: ಡಿಕೆಶಿ ಒತ್ತಾಯ

ನಾಗರಿಕರಿಗೆ ಅನುಕೂಲವಾಗುವಂತೆ ಕೇಂದ್ರ ಸರ್ಕಾರ ನೋಡಿಕೊಳ್ಳಬೇಕು. ಮುಂದೆ ಪರಿಸ್ಥಿತಿ ಹೇಗಿರುತ್ತದೆಯೋ ಹೇಗೋ ಈಗಾಗಲೇ ಗ್ಯಾಸ್ ಚಾಲಿತ ಆಟೋಗಳು ಬಂದ್ ಆಗಿವೆ. ಸಮಸ್ಯೆ ಹೆಚ್ಚುತ್ತಿದೆ ಎಂದು ಹೇಳಿದರು.

## ಜಿಲ್ಲೆಯಲ್ಲಿ ಗ್ಯಾಸ್ ಸಮಸ್ಯೆ ಇಲ್ಲ

ಎಂಬ ಭಯದಿಂಸದ ಮುಂಗಡವಾಗಿ ಅಡುಗೆ ಅನಿಲ ಸಿಲೆಂಡರ್ ಬುಕ್ಕಿಂಗ್ ಮಾಡುತ್ತಿದ್ದಾರೆ. ಜಿಲ್ಲೆಯಲ್ಲಿ ಸದ್ಯಕ್ಕೆ ಅಡುಗೆ ಅನಿಲದ ಪೂರೈಕೆಯಲ್ಲಿ ಯಾವುದೇ ದಕ್ಕೆ ಇರುವುದಿಲ್ಲ. ಜಿಲ್ಲೆಯಲ್ಲಿ ಅಡುಗೆ ಅನಿಲವನ್ನು ಅಕ್ರಮವಾಗಿ ಸಂಗ್ರಹಿಸುವುದು ಅಥವಾ ಕಾಳಸಂತೆಯಲ್ಲಿ ಮಾರಾಟ ಮಾಡುವುದು ಕಂಡುಬಂದರೆ ಕಾನೂನು ರೀತ್ಯ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ವಾಣಿಜ್ಯ ಅಡುಗೆ ಅನಿಲ ಬಳಕೆಗೆ ಸಂಬಂಧಿಸಿದಂತೆ ಹೋಟೆಲ್, ರೆಸ್ಟೋರೆಂಟ್, ಕೈಗಾರಿಕೆ, ಕಲ್ಯಾಣ ಮಂಟಪಗಳಿಗೆ ಅಡುಗೆ ಅನಿಲದ ಪೂರೈಕೆಯನ್ನು ಸ್ಥಗಿತಗೊಳಿಸಲಾಗಿರುತ್ತದೆ. ಆಸ್ಪತ್ರೆಗಳು, ಶಾಲೆಗಳು, ವಸತಿ ಶಾಲೆಗಳು, ವಿದ್ಯಾರ್ಥಿ ನಿಲಯಗಳು ಮತ್ತು ಅಂಗನವಾಡಿಗಳು, ಅನಾಥಾಶ್ರಮಗಳು ಸೇರಿದಂತೆ ಮುಂತಾದ ಅಗತ್ಯ ಸೇವಾ ಸಂಸ್ಥೆಗಳಿಗೆ ಅಡುಗೆ ಅನಿಲದ ಕೊರತೆ ಉಂಟಾಗದಂತೆ ಎಂದು ವಿವಿಧ ಅನಿಲ ಕಂಪನಿಗಳ ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಯುಕೇಶ್ ಕುಮಾರ್, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಮಂಟೇಸ್ವಾಮಿ ಉಪಸ್ಥಿತರಿದ್ದರು.

## 6 ಕೋಟಿ ಆದಾಯ ನಷ್ಟ

ಸಫಾರಿ ರದ್ದುಗೊಳಿಸಿರುವುದರಿಂದ ಸುರಕ್ಷತಾ ಕಾಳಜಿಗಳನ್ನು ಪರಿಹರಿಸಲು ಮತ್ತು ನೆಲದ ಪರಿಸ್ಥಿತಿಯನ್ನು ನಿರ್ವಹಿಸಲು ಉದ್ದೇಶಿಸಲಾಗಿದ್ದರೂ ಇದು ಈ ಪ್ರದೇಶದ ಪ್ರವಾಸೋದ್ಯಮದ ಮೇಲೆ ಗಮನಾರ್ಹ ಆರ್ಥಿಕ ಪರಿಣಾಮ ಬೀರಿದೆ ಎಂದು ಅರಣ್ಯ ಇಲಾಖೆ ವರದಿಗಳು ತಿಳಿಸಿವೆ.

### ಕನ್ನಡ ಶಾಲೆಗಳ ಉಳಿವಿಗಾಗಿ ಹೋರಾಟ

# ಮಂಡ್ಯದಲ್ಲಿ ವಾಟಾಳ್ ನಾಗರಾಜ್ ಬಂಧನ



ಮಂಡ್ಯ: ಜಿಲ್ಲೆಯ 1463 ಕನ್ನಡ ಶಾಲೆಗಳನ್ನು ಉಳಿಸಿ ಹಾಗೂ ಮಾಧ್ಯಮ ಶಾಲೆಗಳಿಗೆ ಅನುದಾನ ನೀಡಬೇಕೆಂದು ಆಗ್ರಹಿಸಿ ಮಂಡ್ಯನಗರದ ಸಂಜಯ ವೃತ್ತದಲ್ಲಿ ಬೃಹತ್ ಪ್ರತಿಭಟನೆ ನಡೆಸುತ್ತಿದ್ದ ಹೋರಾಟಗಾರರನ್ನು ಪೊಲೀಸರು ಗುರುವಾರ ಬಂಧಿಸಿದರು.

ಕನ್ನಡ ಸೇನೆ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಕನ್ನಡ ಪರ ಹೋರಾಟ ವಾಟಾಳ್ ನಾಗರಾಜ್, ವಾಟಾಳ್ ಕನ್ನಡ ಸೇನೆ ರಾಜ್ಯಾಧ್ಯಕ್ಷ ಕೆ ಆರ್ ಕುಮಾರ್ ಪ್ರತಿಭಟನೆ ನಡೆಸಿ ರಸ್ತೆತಡೆ ನಡೆಸಲು ಮುಂದಾದಾಗ ಪೊಲೀಸರು ಅವರನ್ನು ವಶಕ್ಕೆ ಪಡೆದರು.

ರಾಜ್ಯದಲ್ಲಿ ಕನ್ನಡ ಮಾಧ್ಯಮ ಶಾಲೆಗಳ ಸ್ಥಿತಿಗತಿ ಶೋಚನೀಯವಾಗಿದೆ. ಕನ್ನಡಿಗರ ತೆರಿಗೆ ಹಣದಲ್ಲಿ ಆಡಳಿತ ನಡೆಸುವ ಸರ್ಕಾರಕ್ಕೆ ಕನ್ನಡ ಮಾಧ್ಯಮ ಶಾಲೆಗಳನ್ನು ಉಳಿಸಲು ಯಾಕೆ ಮೀನಮೇಷ ಎಣಿಸುತ್ತಿದೆ ಎಂದು ಹೋರಾಟಗಾರರು ಆಕ್ರೋಶ ವ್ಯಕ್ತಪಡಿಸಿದರು.

ಕನ್ನಡ ಶಾಲೆಗಳಿಗೆ ಅನುದಾನ ನೀಡಲು ಸರ್ಕಾರದ ಬಳಿ ಹಣವಿಲ್ಲವೇ? 30 ವರ್ಷಗಳಿಂದ ಕನ್ನಡ ಶಾಲೆಗಳನ್ನು ಕತ್ತಲೆಯಲ್ಲಿ ಇಟ್ಟಿದ್ದೀರಿ. ಶಾಲಾ ಕಟ್ಟಡಗಳು ಕುಸಿದು ಬೀಳುತ್ತಿವೆ. ಶಿಕ್ಷಕರ ಕೊರತೆಯಿದೆ. ಈ ಕೂಡಲೇ ವಿಶೇಷ ಪ್ಯಾಕೇಜ್ ಮೂಲಕ ಕನ್ನಡ ಮಾಧ್ಯಮ ಶಾಲೆಗಳನ್ನು ಸಬಲೀಕರಣಗೊಳಿಸಬೇಕೆಂದು ಆಗ್ರಹಿಸಿದರು. ಕನ್ನಡ ಸೇನೆ ಜಿಲ್ಲಾಧ್ಯಕ್ಷ ಮಂಜುನಾಥ್ ಸೇರಿದಂತೆ ಹಲವು ಹೋರಾಟಗಾರರು ಬಂಧನಕ್ಕೆ ಒಳಗಾದರು.

# ಸರ್ಕಾರಿ ಶಾಲೆಗಳಿಗೆ ಬೀಗ ಜಡಿದು, ಸರ್ಕಾರದ ವಿರುದ್ಧ ಕರುನಾಡ ಸೇನೆ ಪ್ರತಿಭಟನೆ

**ಖಾಸಗಿ ಶಾಲೆಗಳ ಕಪಿಮುಷ್ಠಿಯಲ್ಲಿ ಸರ್ಕಾರ – ಆರೋಪ**

**ಸರ್ಕಾರಿ ಶಾಲೆಗಳನ್ನು ಮುಚ್ಚುವ ಸರ್ಕಾರದ ನೀತಿಗೆ ಖಂಡನೆ**

ರಾಮನಗರ: ಖಾಸಗಿ ಶಾಲೆಗಳ ಕಪಿ ಮುಷ್ಠಿಯಲ್ಲಿರುವ ರಾಜ್ಯ ಸರ್ಕಾರ ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳ ನೆಪದಲ್ಲಿ ಸರ್ಕಾರಿ ಶಾಲೆಗಳನ್ನು ಮುಚ್ಚುತ್ತಿದೆ ಎಂದು ಆರೋಪಿಸಿರುವ ಕರುನಾಡ ಸೇನೆಯ ಕಾರ್ಯಕರ್ತರು, ನಗರದ ಐಜೂರಿನ ಸರ್ಕಾರಿ ಶಾಲೆ ಮತ್ತು ನೀರಿನ ಟ್ಯಾಂಕ್ ವೃತ್ತದ ಬಳಿ ಇರುವ ಜಿ.ಕೆ.ಎಂ.ಪಿ.ಎಸ್ ಶಾಲೆಗಳಿಗೆ ಬೀಗ ಜಡಿದು ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿದರು.

ಶಾಲೆಗಳಿಗೆ ಬೀಗ ಜಡಿಯುವ ಮುನ್ನ ತರಗತಿಗಳಲ್ಲಿದ್ದ ಮಕ್ಕಳನ್ನು ಹೊರಗೆ ಕಳುಹಿಸಿ ಶಾಲೆಯ ಗೇಟುಗಳಿಗೆ ಬೀಗ ಹಾಕಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಈ ವೇಳೆ ಮಾತನಾಡಿದ ಕರುನಾಡ ಸೇನೆಯ ರಾಜ್ಯ ಉಪಾಧ್ಯಕ್ಷ ಎಂ.ಜಗದೀಶ್, ಕನ್ನಡ ಚಳವಳಿ ವಾಟಾಳ ಪಕ್ಷ ಅಧ್ಯಕ್ಷ ವಾಟಾಳ್ ನಾಗರಾಜ್ ರವರ ಕರೆಯ ಮೇರೆಗೆ ಈ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ. ರಾಜ್ಯ ಸರ್ಕಾರ ಖಾಸಗಿ ಶಾಲೆಗಳಿಗೆ ಅನುಕೂಲ ಮಾಡಿಕೊಡುವ ಸಲುವಾಗಿ ಸರ್ಕಾರಿ ಶಾಲೆಗಳನ್ನು ಮುಚ್ಚುತ್ತಿದೆ. ಸರ್ಕಾರಿ ಶಾಲೆಗಳನ್ನು ಮುಚ್ಚುವುದರಿಂದ ಕನ್ನಡ ಭಾಷೆಗೆ ಸಮಸ್ಯೆಯಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಸಿಎಂ ಸಿದ್ದರಾಮಯ್ಯ ಅವರು ಮಂಡಿಸಿದ ಬಜೆಟ್‌ನಲ್ಲಿ ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳಿಗೆ 3900 ಕೋಟಿ ರೂ ಅನುದಾನ ಘೋಷಿಸಿದ್ದಾರೆ. ಆದರೆ ಕನ್ನಡ ಶಾಲೆಗಳಿಗಾಗಿ ಅನುದಾನ ಕೊಟ್ಟಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯರವರನ್ನು ಜನತೆ ಕನ್ನಡದ ರಾಮಯ್ಯ ಅಂತ ಪ್ರೀತಿಯಿಂದ ಕರೆಯುತ್ತಾರೆ, ಆದರೆ ಅವರು ತಮ್ಮ ಖ್ಯಾತಿಗೆ ತಕ್ಕಂತೆ ಕನ್ನಡ ಶಾಲೆಗಳನ್ನು ಉಳಿಸುವ ಕೆಲಸ ಮಾಡುತ್ತಿಲ್ಲ. ಸರ್ಕಾರಿ ಶಾಲೆಗಳಿಗೆ ಮೂಲಸೌಕರ್ಯ ಕಲ್ಪಿಸುವ ಕೆಲಸ ಮಾಡಬೇಕು. ಇಲ್ಲದಿದ್ದರೆ ಸಾಂಕೇತಿಕವಾಗಿ ನಡೆಸಿರುವ ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಳ್ಳಲಿದೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಕರುನಾಡ ಸೇನೆ ರಾಜ್ಯ ಉಸ್ತುವಾರಿ ಅಧ್ಯಕ್ಷ ವಿ.ಎನ್.ಗಂಗಾಧರ್ , ಜಿಲ್ಲಾಧ್ಯಕ್ಷ ಸಿ.ಎಸ್.ಜಯಕುಮಾರ್, ತಾಲೂಕು ಮಹಿಳಾ ಘಟಕ ಅಧ್ಯಕ್ಷೆ ಭಾಗ್ಯ ಸುಧಾ , ದಲಿತ ಘಟಕ ಜಿಲ್ಲಾಧ್ಯಕ್ಷ ಕೆ.ಜಯರಾಮು, ತಾಲೂಕು ಅಧ್ಯಕ್ಷ ವಿಜಯ್ ಕುಮಾರ್ , ತಾಲೂಕು ಕಾರ್ಯಾಧ್ಯಕ್ಷ ಕುಮಾರ್ , ಕಾರ್ಯದರ್ಶಿ ಶಿವಮೂರ್ತಿ, ಪ್ರಧಾನ ಕಾರ್ಯದರ್ಶಿ ಕುಮಾರ್, ಪದಾಧಿಕಾರಿಗಳಾದ ಪುಷ್ಪಲತಾ, ನಾಗವೇಣಿ, ವೆಂಕಟಲಕ್ಷ್ಮಿ, ಕೀರ್ತಿರಾಜ್ ಮತ್ತಿತರರು ಭಾಗವಹಿಸಿದ್ದರು.



### ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಸೂಚನೆ


# ಜನನ, ಮರಣ ನೋಂದಣಿ ಶೇ.100ರಷ್ಟು ಆಗಲಿ

ಮೈಸೂರು: ಜನನ ಮರಣ ನೋಂದಣಿ ಶೇ.100ರಷ್ಟು ಕಡ್ಡಾಯವಾಗಿ ಆಗಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜನನ ಮರಣ ನೋಂದಣಿ ಕುರಿತು ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು. ಜನನ ನೋಂದಣಿಗಳು ಕಳೆದ ಮೂರು ತಿಂಗಳ ಅವಧಿಯಲ್ಲಿ ಶೇ.100ರಷ್ಟು ಆಗಿರುವುದಕ್ಕೆ ಸರ್ಕಾರದ ಮಟ್ಟದಲ್ಲಿ ಪ್ರಶಂಶನಾ ಪತ್ರ ನೀಡಿರುವುದು ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ ಎಂದರು.

ಜನನ ಆದ 21 ದಿನಗಳ ಒಳಗಾಗಿ ನೋಂದಣಿ ಆಗಬೇಕು. ಜಿಲ್ಲೆಯ ಚೆಲುವಾಂಬ ಆಸ್ಪತ್ರೆ, ಟಿ ನರಸೀಪುರ ತಾಲ್ಲೂಕು ಆಸ್ಪತ್ರೆ, ಹೆಚ್.ಡಿ.ಕೋಟೆ ತಾಲ್ಲೂಕು ಆಸ್ಪತ್ರೆ ಹಾಗೂ ಮೈಸೂರು ಪಿಕೆಟಿಬಿ ಮತ್ತು ಸಿಡಿ ಆಸ್ಪತ್ರೆ ಗಳು ನಿಗದಿತ ಅವಧಿಯಲ್ಲಿ ನೋಂದಣಿ ಮಾಡಿ ಶೇ.100 ರಷ್ಟು ಗುರಿ ಸಾಧನೆ ಮಾಡಿವೆ. ಜನನ ಘಟನೆಗಳ ವಿಳಂಬ ನೋಂದಣಿ ಮಾಡಿರುವ ನಂಜನಗೂಡು ತಾಲ್ಲೂಕು ಆಸ್ಪತ್ರೆ, ಹುಣಸೂರು ನಗರಸಭೆ, ನಂಜನಗೂಡು ನಗರಸಭೆ, ಟಿ ನರಸೀಪುರ ಪುರಸಭೆ, ಮೈಸೂರು ವಲಯ ಕಛೇರಿ 2 ಹಾಗೂ ವಲಯ ಕಛೇರಿ 8 ಗಳು ನೋಂದಣಿಯನ್ನು ವಿಳಂಬ ಮಾಡದೇ ನೋಂದಣಿ ಮಾಡಬೇಕು. ವಿಳಂಬ ನೋಂದಣಿಗೆ ಸಾರ್ವಜನಿಕರಿಂದ ಶುಲ್ಕ ಪಡೆಯದೇ ಸಂಬಂಧಿಸಿದ ಅಧಿಕಾರಿಗಳು ಪಾವತಿ ಮಾಡುವಂತೆ ಆಗಬೇಕು. ಆಗ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸುತ್ತಾರೆ ಎಂದು ತಿಳಿಸಿದರು.

ಮರಣ ಸಂಭವಿಸಿದ 21 ದಿನಗಳ ಒಳಗೆ ನೋಂದಣಿ ಆಗಬೇಕು. ಕಡಕೋಳ ಪಟ್ಟಣ ಪಂಚಾಯಿತಿ ಶ್ರೀರಾಂಪುರ, ಕೆ ಆರ್ ಆಸ್ಪತ್ರೆ, ನಂಜನಗೂಡು ನಗರಸಭೆ, ಹೂಟಗಳ್ಳಿ ನಗರ ಸಭೆ, ಟಿ ನರಸೀಪುರ ಪುರಸಭೆ, ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ, ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ, ಮೈಸೂರು ವಲಯ ಕಛೇರಿ–6, ವಲಯ ಕಛೇರಿ –9, ವಲಯ ಕಛೇರಿ –2, ಕೆ ಆರ್ ನಗರ ಪುರಸಭೆ, ಪಿರಿಯಾಪಟ್ಟಣ ಪುರಸಭೆ, ಬನ್ನೂರು ಪುರಸಭೆ, ಬೋಗಾದಿ ಪಟ್ಟಣ ಪಂಚಾಯಿತಿ ಗಳಲ್ಲಿ ಮರಣ ನೋಂದಣಿ ವಿಳಂಬವಾಗಿ ಆಗಿದೆ. ಶೇಕಡಾ 92.8 ರಷ್ಟು ವಿಳಂಬ ನೋಂದಣಿ ಆಗಿರುವ ಕಡಕೋಳ ಪಟ್ಟಣ ಪಂಚಾಯಿತಿಗೆ ನೋಟಿಸ್ ನೀಡಲಾಗುವುದು ಎಂದು ತಿಳಿಸಿದರು.



ಸಭೆಯಲ್ಲಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಆರ್. ಚಿತ್ರಾ, ಜಿಲ್ಲಾ ಶಸ್ತ್ರಚಿಕಿತ್ಸರಾದ ಡಾ. ಎನ್.ವಿ.ಸತೀಶ್, ಜಿಲ್ಲಾ ಮಕ್ಕಳ ಸಂತಾನೋತ್ಪತ್ತಿ ಅಧಿಕಾರಿ ಡಾ.ಮಹಮ್ಮದ್ ಸಿರಾಜ್ ಅಹಮದ್, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಸುರೇಶ್ ಅಂಗಡಿ, ಕೃಷಿ ಇಲಾಖೆಯ ಉಪ ನಿರ್ದೇಶಕ ಮಂಜುನಾಥ್, ತಹಶೀಲ್ದಾರ್ ರಾಮ್ ಪ್ರಸಾದ್, ಸಹಾಯಕ ನಿರ್ದೇಶಕ ಎಂ.ವಿ.ಹೊನ್ನೇಗೌಡ, ಸಹಾಯಕ ಸಾಂಖ್ಯಿಕ ಅಧಿಕಾರಿಗ ಗಣೇಶ, ಎಸ್. ಸಂಧ್ಯಾ ಇತರರು ಹಾಜರಿದ್ದರು.

ಮೊದಲ ಪುಟದಿಂದ

## ಬಜೆಟ್ ಬಗ್ಗೆ ಕೈ ಶಾಸಕ ಇಕ್ಬಾಲ್ ಅಸಮಾಧಾನ

ಮಾಡಿಲ್ಲ. ಈಗ, ಮುಖ್ಯಮಂತ್ರಿ ಸಹ ಏನೂ ಕೊಡಲಿಲ್ಲ. ಇದರಿಂದಾಗಿ ನೋವಾಗಿದೆ ಎಂದರು. ಅಭಿವೃದ್ಧಿಗಾಗಿ ನಾವೀಗ ಉಪ ಮುಖ್ಯಮಂತ್ರಿ ಹಿಂದೆಯೇ ಹೋಗಬೇಕು. ನಮ್ಮ ಕಷ್ಟಸುಖವನ್ನು ಅವರ ಮೇಲೆಯೇ ಹಾಕಬೇಕು. ಹಿಂದೆ ಅವರಿಂದಲೇ ಕೆಲಸ ಮಾಡಿಸಿಕೊಂಡಿದ್ದೆ. ಮುಂದೆಯೂ ಅವರ ಮೇಲೆ ಭಾರ ಹಾಕಬೇಕಾಗುತ್ತದೆ. ನಮ್ಮ ಜಿಲ್ಲೆಯವರೇ ಆದ ಅವರಿಗೂ ಕ್ಷೇತ್ರದ ಜವಾಬ್ದಾರಿ ಇದೆ ಎಂದು ಹೇಳಿದರು.

ನಮ್ಮ ಗುರುಗಳು ಇನ್ನೂ ಜಪದಿಂದ ಎದ್ದಿಲ್ಲ. ಬಹುಶಃ ಯುಗಾದಿ ಬಳಿಕ ಎಚ್ಚರವಾಗುತ್ತಾರೆ. ಸದ್ಯ ಅಧಿವೇಶನ ನಡೆಯುತ್ತಿದೆ. ಯುಗಾದಿ ನಂತರ ಒಳ್ಳೆಯ ಸುದ್ದಿ ಸಿಗಲಿದೆ. ನಮ್ಮ ನಾಯಕ ಡಿ. ಕೆ.ಶಿವಕುಮಾರ್ ಅವರ ಶ್ರಮಕ್ಕೆ ಒಳ್ಳೆಯ ಫಲಿತಾಂಶ ಸಿಕ್ಕೇ ಸಿಗುತ್ತದೆ ಎಂದು ಮುಖ್ಯಮಂತ್ರಿ ಬದಲಾವಣೆ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

## 56 ಸಾವಿರ ಖಾಲಿ ಹುದ್ದೆ ಭರ್ತಿ

ಹುದ್ದೆ ತುಂಬಿದ್ದೀವಿ ಅಂತ ಧಾರವಾಡದಲ್ಲಿ ಮಾತಾಡಿದ್ದಾರೆ. ಪ್ರಿನ್ಸಿಪಲ್ ನೇಮಕಾತಿಯಲ್ಲಿ 371ಎ ಅಡಿ ನೇಮಕಾತಿ ಆಗಿಲ್ಲ. ಕೂಡಲೇ ಅದಕ್ಕೆ ಸ್ಟೇ ಕೊಡಬೇಕು ಎಂದು ಒತ್ತಾಯಿಸಿದರು.

ಇದಕ್ಕೆ ಸಿಎಂ ಪರವಾಗಿ ಸಚಿವ ಬೋಸರಾಜು ಉತ್ತರ ನೀಡಿ, 56432 ಹುದ್ದೆ ನೇಮಕಾತಿಗೆ ನಿರ್ಧಾರ ಮಾಡಲಾಗಿದೆ. ಕ್ಯಾಬಿನೆಟ್‌ನಲ್ಲಿ ಈಗಾಗಲೇ ನಿರ್ಧಾರ ಆಗಿದೆ. ನಿಯಮದ ಪ್ರಕಾರವೇ 371ಎ ಅಡಿಯೂ ನೇಮಕಾತಿ ಆಗಲಿದೆ. ಸಿಎಸ್, ಆರ್ಥಿಕ ಇಲಾಖೆಗೆ ಸೂಚನೆ ಕೊಡಲಾಗಿದೆ. 371ಎ ಅಡಿ ನೇಮಕಾತಿ ಮಾಡಬೇಕು ಅಂತ ಹೇಳಿದ್ದೇವೆ. ಈ ತಿಂಗಳಲ್ಲಿ ಮತ್ತೊಂದು ಕ್ಯಾಬಿನೆಟ್ ಸಬ್ ಕಮಿಟಿ ಸಭೆ ಕ್ರಮ ಮಾಡ್ತೀವಿ. 371ಎ ಅಡಿ ನೇಮಕಾತಿ ಮಾಡಿಲ್ಲ ಅಂದರೆ ಸಿಎಂ ಜೊತೆ ಚರ್ಚೆ ಮಾಡಿ ಕ್ರಮ ತೆಗೆದುಕೊಳ್ತೀವಿ ಎಂದು ತಿಳಿಸಿದರು.

## ಆನೆ ದಾಳಿಗೆ ರೈತ ಬಲಿ

ಮೃತಪಟ್ಟಿದ್ದಾರೆ. ಹಾಡಹಗಲೇ ಕಾಫಿ ತೋಟದಲ್ಲಿ ಕಾಡಾನೆ ಕಾಣಿಸಿಕೊಂಡಿದೆ. ಸ್ಥಳಕ್ಕೆ ಪೊಲೀಸರು, ಅರಣ್ಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕುಶಾಲನಗರ ತಾಲೂಕಿನ ವಾಲ್ನೂರಿನಲ್ಲಿ ನಂಜರಾಯಪಟ್ಟಣ ಗ್ರಾಮ ಪಂಚಾಯತ್ ಮಾಜಿ ಸದಸ್ಯೆ ಜಲಜಾಕ್ಷಿ ಇತ್ತೀಚೆಗೆ ಆನೆ ದಾಳಿಯಿಂದ ಮೃತಪಟ್ಟಿದ್ದರು.

# ಶೀಘ್ರದಲ್ಲೇ ಸೀತಾ ಸ್ವಯಂವರ

ಮೈಸೂರು: ಈಚಿನ ವರ್ಷಗಳಲ್ಲಿ ತ್ರಿಮತಸ್ಥ ಬ್ರಾಹ್ಮಣ ಯುವಕ– ಯುವತಿಯರು ಸಕಾಲದಲ್ಲಿ ವಿವಾಹ ಸಾಧ್ಯವಾಗದೇ ಪರಿತಪಿಸುತ್ತಿರುವ ಹಿನ್ನೆಲೆಯಲ್ಲಿ ಇದಕ್ಕೆ ಧಾರ್ಮಿಕ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಶಾಕಾಂಬರಿ ಧಾರ್ಮಿಕ ಕೇಂದ್ರ ಹಾಗೂ ಜಿಲ್ಲಾ ಬ್ರಾಹ್ಮಣ ಮಹಾಸಭಾ ಸಂಯುಕ್ತಾಶ್ರಯದಲ್ಲಿ ನಗರದಲ್ಲಿ ಶೀಘ್ರದಲ್ಲೇ ಬೀಜ ಮಂತ್ರ ಪಠಣದೊಂದಿಗೆ ಶಚೀ ಪುರಂದರ ದೇವತಾ ಪೂಜೆಯೊಂದಿಗೆ ಮಾಂಗಲ್ಯ ಸಿದ್ಧಿ ಸೀತಾ ಸ್ವಯಂವರ ಹೋಮ ಸಾಮೂಹಿಕವಾಗಿ ಆಯೋಜಿಸ ಲಾಗುತ್ತಿದೆ ಎಂದು ರಘುರಾಂ ವಾಜಪೇಯಿ ತಿಳಿಸಿದರು.

ಈಚಿನ ಹಲವಾರು ಸಾಮಾಜಿಕ ಮೊದಲಾದ ಬೆಳವಣಿಗೆ, ಧಾರ್ಮಿಕ ಶ್ರದ್ಧೆ, ಧಾರ್ಮಿಕ ಆಚರಣೆ, ಧಾರ್ಮಿಕ ನಡವಳಿಕೆ ಕಡಿಮೆ ಆಗಿರುವುದು ಸಹಾ ಈ ಸಮಸ್ಯೆಗೆ ಪ್ರಮುಖ ಕಾರಣ ಎನ್ನಬಹುದಾಗಿದೆ. ಹೀಗಾಗಿ ಇವಕ್ಕೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ಶೀಘ್ರದಲ್ಲೇ ಆಯೋಜಿಸಲಿದ್ದು, ಸ್ಥಳವನ್ನು ಸಹಾ ನಂತರದ ದಿನಗಳಲ್ಲಿ ತಿಳಿಸಲಾಗುವುದು. ಹೀಗಾಗಿ ತ್ರಿಮತಸ್ಥ ಬ್ರಾಹ್ಮಣ ಸಮುದಾಯದ ಯುವಕ, ಯುವತಿಯರು ಪಾಲ್ಗೊಳ್ಳಬೇಕೆಂದರು.




ಸಂಧ್ಯಾ ಸುರಕ್ಷಾ ಟ್ರಸ್ಟ್ ಅಧ್ಯಕ್ಷ ಬಿ. ಆರ್. ನಟರಾಜ ಜೋಯಿಸ್ ಮಾತನಾಡಿ, ಈ ಕಾರ್ಯಕ್ರಮವು ಬ್ರಾಹ್ಮಣ ಸಮುದಾಯದ ಯುವಕ, ಯುವತಿಯರ ಪುರೋಭಿವೃದ್ಧಿಗಾಗಿ ಆಯೋಜನೆಗೊಳ್ಳುತ್ತಿದೆ. ಜಾತಕ ಫಲಗಳಿಂದ ನಕ್ಷತ್ರ ದೋಷ, ಗುರುದೋಷ, ಗೋತ್ರಾದಿಗಳ ಒಗ್ಗೂಡುವಿಕೆ ಅಡಚಣೆಯಂತಹ ನಾನಾ ರೀತಿಯ ತೊಂದರೆಗಳಿಗೆ ಧಾರ್ಮಿಕ ಪರಿಹಾರ ದೊರಕಿಸುವ ಉದ್ದೇಶ ಹೊಂದಿದೆ. ಹೆಚ್ಚಿನ ಮಾಹಿತಿಗೆ ದೂ. 80887 99540 ಸಂಪರ್ಕಿಸಬಹುದೆಂದರು. ಸುರೇಶ್, ಅಶೋಕ್, ಉಷಾ ಹಾಗೂ ಇನ್ನಿತರರು ಇದ್ದರು.

## ಸಂಕ್ಷಿಪ್ತ ಸುದ್ದಿ

### 15ರಂದು ಗಣೇಶ ಅಮೀನಗಡ ಪುಸ್ತಕ ಬಿಡುಗಡೆ

**ಮೈಸೂರು:** ನಗರದ ಕವಿತಾ ಪ್ರಕಾಶನವು ಲೇಖಕ ಗಣೇಶ ಅಮೀನಗಡ ಅವರ ಮೂರು ಪುಸ್ತಕ ಹಾಗೂ ರಮೇಶಚಂದ್ರ ಅವರ 'ಹಾದಿಯೊಳಗಣ ಹಾಡೇ...' ಕವನ ಸಂಕಲನ ಬಿಡುಗಡೆ ಸಮಾರಂಭವನ್ನು ಮಾರ್ಚ್ 15ರಂದು ಬೆಳಗ್ಗೆ 10.30 ಗಂಟೆಗೆ ಇಲ್ಲಿನ ಜೆಎಲ್ ಬಿ ರಸ್ತೆಯ ಎಂಜಿನಿಯರುಗಳ ಸಂಸ್ಥೆಯಲ್ಲಿ ಆಯೋಜಿಸಿದೆ.

ಕೃತಿಗಳನ್ನು ಹಿರಿಯ ವಿಮರ್ಶಕರಾದ ಓ.ಎಲ್.ನಾಗಭೂಷಣ ಸ್ವಾಮಿ ಬಿಡುಗಡೆಗೊಳಿಸಿ ಮಾತನಾಡಲಿದ್ದಾರೆ. ಸಮಾರಂಭದಲ್ಲಿ ಹಿರಿಯ ರಂಗಕರ್ಮಿ ಹುಲಗಪ್ಪ ಕಟ್ಟಿಮನಿ, ಬಿಡುಗಡೆಗೊಂಡ ಕೃತಿಗಳ ಎಚ್.ವಿ.ರಮೇಶ್ ಹಾಗೂ ಮಹೇಶ ಬಾಗಳಿ ಭಾಗವಹಿಸುವರು.

ಗಣೇಶ ಅಮೀನಗಡ ಅವರ ಕೃತಿಗಳ ಕಥನ, ಅಂಕಣದ ಆಯ್ದ ಲೇಖನಗಳ ಸಂಕಲನ ರಂಗ ಪ್ರಸಂಗ ಹಾಗೂ ರಂಗಭೂಮಿ ಕಲಾವಿದೆಯರ ಕುರಿತ ರಂಗ ಕರ್ಪೂರ ಕೃತಿಗಳು ಬಿಡುಗಡೆಗೊಳ್ಳಲಿವೆ.

ಸಮಾರಂಭದ ಆರಂಭದಲ್ಲಿ ಮಹೇಶ ಬಾಗಳಿ ಅವರು ರಂಗಗೀತೆಗಳನ್ನು ಹಾಡುವರು. ಕೃತಿಗಳ ಕಥನ ಕೃತಿಯಲ್ಲಿ ಎಸ್.ವಿ.ರಮೇಶ್ ಹಾಗೂ ಮಹೇಶ ಬಾಗಳಿ ಅವರ ಅನುಭವಗಳಿವೆ ಅಲ್ಲದೆ ಕೃತಿಗಳ ನಾಟಕ ನಿರ್ದೇಶಿಸಿರುವ ಹುಲಗಪ್ಪ ಕಟ್ಟಿಮನಿ ಅವರ ಡೈರೆಕ್ಟರ್ ಡೈರಿ ಎನ್ನುವುದು ಕೂಡಾ ಇದೆ.

### ಅರ್ಜಿ ಆಹ್ವಾನ

**ತುಮಕೂರು:** ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ 'ವಚನ ಕಲ್ಯಾಣ' ಎಂಬ ಅಹೋರಾತ್ರಿ (ಒಂಬತ್ತು ಗಂಟೆ) ನಾಟಕವನ್ನು ಸಿದ್ಧಪಡಿಸಿ, ನಾಡಿನಾದ್ಯಂತ ಪ್ರದರ್ಶನ ಮಾಡಲು ಇಲಾಖೆ ಉದ್ದೇಶಿಸಿದ್ದು, ಈ ಸಂಬಂಧ ನುರಿತ ಹಾಗೂ ಆಸಕ್ತ ಯುವಕ/ಯುವತಿಯರು ಹಾಗೂ ಅನುಭವಿ ರಂಗ ಕಲಾವಿದರು/ಗಾಯಕರುಗಳಿಂದ ಅರ್ಜಿ ಆಹ್ವಾನಿಸಿದೆ. ಆಸಕ್ತ 18 ರಿಂದ 40 ವರ್ಷ ವಯೋಮಿತಿಯೊಳಗಿನ ರಂಗಶಿಕ್ಷಣದಲ್ಲಿ ತರಬೇತಿ ಪಡೆದ ಹಾಗೂ ನಾಟಕಗಳಲ್ಲಿ ಅಭಿನಯಿಸಿದ ಕಲಾವಿದರಿಗೆ ಅದ್ಯತೆಯನ್ನು ನೀಡಲಾಗುವುದು. ಭರ್ತಿ ಮಾಡಿದ ಅರ್ಜಿಯನ್ನು ಮಾರ್ಚ್ 20ರೊಳಗಾಗಿ ಸದಸ್ಯ ಕಾರ್ಯದರ್ಶಿ, ಸಂತ ಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, ಕಲಾಗ್ರಾಮ, ಮಲ್ಲತ್ತಹಳ್ಳಿ, ಬೆಂಗಳೂರು-560056 ಇಲ್ಲಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪುವಂತೆ ಅಥವಾ ಮೇಲ್ ವಿಳಾಸ: kanakaresearchcentre@gmail.com ಮೂಲಕ ಸಲ್ಲಿಸಲು ಕೋರಿದೆ.

ಆಯ್ಕೆಯಾದ ಅಭ್ಯರ್ಥಿಗಳಿಗೆ ಮೂರು ತಿಂಗಳ ಕಾಲದ ಅವಧಿಯಲ್ಲಿ ಪೂರ್ಣಕಾಲಿಕವಾಗಿ ತರಬೇತಿ ಪ್ರದರ್ಶನಗಳಲ್ಲಿ ಪಾಲ್ಗೊಳ್ಳುವುದು ಕಡ್ಡಾಯ. ಮಾಸಿಕ ಗೌರವಧನ ಮತ್ತು ಊಟ, ವಸತಿ ವ್ಯವಸ್ಥೆಯನ್ನು ಮಾಡಲಾಗುವುದು. ಸಂದರ್ಶನಕ್ಕೆ ಹಾಜರಾಗುವ ಕಲಾವಿದರಿಗೆ ಇಲಾಖೆಯ ಯಾವುದೇ ಭತ್ಯೆ ನೀಡಲಾಗುವುದಿಲ್ಲ.

ಅರ್ಜಿ ನಮೂನೆಯನ್ನು ಕನ್ನಡ ಸಂಸ್ಕೃತಿ ಇಲಾಖೆಯ ವೆಬ್ ಸೈಟ್ kannadasiri.karnataka.gov.in ನಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಸಿ. ಬಸವಲಿಂಗಯ್ಯ(ವಚನ ಕಲ್ಯಾಣ ನಾಟಕದ ನಿರ್ದೇಶಕರು) ಮೊಬೈಲ್ ಸಂಖ್ಯೆ-9448538620ಯನ್ನು ಸಂಪರ್ಕಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್ ಕು.ಮಿರ್ಜಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅರ್ಜಿ ಆಹ್ವಾನ

**ತುಮಕೂರು:** ಜಿಲ್ಲಾ ಮಕ್ಕಳ ರಕ್ಷಣಾ ಘಟಕವು 2024-25ನೇ ಸಾಲಿನ ಬಾಲ್ಯ ವಿವಾಹ ಶೂನ್ಯ ಸಹಿಷ್ಣುತೆ ಹೊಂದಿರುವ ಗ್ರಾಮ ಪಂಚಾಯತಿಗಳಿಗೆ(ಬಾಲ್ಯ ವಿವಾಹ ಮುಕ್ತ ಗ್ರಾಮ ಪಂಚಾಯತ್) ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಿದೆ. ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಭರ್ತಿ ಮಾಡಿದ ನಿಗಧಿತ ಅರ್ಜಿ ನಮೂನೆಯನ್ನು ಮಾರ್ಚ್ 26ರೊಳಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮೊದಲನೇ ಮಹಡಿ, ಮಹಾತ್ಮಗಾಂಧಿ ಕ್ರೀಡಾಂಗಣ, ಕುವೆಂಪು ನಗರ, ತುಮಕೂರು ಇವರಿಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಗೌತಮ್ ಎನ್., ರಕ್ಷಣಾಧಿಕಾರಿ, ಸಾಂಸ್ಥಿಕ ಸೇವೆ, ಮೊ.ಸಂ. 9964927371ನ್ನು ಸಂಪರ್ಕಿಸಬೇಕೆಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಪವಿತ್ರ ಆರ್.ಜಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ಭೈರವೇಶ್ವರ ಇಂಟರ್ ನ್ಯಾಷನಲ್ ಸ್ಕೂಲ್ ವತಿಯಿಂದ ಫ್ಯಾಷನ್ ಫೆಸ್ಟ್ ಕಾರ್ಯಕ್ರಮ

# ಸಮಾಜದಲ್ಲಿ ಪ್ರತಿಯೊಬ್ಬರೂ ಸಾರ್ಥಕತೆಯ ಬದುಕನ್ನು ನಡೆಸಿ

**ಕೆ.ಆರ್.ನಗರ:** ಸಮಾಜದಲ್ಲಿ ಪ್ರತಿಯೊಬ್ಬರೂ ಸಾರ್ಥಕತೆಯ ಬದುಕನ್ನು ನಡೆಸಬೇಕು ಎಂದು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಸಾ.ರಾ.ನಂದೀಶ್ ಹೇಳಿದರು.

ಅವರು ಸಾಲಿಗ್ರಾಮ ಪಟ್ಟಣದ ಶ್ರೀ ಭೈರವೇಶ್ವರ ಇಂಟರ್ ನ್ಯಾಷನಲ್ ಸ್ಕೂಲ್ ವತಿಯಿಂದ ಆಯೋಜಿಸಿದ್ದ ಫ್ಯಾಷನ್ ಫೆಸ್ಟ್ -2026 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳ ಭವಿಷ್ಯವನ್ನು ರೂಪಿಸುವಲ್ಲಿ ತಾಯಂದಿರ ಪಾತ್ರ ಬಹಳ ದೊಡ್ಡದಿದೆ. ಮಕ್ಕಳಿಗೆ ಮನೆಯಲ್ಲಿ ಪ್ರಮುಖವಾಗಿ ತಾಯಂದಿರು ಉತ್ತಮವಾದ ಸಂಸ್ಕಾರವನ್ನು ಕಲಿಸುವ ಮೂಲಕ ನಾಡಿಗೆ ಸತ್ಪ್ರಜೆಯನ್ನು ನೀಡಬೇಕು ಎಂದರು.

ಚಿಕ್ಕ ವಯಸ್ಸಿನಲ್ಲಿ ಮಕ್ಕಳಿಗೆ ಕಲಿಸುವ ವಿಷಯಗಳು ಉತ್ತಮವಾಗಿರಬೇಕು ಅಂತಹ ವಿಷಯಗಳನ್ನು ಮಕ್ಕಳ ಮನಸ್ಸಿಗೆ ಅರಿಯುವಂತೆ ಮಾಡುವ ಮೂಲಕ ಆದರ್ಶಗಳ ಗುಣಗಳನ್ನು ಮೈಗೂಡಿಸಿಕೊಂಡು ಸಮಾಜದಲ್ಲಿ ಒಬ್ಬ ವ್ಯಕ್ತಿಯಾಗಲ್ಲದೆ ಶಕ್ತಿಯಾಗಿ ರೂಪಿಸಬೇಕು ಎಂದರು.

ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ಸದಾ ಕ್ರಿಯಾಶೀಲವಾದ ವ್ಯಕ್ತಿತ್ವವನ್ನು ಹೊಂದಬೇಕು ಆ ಮೂಲಕ ತಮ್ಮಲ್ಲಿರುವ



ಉತ್ತಮ ಪ್ರತಿಭೆಯೊಂದಿಗೆ ಸಮಾಜದ ಮುಖ್ಯ ವಾಹಿನಿಯಲ್ಲಿ ಗುರುತಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮಕ್ಕಳಲ್ಲಿರುವ ಪ್ರತಿಭೆಗಳನ್ನು ಶಿಕ್ಷಕರುಗಳು ಹಾಗೂ ಪೋಷಕರುಗಳು ಗುರುತಿಸಿ ಅದನ್ನು ಪ್ರೋತ್ಸಾಹಿಸುವ ಮೂಲಕ ಆ ಕ್ಷೇತ್ರಗಳಲ್ಲಿ ಮಕ್ಕಳು ಉತ್ತಮ ಸಾಧನೆ ಮಾಡಿ ಈ ನಾಡಿಗೆ ಕೀರ್ತಿಯನ್ನು ತರುವಂತಹ ಕೆಲಸ ಮಾಡಬೇಕು ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್ ಮಾತನಾಡಿ ವಿದ್ಯಾರ್ಥಿಗಳು ಮತ್ತು ಮಕ್ಕಳಲ್ಲಿ ಮೊಬೈಲ್ ಬಳಕೆ ಬಗ್ಗೆ ಪೋಷಕರುಗಳು ಹಾಗೂ ಶಿಕ್ಷಕರುಗಳು ಹೆಚ್ಚಿನ ನಿಗಾ ವಹಿಸಬೇಕು. ಮೊಬೈಲ್ ಬಳಕೆಯನ್ನು ತಮ್ಮ ವ್ಯಕ್ತಿತ್ವದ ಬೆಳವಣಿಗೆಗೆ ಹಾಗೂ ನಮ್ಮ ಬದುಕಿಗೆ ಅನುಕೂಲವಾಗುವಂತಹ ವಿಷಯಗಳಿಗೆ ಬಳಕೆ ಮಾಡುವುದರಿಂದ ನಮ್ಮ ಬದುಕಿಗೆ ಅನುಕೂಲವಾಗುತ್ತದೆ. ಆದರೆ ಮೊಬೈಲ್ ಅನ್ನು ದುರ್ಬಳಕೆ ಮಾಡಿಕೊಂಡರೆ ಅದು ನಮ್ಮ ವ್ಯಕ್ತಿತ್ವದ ಮೇಲೆ ಅತ್ಯಂತ ಕೆಟ್ಟ ಪರಿಣಾಮ ಬೀರುತ್ತದೆ. ಇದರಿಂದ ಮೊಬೈಲ್ ಬಳಕೆ ಬಗ್ಗೆ ಎಚ್ಚರ ಇರಬೇಕು ಎಂದರು

ಸಮಾರಂಭದಲ್ಲಿ ವಿದ್ಯಾರ್ಥಿಗಳು ವಿವಿಧ ವೇಷ ಭೂಷಣಗಳನ್ನು ತೊಟ್ಟು ವಿವಿಧ ಕಲೆಗಳನ್ನು ಪ್ರದರ್ಶನ ಮಾಡುವ ಮೂಲಕ ಎಲ್ಲರ ಗಮನ ಸೆಳೆದರು.

ಈ ಸಂದರ್ಭದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳು ಹಾಗೂ ಪೋಷಕರುಗಳಿಗೆ ಬಹುಮಾನಗಳನ್ನು ವಿತರಣೆ ಮಾಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಕಾವೇರಿ ನದಿ ಸ್ವಚ್ಛತೆಯ ರಾಜ್ಯ ಸಂಯೋಜಕ ಚಂದ್ರಮೋಹನ್, ವನಿತಾ ಚಂದ್ರಮೋಹನ್, ಕೆ.ಪಿ.ಭಾರತಿ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷೆ ಸುವರ್ಣ, ಮಾಜಿ ಉಪಾಧ್ಯಕ್ಷೆ ಕುಸುಮ, ಮುಖಂಡರುಗಳಾದ ಎಸ್.ವೈ. ಹೇಮಂತ್, ಬಿಡಿಎಸ್ ಸುನಿಲ್, ಪತ್ರಕರ್ತ ಭಾಸ್ಕರ, ವಾಹನ ಚಾಲಕರ ಸಂಘದ ಅಧ್ಯಕ್ಷ ಮಂಜುನಾಥ್, ವಿ ಎಸ್ ಎಸ್ ಬಿ ಎನ್ ಮಾಜಿ ಅಧ್ಯಕ್ಷ ಪಾಪಣ್ಣ, ಎಸ್ ಡಿ ಎಂ ಸಿ ಯ ಸೋಮು, ವಿದ್ಯಾಸಂಸ್ಥೆಯ ಗೌರವಾಧ್ಯಕ್ಷ ಎಸ್.ಕೆ.ರಮೇಶ್, ಕಾರ್ಯದರ್ಶಿ ತ್ರಿವೇಣಿ, ಸಂಯೋಜಕಿ ಅರ್ಪಿತಸೇನ್, ಮುಖ್ಯ ಶಿಕ್ಷಕಿ ಯಶಸ್ವಿನಿ, ಶಿಕ್ಷಕರುಗಳಾದ ಪ್ರಜ್ವಲ್, ಹೀನಕೌಸರ್, ಅಶ್ವಿನಿ, ಕೃತಿಕ, ಮಾರುತಿ, ಮಂಜುನಾಥ್, ಪವಿತ್ರ, ಸಬ್ರಿನ್ ತಾಜ್, ಭವ್ಯ, ಲಕ್ಷ್ಮಿ ಸುಪ್ರಿತಾ, ಸುಮಾ, ಆಫ್ರಿನ್ ತಾಜ್, ರಶ್ಮಿ, ಹರ್ಷಿತ, ವಿದ್ಯಾರ್ಥಿಗಳು, ಪೋಷಕರುಗಳು ಇದ್ದರು.

## ಮಹಿಳಾ ಆಯೋಗದ ಮುಂದೆ ನೂರಾರು ಅಹವಾಲು । ಅಧ್ಯಕ್ಷರಿಂದ ಮಗುವಿಗೆ ನಾಮಕರಣ

# ಪೊಲೀಸರಿಗೆ ಲಿಂಗ ಸೂಕ್ಷ್ಮತೆಯ ಅರಿವಿರಬೇಕು : ಡಾ: ನಾಗಲಕ್ಷ್ಮೀ ಚೌಧರಿ

**ತುಮಕೂರು:** ಜಿಲ್ಲೆಯಲ್ಲಿರುವ ಪೊಲೀಸ್ ಠಾಣೆಗಳಲ್ಲಿ ಕೆಲಸ ಮಾಡುವ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಲಿಂಗ ಸೂಕ್ಷ್ಮತೆಯಿರಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ: ನಾಗಲಕ್ಷ್ಮೀ ಚೌಧರಿ ಕಿವಿಮಾತು ಹೇಳಿದ್ದಾರೆ.

ಜಿಲ್ಲೆಯ ಬಾಲಭವನದಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ ಮಹಿಳೆಯರ ದೂರು ಹಾಗೂ ಅಹವಾಲುಗಳನ್ನು ಆಲಿಸಿದ ಬಳಿಕ ಸುದ್ದಿಗೋಷ್ಠಿ ನಡೆಸಿ ಅವರು, ದೌರ್ಜನ್ಯಕ್ಕೊಳಗಾದ ಮಹಿಳೆಯರು ಪೊಲೀಸ್ ಠಾಣೆಗಳಿಗೆ ಹೋದ ಸಂದರ್ಭದಲ್ಲಿ ಪೊಲೀಸ್ ಠಾಣೆಯ ಅಧಿಕಾರಿಗಳು ಮಹಿಳೆಯರಿಗೆ ಸೌಜನ್ಯದ ಮಾತುಗಳನ್ನಾಡದೆ ಅಗೌರವದಿಂದ ನಡೆಸಿಕೊಂಡ ಬಗ್ಗೆ ಸಭೆಯಲ್ಲಿ ಕೆಲವು ಪ್ರಕರಣಗಳನ್ನು ಗಮನಿಸಲಾಯಿತು. ಈ ಸಂದರ್ಭದಲ್ಲಿ ಪೊಲೀಸ್ ಇಲಾಖೆ ಅಥವಾ ಯಾವುದೇ ಸರ್ಕಾರಿ ಇಲಾಖೆ ವ್ಯವಹರಿಸುವಾಗ ಲಿಂಗ ಸೂಕ್ಷ್ಮತೆಯನ್ನು ಅರಿಯಬೇಕು ಎಂದು ಅವರು ಹೇಳಿದರು.

ಮಹಿಳೆಯರಿಗೆ ಸರಿಯಾದ ಸ್ಪಂದನೆ ಸಿಗಬೇಕೆಂಬ ಹಿನ್ನೆಲೆಯಲ್ಲಿ ಹಾಗೂ ಸಂಬಂಧಿಸಿದ ಅಧೀನ ಅಧಿಕಾರಿಗಳಿಗೆ ಹಾಗೂ ಪೊಲೀಸ್ ಸಿಬ್ಬಂದಿಗೆ ಸೂಚನೆ ನೀಡುವಂತೆ ತಿಳಿಸಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ ಎಂದರು.



ಮಹಿಳೆಯರ ಮೇಲೆ ನಡೆಯುವ ದೌರ್ಜನ್ಯ ಅಥವಾ ಇನ್ನಿತರೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಸರಿಯಾದ ಸ್ಪಂದನೆ ಸಿಗದಿದ್ದರೆ ಇಲಾಖೆ ಬಗ್ಗೆ ಜನರಲ್ಲಿ ವಿಶ್ವಾಸ ಹೋಗುತ್ತದೆ. ಅಂತಹ ಕಳಂಕವನ್ನು ತರದಂತೆ ಅಧೀನ ಅಧಿಕಾರಿಗಳಿಗೆ ಸೂಚಿಸಬೇಕು ಎಂದರು.

ಇಂದಿನ ಅಹವಾಲು ಸ್ವೀಕಾರ ಸಭೆಯಲ್ಲಿ ಮಹಿಳೆಯರ ಸಾಕಷ್ಟು ಸಮಸ್ಯೆಗಳಿಗೆ ಸ್ಪಂದನೆ ಸಿಕ್ಕಿದೆ ಎಂಬ ವಿಶ್ವಾಸ ನನಗಿದೆ. ಸಂಬಂಧಿಸಿದ ಇಲಾಖೆಗಳ ಎಲ್ಲಾ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದು, ಅಹವಾಲುಗಳಿಗೆ ಉತ್ತರ ನೀಡಿದ್ದಾರೆ ಹಾಗೂ ಸಮಸ್ಯೆಗೆ ಸ್ಪಂದನೆ ನೀಡಿದ್ದಾರೆ ಎಂದ ಅವರು, ಪ್ರತಿ ಬಾರಿ ಮಹಿಳಾ ಆಯೋಗವೇ ಸಮಸ್ಯೆಗಳನ್ನು ಬಗೆಹರಿಸಬೇಕೆಂಬ ಮನಸ್ಥಿತಿಯನ್ನು ಅಧಿಕಾರಿಗಳು ಬದಿಗಿರಿಸಿ ತಮ್ಮ ವ್ಯಾಪ್ತಿಯಲ್ಲಿ ಮಹಿಳೆಯರ ಕಲ್ಯಾಣಕ್ಕಾಗಿ ಹಾಗೂ ಅವರ ಸಮಸ್ಯೆಗೆ ಸ್ಪಂದನೆಯನ್ನು ನೀಡಬೇಕಿದೆ ಎಂದರು. ತಿಂಗಳಿಗೊಮ್ಮೆಯಾದರೂ ಪಂಚಾಯ್ತಿ ಮಟ್ಟದಲ್ಲಿ ಮಹಿಳೆಯರ ಗ್ರಾಮ ಸಭೆ ನಡೆಸಿದಲ್ಲಿ ಮಹಿಳೆಯರ ಎಷ್ಟೋ ಸಮಸ್ಯೆಗಳಿಗೆ ಪರಿಹಾರ ಸಿಗಲಿದೆ ಎಂದ ಅವರು, ಈ ಸಂಬಂಧ ಸರ್ಕಾರಕ್ಕೂ ಹಾಗೂ ಜಿಲ್ಲಾಡಳಿತಕ್ಕೂ ಪತ್ರ ಬರೆಯುವುದಾಗಿ ಡಾ: ನಾಗಲಕ್ಷ್ಮೀ ಚೌದರಿ ಅವರು ತಿಳಿಸಿದರು.

ಜಿಲ್ಲಾ ಸಾಂತ್ವನ ಕೇಂದ್ರ ಹಾಗೂ ಸಖಿ ಕೇಂದ್ರಗಳಿಂದ ಮಹಿಳೆಯರಿಗೆ, ತಾಯಂದಿರಿಗೆ ಸಹಾಯವಾಗುತ್ತಿದೆ. ಈ ನಿಟ್ಟಿನಲ್ಲಿ ಸಾಂತ್ವನ ಕೇಂದ್ರಗಳನ್ನು ಮುಚ್ಚದಂತೆ ಆಯೋಗವು ಸರ್ಕಾರಕ್ಕೆ ಪತ್ರ ಬರೆಯಲಿದೆ ಎಂದರು.

ರಾಜ್ಯದಾದ್ಯಂತ 29 ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡಿದ್ದು, ರಾಯಚೂರು ಬಿಟ್ಟರೆ ತುಮಕೂರು ಜಿಲ್ಲೆಯಲ್ಲಿ ಅತಿ ಹೆಚ್ಚು ಮಹಿಳಾ ಸಮಸ್ಯೆಗಳನ್ನು ಹಾಗೂ ದೂರುಗಳನ್ನು ಸ್ವೀಕರಿಸಲಾಗಿದೆ. ಬಾಣಂತಿಯರನ್ನೂ ಊರಿಂದ ಹೊರಗಿಡುವ ಅನಿಷ್ಠ ಪದ್ಧತಿ ಈ ಜಿಲ್ಲೆಯಲ್ಲಿ ಇದ್ದು, ಈ ಮೌಢ್ಯವನ್ನು ತೊಡೆದು ಹಾಕಲು ಜಿಲ್ಲಾಡಳಿತ ಕ್ರಮಕೈಗೊಳ್ಳಬೇಕು. ಕಾನೂನನ್ನು ನಿರ್ದಾಕ್ಷಿಣ್ಯವಾಗಿ ಜಾರಿಗಳಿಸಿದಾಗ ಮಾತ್ರ ಮೌಢ್ಯತೆಯ ಜನರಲ್ಲಿ ಜಾಗೃತಿ ಮೂಡಲಿದೆ. ಈ ನಿಟ್ಟಿನಲ್ಲಿ ಜಿಲ್ಲಾಡಳಿತ ತಕ್ಷಣ ಕ್ರಮ ವಹಿಸಬೇಕಿದೆ ಎಂದರು.

ಪ್ರಸಕ್ತ ವಿಶ್ವ ಮಹಿಳಾ ದಿನಾಚರಣೆಯ ಘೋಷವಾಕ್ಯ "ಹಕ್ಕು, ನ್ಯಾಯ ಮತ್ತು ಕ್ರಮ" ಎಂಬುದೇ ಆಗಿದೆ. ಮಹಿಳೆಯರು ಈ ನಿಟ್ಟಿನಲ್ಲಿ ತಮ್ಮ ಹಕ್ಕಿಗಾಗಿ, ನ್ಯಾಯ ಪಡೆಯುವುದಕ್ಕಾಗಿ ಹಾಗೂ ತಮ್ಮ ಬದುಕಿನಲ್ಲಿ ನೆಮ್ಮದಿ ತಂದುಕೊಳ್ಳುವುದಕ್ಕಾಗಿ ಕಾನೂನಿನ ಜ್ಞಾನ ಪಡೆಯಬೇಕು ಎಂಬುದು ಆಯೋಗದ ಆಶಯ ಎಂದು ಹೇಳಿದರು.

ಇದಕ್ಕೂ ಮುನ್ನ ಬೆಳಿಗ್ಗೆ 11 ಗಂಟೆಯಿಂದ ಆರಂಭವಾದ ಅಹವಾಲು ಸ್ವೀಕಾರ ಕಾರ್ಯಕ್ರಮದಲ್ಲಿ ಸಾವಿರಾರು ಮಹಿಳೆಯರು ಹಾಗೂ ವಿಕಲಚೇತನರು ವಿವಿಧ ಸಮಸ್ಯೆಗಳನ್ನು ಮುಂದಿರಿಸಿಕೊಂಡು ಅಧ್ಯಕ್ಷರ ಮುಂದೆ ತಮ್ಮ ಅಹವಾಲುಗಳನ್ನು ಇಟ್ಟರು. ಸ್ಥಳದಲ್ಲಿದ್ದ ಅಧಿಕಾರಿಗಳೊಂದಿಗೆ ಚರ್ಚಿಸಿ ಹಲವಾರು ಸಮಸ್ಯೆಗಳನ್ನು ಸ್ಥಳದಲ್ಲೇ ಬಗೆಹರಿಸಲಾಯಿತು.

ಕೌಟುಂಬಿಕ ಕಲಹಗಳು, ಆಸ್ತಿ ವಿವಾದಗಳು, ವಂಚನೆ ಹಾಗೂ ಮಹಿಳಾ ದೌರ್ಜನ್ಯ ಪ್ರಕರಣಗಳು ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ಅಹವಾಲುಗಳು ಸಭೆಯಲ್ಲಿ ವ್ಯಕ್ತವಾದವು.

ತುಮಕೂರಿನ ಹನುಮಂತಪುರದ ನಾಗಮಣಿ ಎಂಬ ಮಹಿಳೆ ತಮ್ಮ 3 ತಿಂಗಳ ಮಗುವಿನೊಂದಿಗೆ ಆಗಮಿಸಿ ಮಹಿಳೆಯರ ಕ್ಷೇಮಾಭಿವೃದ್ಧಿಗಾಗಿ ರಾಜ್ಯದಾದ್ಯಂತ ಪ್ರವಾಸ ಮಾಡಿ ಮಹಿಳೆಯರಿಗೆ ಶಕ್ತಿಯಾಗಿರುವ ಆಯೋಗದ ಅಧ್ಯಕ್ಷರಾದ ತಾವು ತಮ್ಮ ಮಗುವಿಗೆ ನಾಮಕರಣ ಮಾಡಬೇಕೆಂದು ಕೋರಿಕೆಯಿಟ್ಟಿದ್ದು ವಿಶೇಷವಾಗಿತ್ತು. ಈ ಸಂದರ್ಭದಲ್ಲಿ ಮಹಿಳಾ ಆಯೋಗದ ಅಧ್ಯಕ್ಷೆ ಡಾ: ನಾಗಲಕ್ಷ್ಮೀ ಚೌಧರಿ ಅವರು ಚಿರಾಗ್ ಎಂದು ನಾಮಕರಣ ಮಾಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿ ಈಶ್ವರಪ್ಪ, ಹೆಚ್ಚುವರಿ ಜಿಲ್ಲಾ ಪೊಲೀಸ್ ಅಧೀಕ್ಷಕ ಪುರುಷೋತ್ತಮ್, ತುಮಕೂರು ಮಹಾನಗರಪಾಲಿಕೆ ಆಯುಕ್ತೆ ಶುಭ ಬಿ., ರಾಜ್ಯ ಮಹಿಳಾ ಆಯೋಗದ ಕಾರ್ಯದರ್ಶಿ ರೂಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಡಾ: ಸಿದ್ದರಾಮಯ್ಯ ಮತ್ತಿತರರು ಉಪಸ್ಥಿತರಿದ್ದರು.

# ವಿಶ್ವ ಪ್ರಾಣಿ ಕಲ್ಯಾಣ ಮಂಡಳಿ ಮತ್ತು ಪಶು-ಪ್ರಾಣಿ ಬಲಿ ನಿರ್ಮೂಲನ ಜಾಗೃತಿ

**ಕೆ.ಆರ್.ನಗರ:** ದಿವ್ಯಾಲಯವಾಗಬೇಕು, ಜಾತ್ರಾ ಪರಿಸರಗಳು, ಧಾರ್ಮಿಕ ಸ್ಥಳಗಳು ಕಟುಕರ ಕೇರಿಗಳಾಗಬಾರದು, ಜೀವ ತೆಗೆಯುವ ಮೃತ್ಯು ಕೂಪವಾಗಬಾರದು, ಪ್ರಾಣಿಹಿಂಸೆ ಮತ್ತು ಮದ್ಯ ? ಮಾದಕ ಪದಾರ್ಥಗಳಿಂದ ಮುಕ್ತವಾಗಿರಬೇಕು ಎಂದು ವಿಶ್ವ ಪ್ರಾಣಿ ಕಲ್ಯಾಣ ಮಂಡಳಿ ಮತ್ತು ಪಶು-ಪ್ರಾಣಿ ಬಲಿ ನಿರ್ಮೂಲನ ಜಾಗೃತಿ ಮಹಾಸಂಘ ಹಾಗೂ ಬಸವ ಧರ್ಮ ಜ್ಞಾನ ಪೀಠದ ಅಧ್ಯಕ್ಷರಾದ ಶ್ರೀ ದಯಾನಂದ ಸ್ವಾಮೀಜಿಯವರು ಅವರು ಪ್ರತಿಪಾದಿಸಿದರು.

ಪಟ್ಟಣದ ಪತ್ರಕರ್ತರ ಭವನದಲ್ಲಿ ತಾಲೂಕಿನ ಸುಪ್ರಸಿದ್ಧ ಕಪ್ಪಡಿ ಜಾತ್ರಾ ಮಹೋತ್ಸ ಹಿನ್ನೆಲೆಯಲ್ಲಿ ಪ್ರಾಣಿಬಲಿ ನಿಷೇಧ ಕುರಿತು ಪತ್ರಿಕಾಗೋಷ್ಠಿ ನಡೆಸಿ ಸುದೀರ್ಘವಾಗಿ ಮಾತನಾಡಿದರು. ಕರ್ನಾಟಕ ರಾಜ್ಯ ಸರ್ಕಾರದ ಧಾರ್ಮಿಕ ದತ್ತಿ ಇಲಾಖೆ




ವ್ಯಾಪ್ತಿಗೆ ಸುಮಾರು 36,000 ದೇವಾಲಯಗಳು ಒಳಪಡುತ್ತವೆ. ನಾನು ಕರ್ನಾಟಕ ಮಾತ್ರವಲ್ಲದೆ ದೇಶದ ಎಲ್ಲಾ ರಾಜ್ಯಗಳಿಗೂ ಹಾಗೂ ನಮ್ಮ ಪಕ್ಕದ ನೇಪಾಳ ದೇಶಕ್ಕೂ ಭೇಟಿ ನೀಡಿ ಅಲ್ಲಿಯೂ ಪ್ರಾಣಿ ಬಲಿ ನಿಷೇಧಿಸುವಂತೆ ಹಲವಾರು ಜಾಗೃತಿ ಕಾರ್ಯಕ್ರಮಗಳನ್ನು ಮಾಡಿದ್ದೇನೆ ಎಂದು ತಿಳಿಸಿದರು.

ಮೈಸೂರು ಜಿಲ್ಲೆಯ ಕೆಆರ್ ನಗರ ತಾಲೂಕಿನ ಕಪ್ಪಡಿಯ ಶ್ರೀ ರಾಚಪ್ಪಾಜಿ ಜಾತ್ರೆಯು ಶಿವರಾತ್ರಿಯಿಂದ ಆರಂಭಗೊಂಡಿದ್ದು ಯುಗಾದಿಯ ವರೆಗೆ ಜರುಗಲಿದೆ. ಸುಮಾರು ಒಂದು ತಿಂಗಳ ಕಾಲ ನಡೆಯುವ ಈ ಜಾತ್ರೆಗೆ ಸಹಸ್ರಾರು ಭಕ್ತರು ಆಗಮಿಸಿ ದೇವರಿಗೆ ಪೂಜಾದಿ ಧಾರ್ಮಿಕ ಸೇವಾ ಕೈಂಕರ್ಯಗಳನ್ನು ಸಲ್ಲಿಸುತ್ತಿದ್ದಾರೆ. ಇದೇ ಸಂದರ್ಭದಲ್ಲಿ ಹಲವು ಭಕ್ತರು ದೇವರು ಮತ್ತು ಧರ್ಮದ ಹೆಸರಿನಲ್ಲಿ ಹರಕೆಯ ರೂಪದಲ್ಲಿ ಆಡು, ಕುರಿ, ಕೋಳಿ ಮುಂತಾದ ಪ್ರಾಣಿಗಳ ಬಲಿ ನೀಡಲಿದ್ದು ಇದು ಕರ್ನಾಟಕ ಪ್ರಾಣಿ ಬಲಿಗಳ ಪ್ರತಿಭಂದಕ ಅಧಿನಿಯಮ 1959 ಮತ್ತು ನಿಯಮಗಳು 1963 ಹಾಗೂ ತಿದ್ದುಪಡಿ ಕಾಯ್ದೆ 1975ರ ಪ್ರಕಾರ ಶಿಕ್ಷಾರ್ಹ ಅಪರಾಧವಾಗಿದೆ.

ಈ ಪ್ರಾಣಿಬಲಿಯನ್ನು ಮೇಲ್ಕಂಡ ಕಾನೂನು ಹಾಗೂ ಹೈ ಕೋರ್ಟ್ ಆದೇಶಗಳ ಅಡಿಯಲ್ಲಿ ಸಂಪೂರ್ಣವಾಗಿ ತಡೆಗಟ್ಟಬೇಕು ಹಾಗೂ ಪ್ರಾಣಿಗಳನ್ನು ಜಾತ್ರಾ ಪರಿಸರಕ್ಕೆ ಬಾರದಂತೆ ಕಟ್ಟೆಚ್ಚರ ವಹಿಸಬೇಕೆಂದು ಕರ್ನಾಟಕ ಸರ್ಕಾರ, ಮೈಸೂರು ಜಿಲ್ಲಾಡಳಿತ ಮತ್ತು ಕೆಆರ್ ನಗರ ತಾಲೂಕು ಆಡಳಿತ, ಪೊಲೀಸ್ ಇಲಾಖೆಗೆ ಮನವಿ ಮಾಡಿದ್ದು ಶಿವರಾತ್ರಿಯಿಂದ ಇಲ್ಲಿಯವರೆಗೂ ಮೈಸೂರು ಜಿಲ್ಲಾಡಳಿತ, ಕೆಆರ್ ನಗರ ತಾಲೂಕು ಆಡಳಿತ ಮತ್ತು ಪೊಲೀಸ್ ಇಲಾಖೆಯು ಕಪ್ಪಡಿ ಜಾತ್ರೆಯಲ್ಲಿ ವ್ಯಾಪಕ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಿದ್ದು ಇಲ್ಲಿಯವರೆಗೆ ಯಾವುದೇ ಪ್ರಾಣಿಬಲಿ ನಡೆಯದಂತೆ ವ್ಯಾಪಕ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದ್ದರ ಪರಿಣಾಮ ಪ್ರಾಣಿಬಲಿ ತಡೆಯುವ ಬಹುತೇಕ ಯಶಸ್ವಿಯಾಗಿದ್ದು ಪೊಲೀಸರ ಕಾರ್ಯ ವೈಖರಿ ತುಂಬಾ ಶ್ಲಾಘನೀಯವಾಗಿದೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಜನತೆಯಲ್ಲಿ ಜಾಗೃತಿ ಮೂಡಿಸಲು ಇಂದಿನಿಂದ ಜಾತ್ರೆ ಮುಗಿಯುವ ವರೆಗೆ ಜಿಲ್ಲೆಯ ಕೆಆರ್ ನಗರ ತಾಲೂಕಿನ ವಿವಿಧ ಭಾಗಗಳಲ್ಲಿ ಹಾಗೂ ಕಪ್ಪಡಿಯ ಶ್ರೀ ರಾಚಪ್ಪಾಜಿ ಜಾತ್ರಾ ಪರಿಸರ ಮತ್ತು ಸುತ್ತ ಮುತ್ತಲಿನ ಊರುಗಳಲ್ಲಿ ಸ್ವಾಮೀಜಿಯವರು ಅಹಿಂಸಾ-ಪ್ರಾಣಿದಯಾ-ಆದ್ಯಾತ್ಮ ಸಂದೇಶಯಾತ್ರೆಯನ್ನು ಕೈಗೊಳ್ಳುವುದಾಗಿ ತಿಳಿಸಿದರು.

# ಅನುದಾನ ಹಂಚಿಕೆಯಲ್ಲಿ ಕಾಂಗ್ರೆಸ್ ಸರ್ಕಾರದಿಂದ ಮಲತಾಯಿ ಧೋರಣೆ: ಜಿ.ಡಿ.ಹರೀಶ್ ಗೌಡ ಬೇಸರ

**ಹುಣಸೂರು:** ಪ್ರಗತಿ ಕಾಲೋನಿ ಅಭಿವೃದ್ಧಿ ಯೋಜನೆ ಅನುದಾನ ಹಂಚಿಕೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಮಲತಾಯಿ ದೋರಣೆ ಅನುಸರಿಸುತ್ತಿದೆ ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ವಿಧಾನಸಭೆ ಅಧಿವೇಶನದಲ್ಲಿ ತೀವ್ರ ಅಸಮಾಧಾನ ವ್ಯಕ್ತಪಡಿಸುವ ಮೂಲಕ ಕಾಂಗ್ರೆಸ್ ಸರ್ಕಾರದ ನೀತಿಯನ್ನು ಖಂಡಿಸಿದ್ದಾರೆ.

ಬುಧವಾರ ಅಧಿವೇಶನದಲ್ಲಿ ಹರೀಶ್‌ಗೌಡ ಚುಕ್ಕಿ ಪ್ರಶ್ನೆಯಡಿ ಅನುದಾನ ನೀಡುವಲ್ಲಿ ಇಲಾಖೆ ಹೇಗೆ ತಾರತಮ್ಯ ನೀತಿ ಅನುಸರಿಸುತ್ತಿದೆ ಎನ್ನುವುದನ್ನು ಎಳೆಎಳೆಯಾಗಿ ಸಭೆಯ ಮುಂದಿಟ್ಟರು. ಈ ವೇಳೆ ಮಾತನಾಡಿದ ಅವರು, 2023-24ರಲ್ಲಿ ಪ್ರಗತಿ ಕಾಲನಿಯ ಯೋಜನೆಯಡಿ ತಾಲೂಕಿಗೆ ನಯಾಪೈಸೆಯನ್ನು ಇಲಾಖೆ ನೀಡಿಲ್ಲ. 2024-25ರಲ್ಲಿ ಒಂದು ಕೋಟಿ ರೂ.ಗಳ ಅನುದಾನ ನೀಡಿದ್ದು, ಅದರಲ್ಲಿ 33 ಲಕ್ಷ ರೂ.ಗಳು ಮಾತ್ರ ಬಿಡುಗಡೆಯಾಗಿದೆ. ಮೈಸೂರು ಜಿಲ್ಲೆಯ ಇನ್ನಿತರ ತಾಲೂಕುಗಳಿಗೆ ಎಷ್ಟೆಷ್ಟು ಅನುದಾನ ನೀಡಲಾಗಿದೆ ಎನ್ನುವ ತಮ್ಮ ಪ್ರಶ್ನೆಗೆ ಸಚಿವರು ಉತ್ತರ ನೀಡಿಲ್ಲ.

ಆದರೆ ಕಳೆದ ವಿಧಾನಸಭೆ ಅಧಿವೇಶನದಲ್ಲಿ ನಾನು ಕೇಳಿದ್ದ ಚುಕ್ಕಿಯಿಲ್ಲದ ಪ್ರಶ್ನೆಗೆ ಉತ್ತರ ನೀಡಿದ್ದು ಅದರಂತೆ ಜಿಲ್ಲೆಗೆ ಪ್ರಗತಿ ಕಾಲನಿ ಯೋಜನೆಯಡಿ ಒಟ್ಟು 70 ಕೋಟಿ ರೂ.ಗಳ ಅನುದಾನ ನೀಡಲಾಗಿದೆ. ಈ ಪೈಕಿ ವರುಣಾ ವಿಧಾನಸಭೆ ಕ್ಷೇತ್ರಕ್ಕೆ 14.25 ಕೋಟಿ ರೂಪಾಯಿ, ಪಿರಿಯಾಪಟ್ಟಣಕ್ಕೆ 9.65 ಕೋಟಿ ರೂ, ಕೆ.ಆರ್.ನಗರಕ್ಕೆ 7 ಕೋಟಿ ರೂಗಳು, ಎಚ್.ಡಿ.ಕೋಟೆ 8.45 ಕೋಟಿ ರೂ.ಗಳು, ನಂಜನಗೂಡು 7 ಕೋಟಿ, ಚಾಮುಂಡೇಶ್ವರಿ 3.50



ಕೋಟಿ ರೂ., ಟಿ.ನರಸೀಪುರ 8.85 ಕೋಟಿ ರೂ.ಗಳು, ಚಾಮರಾಜ ಕ್ಷೇತ್ರ 5 ಕೋಟಿ, ನರಸಿಂಹರಾಜ ಕ್ಷೇತ್ರ 4 ಕೋಟಿ ರೂ.ಗಳ ಅನುದಾನ ನೀಡಲಾಗಿದೆ. ಆದರೆ, ಹುಣಸೂರು ಕ್ಷೇತ್ರಕ್ಕೆ ಕೇವಲ ಒಂದು ಕೋಟಿ ರೂ.ಗಳು ಹಾಗೂ ಕೃಷ್ಣರಾಜ ಕ್ಷೇತ್ರಕ್ಕೆ 1 ಕೋಟಿ ರೂ.ಗಳ ಅನುದಾನ ನೀಡಲಾಗಿದೆ. ಯಾವ ಮಾನದಂಡದಡಿ ಅನುದಾನ ವಿತರಿಸಿದ್ದೀರಿ ಎನ್ನುವುದರ ಕುರಿತು ಸಚಿವರು ಮಾಹಿತಿ ನೀಡಿಲ್ಲವೆಂದು ಬೇಸರಿಸಿದರು.

ಹುಣಸೂರು ತಾಲೂಕಿನಲ್ಲಿ ಶೇ.70ರಷ್ಟು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತರು ಮತ್ತು ಹಿಂದುಳಿದವರು ಇರುವ ತಾಲೂಕು ಆಗಿದೆ. ಸರ್ಕಾರ ಇದೀಗ ನೀಡಿರುವ ಅನುದಾನ ಒಟ್ಟು ಜನಸಂಖ್ಯೆಯ ಶೇ.20ರಷ್ಟಿರುವ ಪರಿಶಿಷ್ಟ ಜಾತಿ, ಶೇ.15ರಷ್ಟಿರುವ ಪರಿಶಿಷ್ಟ ಪಂಗಡದ ಜನರ ಕಾಲನಿಗಳಿಗೆ ಹಂಚಲು ಸಾಧ್ಯವೆ, 200ಕ್ಕೂ ಹೆಚ್ಚು ಹಳ್ಳಿಗಳನ್ನು ಹೊಂದಿರುವ ತಾಲೂಕಿಗೆ 1 ಕೋಟಿ ರೂ.ಹಂಚಿದರೆ 1ರಿಂದ 2ಮೀಟರ್ ಚರಂಡಿ ನಿರ್ಮಿಸಬಹುದಷ್ಟೆ. ರಾಜ್ಯ ಸರ್ಕಾರ ಅನುದಾನ ಹಂಚಿಕೆಯಲ್ಲಿ ತಾರತಮ್ಯ ನೀತಿ ಅನುಸರಿಸಿದಂತೆ ತೋರುತ್ತಿದೆ. ಪರಿಶಿಷ್ಟ ಪಂಗಡಕ್ಕಂತೂ ಅನುದಾನವೇ ಇಲ್ಲ. ಜಿಲ್ಲೆಗೆ 70 ಕೋಟಿ ಹಂಚಿಕೆ ಮಾಡಿದ್ದು, ಹುಣಸೂರಿಗೆ ಕೇವಲ ಒಂದು ಕೋಟಿ ರೂ.ಹಂಚಿಕೆ ಆಗಿದೆ ಅಂದರೆ ಏನರ್ಥ ಎಂದು ಬೇಸರಿಸಿದರು.

ಸದಸ್ಯ ಕೃಷ್ಣಪ್ಪ ಮಧ್ಯೆ ಪ್ರವೇಶಿಸಿ, ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ಸಾಮಾಜಿಕ ನ್ಯಾಯಕ್ಕಾಗಿ ಹೋರಾಟ ನಡೆಸಿ ಬಂದಿರುವ ಮಹದೇವಪ್ಪನವರು ಈ ರೀತಿಯ ತಾರತಮ್ಯ ನೀತಿ ಅನುಸರಿಸುತ್ತಾರೆಯೇ ಎಂದರೆ ಏನಿದು ಎಂದು ಬೇಸರಿಸಿದರು.

ಶಾಸಕ ಹರೀಶ್‌ಗೌಡರ ಪ್ರಶ್ನೆಗೆ ಉತ್ತರಿಸಿದ ಸಚಿವ ಡಾ.ಎಚ್.ಸಿ.ಮಹದೇವಪ್ಪ, ಪ್ರಗತಿ ಕಾಲನಿ ಯೋಜನೆಯಡಿ ಹುಣಸೂರಿಗೆ ಒಂದು ಕೋಟಿ ರೂ. ನೀಡಲಾಗಿದ್ದು, ಅಂಬೇಡ್ಕರ್ ಮತ್ತು ಬಾಬು ಜಗಜೀವನರಾಂ ಭವನ ನಿರ್ಮಾಣಕ್ಕೆ 270 ಲಕ್ಷ ರೂ.ಗಳ (9 ಕಾಮಗಾರಿಗಳು) ಅನುದಾನ ನೀಡಲಾಗಿದೆ. ಈ ಪೈಕಿ 7 ಕಾಮಗಾರಿಗಳು ಪ್ರಗತಿಯಲ್ಲಿದ್ದು, 2 ಕಾಮಗಾರಿ ಆರಂಭಿಸಬೇಕಿದೆ. ಅನುದಾನ ಹಂಚಿಕೆಯಲ್ಲಿ ಯಾವುದೇ ತಾರತಮ್ಯ ಮಾಡಿಲ್ಲ. ಈ ಹಿಂದೆ ತಾವು ಲೋಕೋಪಯೋಗಿ ಸಚಿವರಾಗಿದ್ದ ವೇಳೆಯೇ ನೂರಾರು ಕೋಟಿ ರೂ.ಗಳ ಅನುದಾನದಡಿ ತಾಲೂಕಿನಾದ್ಯಂತ ಪರಿಶಿಷ್ಟ ಜಾತಿ, ಜನಾಂಗಗಳ ಕಾಲನಿಯನ್ನು ಕಾಂಕ್ರೀಟೀಕರಣ ಮಾಡಲಾಗಿದೆ. ತಾರತಮ್ಯ ಮಾಡುವ ಉದ್ದೇಶವೂ ಇಲ್ಲ, ಮಾಡುವುದೂ ಇಲ್ಲ ಎಂದರು.

# ನೂತನ ಜಿಲ್ಲಾ ಸಮಿತಿ ಪದಾಧಿಕಾರಿಗಳ ಅವಿರೋಧ ಆಯ್ಕೆ

**ಮಂಡ್ಯ:** ಕೆ.ಆರ್.ಪೇಟೆ ಪಟ್ಟಣದಲ್ಲಿ ಇತ್ತೀಚೆಗೆ ನಡೆದ 6ನೇ ಕೃಷಿ ಮತ್ತು ಗ್ರಾಮೀಣ ಕಾರ್ಮಿಕರ ಜಿಲ್ಲಾ ಸಮ್ಮೇಳನದಲ್ಲಿ ನೂತನ ಜಿಲ್ಲಾ ಸಮಿತಿ ರಚಿಸಲಾಗಿದ್ದು, ಎಲ್ಲ ಪದಾಧಿಕಾರಿಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಕೃಷಿ ಮತ್ತು ಗ್ರಾಮೀಣ ಕಾರ್ಮಿಕರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿ.ಹನುಮೇಶ್ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾ.9 ಮತ್ತು 10ರಂದು ನಡೆದ ಸಮ್ಮೇಳನದಲ್ಲಿ 1,15,000 ಪ್ರತಿನಿಧಿಸಿದ 231 ಪದಾಧಿಕಾರಿಗಳು ಭಾಗವಹಿಸಿದ್ದರು.

18 ಮಂದಿ ಸಂಗಾತಿಗಳು (ಕಾಂಮ್ರೆಡ್) ಭಾಗವಹಿಸಿ ಹಲವು ವಿಷಯಗಳ ಚರ್ಚೆ ಮಾಡಲಾಯಿತು ಎಂದು ಹೇಳಿದರು. ನೂತನ ಜಿಲ್ಲಾ ಸಮಿತಿಗೆ ಜಿಲ್ಲಾಧ್ಯಕ್ಷರಾಗಿ ಬಿ.ಎಂ.ಶಿವಮಲ್ಲಯ್ಯ, ಪ್ರಧಾನ ಕಾರ್ಯದರ್ಶಿಯಾಗಿ ಬಿ.ಹನುಮೇಶ್, ಉಪಾಧ್ಯಕ್ಷರಾಗಿ ಎನ್.ಸುರೇಂದ್ರ, ಕೆ.ಬಸವರಾಜ್, ಸರೋಜಮ್ಮ, ಟಿ.ಪಿ.ಅರುಣ್‌ಕುಮಾರ್, ಟಿ.ಎಚ್.ಆನಂದ್, ಅಮಾಸಯ್ಯ, ಆರ್. ರಾಜು, ಜಿ.ಎಚ್.ಗಿರೀಶ್, ಮಂಜುಳ ವಿಷಕಂಠೇಗೌಡ, ಸಹಕಾರ್ಯದರ್ಶಿಯಾಗಿ ಲಕ್ಷ್ಮಿ, ಜ್ಯೋತಿ, ಕಪನಿಗೌಡ, ರಾಮಯ್ಯ, ಕೆ.ಎಚ್.ಪುಟ್ಟಮಾದೇಗೌಡ, ಕೆ.ಆರ್. ಅಜಯ್‌ಕುಮಾರ್, ಎಂ.ಎಸ್.ಸಂತೋಷ್, ಶುಭಾವತಿ, ವೈ.ಎಸ್.ಶೋಭ ಸೇರಿದಂತೆ 68 ಮಂದಿಯ ಸಮಿತಿ ರಚಿಸಲಾಗಿದೆ ಎಂದರು.

ಸಮ್ಮೇಳನದಲ್ಲಿ ಕೃಷಿ ಮತ್ತು ಗ್ರಾಮೀಣ ಕಾರ್ಮಿಕರಿಗಾಗಿ ಪ್ರತ್ಯೇಕ ಕಲ್ಯಾಣ ಮಂಡಳಿ ರಚಿಸಿ, ಸಮೀಕ್ಷೆಯ ಮೂಲಕ ಗುರುತಿನ ಚೀಟಿ ನೀಡಬೇಕು. ವಿಬಿಜಿ ರಾಮ್ ಜಿ ಕಾಯ್ದೆ ಹಿಂಪಡೆಯಬೇಕು. ರಾಜ್ಯ ಸರಕಾರ ಉದ್ಯೋಗ ಖಾತ್ರಿಗೆ ಹಣ ಮೀಸಲಿಟ್ಟು ಕೆಲಸ ನೀಡಬೇಕು. ಕನಿಷ್ಠ ಕೂಲಿಯನ್ನು 1,000 ರೂ.ಗೆ ಹೆಚ್ಚಿಸಿ ಘೋಷಿಸಬೇಕು.ಜಿಲ್ಲೆಯ ವಸತಿರಹಿತ ಕುಟುಂಬಗಳಿಗೆ ತುರ್ತಾಗಿ ನಿವೇಶನ ಹಂಚಿಕೆ ಮಾಡಬೇಕು. ಕೇರಳ ಮಾದರಿಯಲ್ಲಿ ಮನೆ ನಿರ್ಮಿಸಿಕೊಳ್ಳಲು 7,50,000 ರೂ. ಸಹಾಯಧನ ನೀಡಬೇಕು.ಕೃಷಿ ಕಾರ್ಮಿಕರ ಮಕ್ಕಳಿಗೆ ಮೆಡಿಕಲ್, ಐ.ಐ.ಟಿ ಸೇರಿದಂತೆ ಉನ್ನತ ಶಿಕ್ಷಣದಲ್ಲಿ ಶೇ.15ರಷ್ಟು ಉಚಿತ ಸೀಟುಗಳನ್ನು ಕಾಯ್ದಿರಿಸಬೇಕು. ಸರ್ಕಾರಿ ಶಾಲೆಗಳ ಮುಚ್ಚುವಿಕೆಯನ್ನು ನಿಲ್ಲಿಸಿ, ಸರ್ಕಾರಿ ನೌಕರರ ಮಕ್ಕಳು ಕಡ್ಡಾಯವಾಗಿ ಸರ್ಕಾರಿ ಶಾಲೆಗಳಲ್ಲೇ ಓದುವಂತೆ ಕಾನೂನು ರೂಪಿಸಬೇಕು.ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 24ಘ7 ಉಚಿತ ಚಿಕಿತ್ಸೆ ಸಿಗುವಂತೆ ಕ್ರಮ ಕೈಗೊಳ್ಳಬೇಕು. ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಬಲವಂತದ ಸಾಲ ವಸೂಲಾತಿ ತಡೆಗಟ್ಟಬೇಕು ಮತ್ತು ಬಡ ಕಾರ್ಮಿಕರಿಗೆ 2 ಲಕ್ಷ ರೂ.ವರೆಗೆ ಬಡ್ಡಿರಹಿತ ಬ್ಯಾಂಕ್ ಸಾಲ ನೀಡಬೇಕು.ಅಮೇರಿಕಾ, ಇಸ್ರೇಲ್ ಮತ್ತು ಇರಾನ್ ನಡುವಿನ ಯುದ್ಧದ ಪರಿಣಾಮವಾಗಿ ಬೆಲೆ ಏರಿಕೆ ತೀವ್ರವಾಗುತ್ತಿದ್ದು, ಕೇಂದ್ರ ಸರ್ಕಾರ ಯುದ್ಧ ನಿಲ್ಲಿಸಲು ಮಧ್ಯಸ್ಥಿಕೆ ವಹಿಸಬೇಕು ಎಂದ ನಿರ್ಣಯ ಕೈಗೊಳ್ಳಲಾಯಿತೆಂದು ತಿಳಿಸಿದರು. ನೂತನ ಸಮಿತಿಯ ಸಭೆ ನಡೆಸಿ ನಿರ್ಣಯಗಳ ಅನುಸಾರ ಬೇಡಿಕೆಗಳನ್ನು ಈಡೇರಿಸುವಂತೆ ಹೋರಾಟ ರೂಪಿಸಿ ಸರಕಾರವನ್ನು ಒತ್ತಾಯಿಸಲಾಗುವುದು ಎಂದು ಮಾಹಿತಿ ನೀಡಿದರು. ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಬಿ.ಎಂ. ಶಿವಮಲ್ಲಯ್ಯ, ಜಿಲ್ಲಾ ಸಂಚಾಲಕ ಕೆ.ಹೆಚ್. ಪುಟ್ಟಮಾದೇಗೌಡ, ಉಪಾಧ್ಯಕ್ಷರಾದ ಶುಭವತಿ, ಟಿ.ಪಿ.ಅರುಣ್‌ಕುಮಾರ್, ಅಮಾಸಯ್ಯ, ರಾಜು ಇದ್ದರು.







ಸಿನಿಮಾ ವರದಿ: ಬಿ.ಜಿ.ರವಿಕುಮಾರ್





## ಸದ್ದು ಮಾಡುತ್ತಿದೆ ಧುರಂಧರ್ ಪ್ರತೀಕಾರ ಟ್ರೇಲರ್

ಜಿಯೋ ಸ್ಟುಡಿಯೋಸ್ ಮತ್ತು ಬಿ62 ಸ್ಟುಡಿಯೋಸ್ ನಿರ್ಮಾಣದ ?ಧುರಂದರ್ ಪ್ರತೀಕಾರ? ಚಿತ್ರದ 3.25 ನಿಮಿಷದ ಕನ್ನಡ ಸೇರಿದಂತೆ ಎಲ್ಲಾ ಭಾಷೆಗಳ ಟ್ರೇಲರ್ ಮೊನ್ನೆಯಷ್ಟೇ ಹೊರಬಂದಿದೆ. ಬಿಡುಗಡೆಯಾದ ಕೇವಲ 48 ಗಂಟೆಗಳಲ್ಲಿ 312 ಮಿಲಿಯನ್ ವೀಕ್ಷಣೆ ಕಂಡುಬಂದಿದೆ. ರಣವೀರ್ ಸಿಂಗ್ ಅಭಿನಯ, ನಿರ್ದೇಶಕ ಆದಿತ್ಯ ಧರ್ ಅವರ ಸ್ಪೈ ಆಕ್ಷನ್ ಥ್ರಿಲ್ಲರ್ ಸೀಕ್ವೇಲ್‌ಗೆ ಅಭಿಮಾನಿಗಳು ಫಿದಾ ಆಗಿದ್ದಾರೆ.

ಪವರ್‌ಫುಲ್ ಹಿನ್ನಲೆ ಶಬ್ದ, ಚೂಪಾದ ಸಂಭಾಷಣೆಗಳು ಸಾಮಾಜಿಕ ಜಾಲತಾಣದಲ್ಲಿ ಸದ್ದು ಮಾಡುತ್ತಿದೆ. ತುಣುಕುಗಳಲ್ಲಿ ಜಸ್ಕಿರತ್‌ಸಿಂಗ್ ರಂಗಿ ಮತ್ತು ಹಮ್ಜಾ ಎಂಬ ಎರಡು ಅವತಾರಗಳು ಉಗ್ರ ತೀವ್ರತೆಯೊಂದಿಗೆ ಮರಳುತ್ತದೆ. ಹಾಗೂ ನಿರೂಪಣೆಯು ಶಕ್ತಿಶಾಲಿ ಪಾತ್ರಧಾರಿಗಳಿಂದ ಆಳವಾಗಿ ಹೊರ ಹೊಮ್ಮಿದೆ. ಆರ್.ಮಾಧವನ್ ಕಾರ್ಯತಂತ್ರದ ಮಾಸ್ಟರ್ ಮೈಂಡ್, ಅರ್ಜುನ್‌ರಾಂಪಾಲ್ ಐಎಎಸ್ ಮೇಜರ್ ಇಕ್ಬಾಲ್ ಪಾತ್ರಗಳು ಉತ್ಸಾಹಭರಿತ ತಿರುವು ನೀಡುತ್ತದೆ. ಸಂಜಯ್‌ದತ್ ಅವರು ಎಸ್‌ಪಿ ಚೌಧರಿ ಅಸ್ಲಂ ಆಗಿ ಕಚ್ಚಾ ಕಮಾಂಡಿಂಗ್ ಪಡೆಯನ್ನು ನಿರ್ವಹಿಸಿದ್ದಾರೆ. ಉನ್ನತವಾದ ಸಾಹಸ, ವಿನ್ಯಾಸಗೊಳಿಸಲಾದ ಕ್ಷಣಗಳೊಂದಿಗೆ ಟ್ರೇಲರ್ ಅಭೂತಪೂರ್ವ ಪ್ರಮಾಣದಲ್ಲಿ ಏರಿಸಲಾದ ಸೇಡಿನ ಕಥೆಯೊಂದಿಗೆ ಧ್ವನಿಯನ್ನು ಹೊಂದಿಸಿದೆ.

ಜಿಯೋ ಸ್ಟುಡಿಯೋಸ್ ಪ್ರಸ್ತುತಪಡಿಸುವ ಬಿ62 ಸ್ಟುಡಿಯೋಸ್ ನಿರ್ಮಾಣದ, ಆದಿತ್ಯ ಧರ್ ನಿರ್ದೇಶನದ ಚಿತ್ರವು ಹಿಂದಿ, ತಮಿಳು, ತೆಲುಗು, ಕನ್ನಡ ಮತ್ತು ಮಲಯಾಳಂ ಭಾಷೆಗಳಲ್ಲಿ ಬಿಡುಗಡೆಯಾಗಲಿದೆ. ಅಪರಿಚಿತ ವ್ಯಕ್ತಿಗಳ ಕಥೆ ಜಾಗತಿಕವಾಗಿ 2026ರ ಮಾರ್ಚ್ 19ರಂದು ಚಿತ್ರಮಂದಿರಗಳಲ್ಲಿ ವಿಶ್ವದಾದ್ಯಂತ ಅನಾವರಣಗೊಳ್ಳಲಿದೆ.

## ಮಹಿಳಾ ಆಟೋ ಚಾಲಕಿಯರು "ಸುವರ್ಣ ಸಖಿ"ಯರು!!



ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಪ್ರಯುಕ್ತ "ಸುವರ್ಣ ಸಖಿ" ಎಂಬ ವಿನೂತನ ಕಾರ್ಯಕ್ರಮವನ್ನುಸ್ಟಾರ್ ಸುವರ್ಣ ಏರ್ಪಡಿಸಿತ್ತು

ಮಹಿಳೆ ಎಂದರೆ ಕೇವಲ ಒಂದು ಪದವಲ್ಲ, ಅದು ಶಕ್ತಿ, ಪ್ರೀತಿ, ತಾಳ್ಮೆ ಹಾಗು ತ್ಯಾಗದ ಪ್ರತೀಕ. ಆಧುನಿಕ ಸಮಾಜದಲ್ಲಿರೋ ಕಟ್ಟುಪಾಡುಗಳನ್ನೂ ಮೀರಿ ಪ್ರತಿ ಕ್ಷೇತ್ರದಲ್ಲೂ ಆಕೆ ಸಾಧನೆಯ ಶಿಖರವನ್ನು ಮುಟ್ಟುತ್ತಿದ್ದಾಳೆ. ಮೊದಲೆಲ್ಲ ಪುರುಷರೇ ಆಟೋ ಡ್ರೈವರ್ ಗಳಾಗಿ ಕಾರ್ಯ ನಿರ್ವಹಿಸುತ್ತಿದ್ದರು, ಆದರೆ ಈಗ ತಾನು ಯಾವುದಕ್ಕೂ ಕಮ್ಮಿಯಿಲ್ಲ ಎಂಬ ದೃಢ ನಿರ್ಧಾರದೊಂದಿಗೆ ಮಹಿಳಾ ಆಟೋ ಮಣಿಯರು ರಸ್ತೆಗೆ ಲಗ್ಗೆಯಿಟ್ಟಿದ್ದಾರೆ.

ಇದೆಲ್ಲದರ ಜೊತೆ ತಮ್ಮ ಕಷ್ಟ, ನೋವು, ಕುಟುಂಬ ಎಲ್ಲವನ್ನು ಬದಿಗಿಟ್ಟು, ಸಮಾಜದಲ್ಲಿ ಸವಾಲುಗಳನ್ನು ಧೈರ್ಯದಿಂದ ಎದುರಿಸಿ ಮುನ್ನುಗ್ಗುತ್ತಿರುವ ಬೆಂಗಳೂರಿನ ಒಂದಷ್ಟು ಮಹಿಳಾ ಆಟೋ ಚಾಲಕಿಯರಿಗೆ ಸ್ಟಾರ್ ಸುವರ್ಣ ವಾಹಿನಿಯು ಗೌರವಿಸಿ, ಕಿಟ್ ನೀಡುವುದರೊಂದಿಗೆ ನಿಮ್ಮೊಂದಿಗೆ ನಾವಿದ್ದೇವೆ ಎಂದು ಸಾಬೀತು ಪಡಿಸಿದೆ.

## ಆಪರೇಷನ್ ಡ್ರೀಮ್ ಥಿಯೇಟರ್ 999 ನಲ್ಲಿ ಏಜೆಂಟ್ ಕಾವೇರಿಯಾದ ನಟಿ ಅದಿತಿ ಬಾಲನ್



ಆಪರೇಷನ್ ಡ್ರೀಮ್ ಥಿಯೇಟರ್ 666ನಲ್ಲಿ ಏಜೆಂಟ್ ಕಾವೇರಿಯಾದ ನಟಿ ಅದಿತಿ ಬಾಲನ್

ನಿರ್ದೇಶಕ ಹೇಮಂತರಾವ್ ಆಪರೇಷನ್ ಡ್ರೀಮ್ ಥಿಯೇಟರ್ 666 ಚಿತ್ರ ತಂಡ ಮತ್ತೊಂದು ಪ್ರಮುಖ ಪಾತ್ರವನ್ನು ಘೋಷಿಸಿದೆ. ಅದಿತಿ ಬಾಲನ್ ಅವರು ಏಜೆಂಟ್ ಕಾವೇರಿಯಾಗಿ ಕಾಣಿಸಿಕೊಳ್ಳಲಿದ್ದಾರೆ.

ಶಿವರಾಜಕುಮಾರ್ ಏಜೆಂಟ್ ಪ್ರಕಾಶ್ ಆಗಿ,ಡಾಲಿ ಧನಂಜಯ್ ಅವರು ಏಜೆಂಟ್ ಶಂಕರ್ ಆಗಿ ನಟಿಸಿದ್ದು ಇದೀಗ ನಟಿ ಅದಿತಿ ಬಾಲನ್ ಏಜೆಂಟ್ ಕಾವೇರಿಯಾಗಿ ಪರಿಚಯಿಸಲಾಗಿದೆ..

ಐದನೇ ಶೆಡ್ಯೂಲನ್ನು ಮುಗಿಸಿದ್ದು, ಪೋಸ್ಟ್ ಪ್ರೊಡಕ್ಷನ್ ಹಂತಕ್ಕೆ ಕಾಲಿಡುತ್ತಿದೆ.

ಹೇಮಂತ್ ರಾವ್ ನಿರ್ದೇಶನದ ಈ ಚಿತ್ರದಲ್ಲಿ ವೈಶಾಖ್ ಜೆ ಗೌಡ, ವೈಶಾಖ್ ಜೆ ಫಿಲಂಸ್ ಲಾಂಛನದಲ್ಲಿ ನಿರ್ಮಾಣ ಮಾಡಿರುತ್ತಾರೆ. ಈ ಚಿತ್ರಕ್ಕೆ ಚರಣ್ ರಾಜ್ ಸಂಗೀತ ನಿರ್ದೇಶನ ಇದೆ.

ಕನ್ನಡ ಹಾಗೂ ತೆಲುಗಿನಲ್ಲಿ ಬಿಡುಗಡೆ ಚಿತ್ರ ಬಿಡುಗಡೆ ಆಗಲಿದೆ.

## ವಸಿಷ್ಠ ಸಿಂಹ ಅಭಿನಯದ `ಕಡಲ್ ಕೋಟೆ' ಚಿತ್ರ ಪ್ರಾರಂಭ

### ಶ್ರೀ ಕ್ಷೇತ್ರ ಗಣೇಶಪುರದ ಶ್ರೀ ಮಹಾ ಗಣಪತಿ ದೇವಸ್ಥಾನದಲ್ಲಿ ಅದ್ದೂರಿ ಚಾಲನೆ

ಜಾನಕಿ ಕಂಬೈನ್ಸ್ ಲಾಂಛನದಲ್ಲಿ ಧರ್ಮೇಂದ್ರ ನಿರ್ಮಿಸುತ್ತಿರುವ, ರಂಜಿತ್ ಕುಮಾರ್ ಗೌಡ ಕಥೆ-ಚಿತ್ರಕಥೆ ಬರೆದು ನಿರ್ದೇಶಿಸುತ್ತಿರುವ ಮತ್ತು ವಸಿಷ್ಠ ಸಿಂಹ ನಾಯಕನಾಗಿ ಅಭಿನಯಿಸುತ್ತಿರುವ ಕಡಲ್ ಕೋಟೆ ಚಿತ್ರದ ಮುಹೂರ್ತ ಇತ್ತೀಚೆಗೆ, ಸುರತ್ಕಲ್‌ನ ಶ್ರೀ ಕ್ಷೇತ್ರ ಗಣೇಶಪುರದ ಶ್ರೀ ಮಹಾ ಗಣಪತಿ ದೇವಸ್ಥಾನದಲ್ಲಿ ವಿದ್ಯುಕ್ತವಾಗಿ ನಡೆಯಿತು.

ಖ್ಯಾತ ಭಾಗವತರಾದ ಪಟ್ಲ ಸತೀಶ್ ಶೆಟ್ಟಿ ಮೊದಲ ದೃಶ್ಯಕ್ಕೆ ಕ್ಲಾಪ್ ಮಾಡಿದರೆ, ಮಂಗಳೂರಿನ ಲೋಕಾಯುಕ್ತ ಎಸ್.ಪಿ ಯಾಗಿರುವ ಬಿ.ಪಿ. ದಿನೇಶ್ ಕುಮಾರ್ ಕ್ಯಾಮೆರಾ ಚಾಲನೆ ಮಾಡಿದರು. ನಿವೃತ್ತ ಲೋಕಾಯುಕ್ತ ಕಮಿಷನರ್ ನಟರಾಜ್, ಬಿರುವೆರ್ ಕುಡ್ಲ ಸ್ಥಾಪಕಾಧ್ಯಕ್ಷರಾದ ಉದಯ್ ಪೂಜಾರಿ ಉಪಸ್ಥಿತರಿದ್ದು, ಚಿತ್ರತಂಡಕ್ಕೆ ಶುಭ ಹಾರೈಸಿದರು.

ಇದೊಂದು ಕರಾವಳಿ ಪ್ರದೇಶದಲ್ಲಿ ನಡೆಯುವ ಗ್ಯಾಂಗ್‌ಸ್ಟರ್ ಕಥೆ ಎಂದು ವಿವರಿಸಿದ ನಿರ್ದೇಶಕ ರಂಜಿತ್ ಕುಮಾರ್ ಗೌಡ, ಚಿತ್ರದಲ್ಲಿ ಫ್ಯಾಮಿಲಿ ಸೆಂಟಿಮೆಂಟ್, ಸ್ನೇಹ, ಪ್ರೀತಿ ಎಲ್ಲವೂ ಇರುತ್ತದೆ. ದುಡ್ಡಿನ ಹಿಂದೆ ಮನುಷ್ಯ ಬಿದ್ದರೆ, ಅವನ ಜೀವನದಲ್ಲಿ ಏನೆಲ್ಲಾ ಘಟಿಸುತ್ತದೆ ಎಂಬುದನ್ನು ಚಿತ್ರದಲ್ಲಿ ತೋರಿಸುವ ಪ್ರಯತ್ನ ಮಾಡುತ್ತಿದ್ದೇವೆ. ಹಾರ್ಬರ್ ಮೇಲೆ ಹಿಡಿತ ಸಾಧಿಸುವ ಕಥೆ ಇದು. ಹಾರ್ಬರ್ ನಲ್ಲಿ ನಡೆಯುವ ಶೋಷಣೆ ಮತ್ತು ಸಂಘರ್ಷ, ಇದರ ನಡುವೆ ಬೆಂಕಿಯಲ್ಲಿ ಅರಳಿದ ಹೂವು ಎನ್ನುವಂತೆ ನಾಯಕ ಹೇಗೆ ಎದ್ದು ಬರುತ್ತಾನೆ ಎಂದು ಈ ಚಿತ್ರದಲ್ಲಿ ಹೇಳುತ್ತಿದ್ದೇವೆ. ಇದೊಂದು ಪಕ್ಕಾ ಕಮರ್ಷಿಯಲ್ ಚಿತ್ರ. ಒಂದಿಷ್ಟು ನೈಜ ಘಟನೆಗಳನ್ನು ಆಧರಿಸಿ ಈ ಕಥೆ ಮಾಡಿದ್ದೇವೆ. ಉಡುಪಿ, ಸುರತ್ಕಲ್, ಮಂಗಳೂರು ಹಾರ್ಬರ್, ಬೇಂಗ್ರೆ ಮುಂತಾದ ಕಡೆ ಸುಮಾರು 65 ದಿನಗಳಲ್ಲಿ ಚಿತ್ರೀಕರಣ ಮಾಡುವ ಯೋಚನೆ ಇದೆ. ಕಥೆಗೆ ಪೂರಕವಾದ ಲೊಕೇಶನ್‌ಗಳು ಸಿಕ್ಕಿವೆ. ಚಿತ್ರದಲ್ಲಿ ಐದು ಹಾಡುಗಳಿವೆ ಎಂದು ಹೇಳಿದರು.




ನಿರ್ಮಾಪಕ ಧರ್ಮೇಂದ್ರ ಅವರಿಗೆ ಇದು ಮೊದಲ ಚಿತ್ರ. ತಾವು ನೋಡಿದ ಮತ್ತು ಕೇಳಿದ ಒಂದಿಷ್ಟು ಘಟನೆಗಳನ್ನು, ನಿರ್ದೇಶಕ ರಂಜಿತ್ ಅವರಿಗೆ ಹೇಳಿದಾಗ ಈ ಕಥೆ ರೂಪುಗೊಂಡಿತಂತೆ. ಚಿತ್ರದಲ್ಲಿ ಅದ್ಭುತ ತಾರಾಬಳಗವಿದೆ. ಅದರ ಜೊತೆಗೆ ನಮ್ಮ ತಂಡದಲ್ಲಿ ಒಂದಿಷ್ಟು ಒಳ್ಳೆಯ ಕಲಾವಿದರಿದ್ದಾರೆ. ಅವರಿಗೆಲ್ಲಾ ಒಳ್ಳೆಯದಾಗಬೇಕೆಂಬ ನಿಟ್ಟಿನಲ್ಲಿ ಈ ಚಿತ್ರವನ್ನು ನಿರ್ಮಿಸುತ್ತಿದ್ದೇನೆ. ಇದೊಂದು ಒಳ್ಳೆಯ ಚಿತ್ರವಾಗುತ್ತದೆ ಎಂಬ ನಂಬಿಕೆ ಇದೆ. ಮುಂದೆ ಸಹ ಇನ್ನಷ್ಟು ಚಿತ್ರಗಳನ್ನು ನಿರ್ಮಿಸುವ ಆಸೆ ಇದೆ ಎಂದರು.

ನಾಯಕ ವಸಿಷ್ಠ ಸಿಂಹ ಮಾತನಾಡಿ, ಈ ಚಿತ್ರದಲ್ಲಿ ಪ್ರತಿಯೊಂದು ಪಾತ್ರವನ್ನೂ ಬಹಳ ಅಚ್ಚುಕಟ್ಟಾಗಿ ಬರೆದಿದ್ದಾರೆ ಮತ್ತು ಒಳ್ಳೆಯ ಬರವಣಿಗೆಯೇ ನಾನು ಈ ಚಿತ್ರ ಒಪ್ಪಿಕೊಳ್ಳುವುದಕ್ಕೆ ಮುಖ್ಯ ಕಾರಣ. ಈ ಸುತ್ತಮುತ್ತಲಿನ ಭಾಗದಲ್ಲಿ ನಡೆದ ಹಲವಾರು ಘಟನೆಗಳನ್ನಾಧರಿಸಿ ಈ ಕಥೆ ಮಾಡಿದ್ದಾರೆ. ಈ ಕಥೆ ವಿಭಿನ್ನವಾಗಿದೆ ಎನ್ನುವುದಕ್ಕಿಂತ ಹೆಚ್ಚು ನೈಜವಾಗಿದೆ ಮತ್ತು ಮನಸ್ಸಿಗೆ ಬಹಳ ಹತ್ತಿರವಾಗುವಂತಿದೆ ಎಂಬ ಕಾರಣಕ್ಕೆ ಒಪ್ಪಿಕೊಂಡೆ. ಗ್ಯಾಂಗ್‌ಸ್ಟರ್ ಕಥೆಯದರೂ, ಚಿತ್ರದಲ್ಲಿ ಒಳ್ಳೆಯ ಮೌಲ್ಯಗಳಿವೆ. ಬಹಳ ದಿನಗಳ ನಂತರ ನಾನು ಒಂದು ಮಾಸ್ ಪಾತ್ರವನ್ನು ಮಾಡುತ್ತಿದ್ದೇನೆ. ರವಿಶಂಕರ್ ಅವರ ಜೊತೆಗೆ ಇದು ನನ್ನ ಮೂರನೆಯ ಚಿತ್ರ. ಅವರ ಜೊತೆಗೆ ನಟಿಸುತ್ತಿರುವುದು ಬಹಳ ಖುಷಿಯ ವಿಷಯ ಎಂದರು.

ರವಿಶಂಕರ್ ಈ ಚಿತ್ರದಲ್ಲಿ ಸೂತ್ರಧಾರನ ಪಾತ್ರ ಮಾಡುತ್ತಿದ್ದಾರಂತೆ. ರಂಜಿತ್ ಈ ಕಥೆ ಹೇಳಿದಾಗ, ನನಗೆ ಅವರ ಕ್ಲಾರಿಟಿ ಬಹಳ ಇಷ್ಟವಾಯಿತು. ಇದರಲ್ಲಿ ಬಹಳ ಮುಖ್ಯವಾದ ಪಾತ್ರವಿದೆ. ನಾನೇನು ಪಾತ್ರ ಮಾಡುತ್ತಿದ್ದೇನೆ ಎಂದು ಹೇಳಿಬಿಟ್ಟರೆ, ಕಥೆ ಬಿಟ್ಟುಕೊಟ್ಟಂತಾಗುತ್ತದೆ. ನನ್ನ ಪಾತ್ರದ ಮೂಲಕ ಇಡೀ ಕಥೆ ನಡೆಯುತ್ತದೆ. ಇದು ನನಗೆ ಇನ್ನೊಂದು ಒಳ್ಳೆಯ ಚಿತ್ರವಾಗುತ್ತದೆ ಎಂಬ ನಂಬಿಕೆ ಇದೆ ಎಂದರು.

ಕಡಲ್ ಕೋಟೆ ಚಿತ್ರದಲ್ಲಿ ವಸಿಷ್ಠ ಸಿಂಹ ಅವರಿಗೆ ನಾಯಕಿಯಗಿ ಸುಷ್ಮಿತಾ ಭಟ್ ನಟಿಸುತ್ತಿದ್ದು, ಮಿಕ್ಕಂತೆ ರವಿಶಂಕರ್, ಅಚ್ಯುತ್ ಕುಮಾರ್, ಸ್ವರಾಜ್ ಶೆಟ್ಟಿ, ಶರತ್ ಲೋಹಿತಾಶ್ವ, ತಾರಾ, ಬಲ ರಾಜವಾಡಿ, ಯಶ್ ಶೆಟ್ಟಿ ಮುಂತಾದವರು ಪ್ರಮುಖ ಪಾತ್ರಗಳಲ್ಲಿ ಅಭಿನಯಿಸುತ್ತಿದ್ದಾರೆ. ಚಿತ್ರಕ್ಕೆ ಶಶಾಂಕ್ ಶೇಷಗಿರಿ ಸಂಗೀತ, ವೀನಸ್ ನಾಗರಾಜ ಮೂರ್ತಿ ಛಾಯಾಗ್ರಹಣ ಮತ್ತು ಪವನ್ ಗೌಡ ಅವರ ಸಂಕಲನವಿರುವ ಈ ಚಿತ್ರದ ಕಾರ್ಯಕಾರಿ ನಿರ್ಮಾಪಕರಾಗಿ ಪವನ್ ಕುಮಾರ್ ಉಡುಪಿ ಕಾರ್ಯ ನಿರ್ವಹಿಸುತ್ತಿದ್ದಾರೆ.

## ಸಂಗೀತ ಬಾರ್ ಅಂಡ್ ರೆಸ್ಟೋರೆಂಡ್ ಚಿತ್ರೀಕರಣ ಪೂರ್ಣ



ಕೋಮಲ್ ಕುಮಾರ್, ಮೇಘನಾ ರಾಜ್, ಅನುಷಾ ರೈ ಮುಖ್ಯಭೂಮಿಕೆಯಲ್ಲಿ ಅಭಿನಯಿಸುತ್ತಿರುವ ಸಂಗೀತ ಬಾರ್ ಅಂಡ್ ರೆಸ್ಟೋರೆಂಟ್ ಚಿತ್ರದ ಚಿತ್ರೀಕರಣ ಪೂರ್ಣಗೊಂಡಿದೆ.

ಸಂಗೀತ ಬಾರ್ ಅಂಡ್ ರೆಸ್ಟೋರೆಂಟ್ ಚಿತ್ರಕ್ಕೆ ನಿರ್ದೇಶಕ ಸಂದೇಶ್ ಶೆಟ್ಟಿ ಆಜ್ರಿ ಆಕ್ಷನ್-ಕಟ್ ಹೇಳುತ್ತಿದ್ದು, ವಿಕಾಸ್ ಶೆಟ್ಟಿ ಈ ಚಿತ್ರಕ್ಕೆ ಬಂಡವಾಳ ಹೂಡಿ ನಿರ್ಮಾಣ ಮಾಡುತ್ತಿದ್ದಾರೆ. ಎರಡು ಹಂತಗಳಲ್ಲಿ 75 ದಿನಗಳ ಕಾಲ ಸಂಗೀತಾ ಬಾರ್ ಅಂಡ್ ರೆಸ್ಟೋರೆಂಟ್ ಚಿತ್ರದ ಚಿತ್ರೀಕರಣ ನಡೆಸಲಾಗಿದ್ದು, ಕುಂದಾಪುರ, ಶಿವಮೊಗ್ಗ, ತೀರ್ಥಹಳ್ಳಿ ಸೇರಿದಂತೆ ಕರಾವಳಿ ಮಲೆನಾಡು ಭಾಗದಲ್ಲಿ ಚಿತ್ರೀಕರಣ ನಡೆಸಲಾಗಿದೆ.

ಚಿತ್ರೀಕರಣಕ್ಕಾಗಿ ಕುಂದಾಪುರದ ವಾಲ್ತೂರು ಗ್ರಾಮದಲ್ಲಿ ಏಳು ವಿಭಿನ್ನ ವಿನ್ಯಾಸದ ಬೃಹತ್ ಸೆಟ್‌ಗಳನ್ನು ನಿರ್ಮಿಸಿ, ಅದರಲ್ಲಿ ಚಿತ್ರದ ಬಹುಭಾಗದ ಚಿತ್ರೀಕರಣವನ್ನು ನಡೆಸಲಾಗಿದೆ.

ಅಂದಹಾಗೆ, ಈ ಸಿನಿಮಾದ ಹೆಸರು ಸಂಗೀತ ಬಾರ್ ಅಂಡ್ ರೆಸ್ಟೋರೆಂಟ್ ಅಂತಿದ್ದರೂ, ಈ ಒಂದೇ ಸಿನಿಮಾದಲ್ಲಿ ಎರಡು ಟೈಟಲ್‌ಗಳಿವೆ! ಎನ್ನುತ್ತಾರೆ ಚಿತ್ರದ ನಿರ್ದೇಶಕ ಸಂದೇಶ್ ಶೆಟ್ಟಿ ಆಜ್ರಿ. ಅದಕ್ಕೆ ಕಾರಣ ಈ ಚಿತ್ರದ ಕಥಾಹಂದರ. ಚಿತ್ರದ ಮೊದಲಾರ್ಧ ಬಾರ್‌ನಲ್ಲಿ ಶುರುವಾಗಿ, ಬಾರ್ ಸುತ್ತ ಸಾಗಿದರೆ, ದ್ವಿತೀಯಾರ್ಧ ದೇವರ ತಾಣದಲ್ಲಿ ಶುರುವಾಗಿ ಅಲ್ಲೇ ಮುಗಿಯುತ್ತದೆ. ಹಾಗಾಗಿ ಚಿತ್ರದ ಮೊದಲಾರ್ಧ ಸಂಗೀತ ಬಾರ್ ಅಂಡ್ ರೆಸ್ಟೋರೆಂಟ್ ಆಗಿದ್ದರೆ, ದ್ವಿತೀಯಾರ್ಧ ದೇವರ ತಾಣ ಅಂತಿದೆ. ಈ ಎರಡೂ ಹೆಸರುಗಳು ಕೂಡ ನಮ್ಮ ಸಿನಿಮಾದ ಟೈಟಲ್ಗಳು! ಆದರೆ ಸೆನ್ಸಾರ್ ನಿಯಮದಂತೆ, ಒಂದು ಸಿನಿಮಾಕ್ಕೆ ಒಂದೇ ಹೆಸರು ಇಡಬೇಕಾಗಿರುವುದರಿಂದ, ಸಂಗೀತ ಬಾರ್ ಅಂಡ್ ರೆಸ್ಟೋರೆಂಟ್ ಹೆಸರಿನಲ್ಲಿ ಸಿನಿಮಾ ಥಿಯೇಟರಿಗೆ ತರುತ್ತಿದ್ದೇವೆ ಎನ್ನುವುದು ಚಿತ್ರದ ಟೈಟಲ್ ಬಗ್ಗೆ ನಿರ್ದೇಶಕ ಸಂದೇಶ್ ಶೆಟ್ಟಿ ಆಜ್ರಿ ನೀಡುವ ವಿವರಣೆ.

ಇದೇ ಮೊದಲ ಬಾರಿಗೆ ನಾಯಕ ನಟ ಕೋಮಲ್, ಸಂಗೀತ ಬಾರ್ ಅಂಡ್ ರೆಸ್ಟೋರೆಂಟ್ ಸಿನಿಮಾದಲ್ಲಿ ಒಂದು ಹಿಂದಿನ ಚಾರಿತ್ರಿಕತೆ ಮತ್ತೊಂದು ಇಂದಿನ ಆಧುನಿಕತೆ ಭಾಗವಾಗಿರುವ ಎರಡು ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಒಂದರಲ್ಲಿ ಆಸ್ಥಾನವೊಂದರ ವರ್ಣಚಿತ್ರ ಕಲಾವಿದನಾಗಿ ಕಾಣಿಸಿಕೊಂಡರೆ, ಮತ್ತೊಂದರಲ್ಲಿ ಸಿನಿಮಾ ನಿರ್ದೇಶಕನ ಪಾತ್ರದಲ್ಲಿ ಕೋಮಲ್ ಡಬಲ್ ರೋಲ್ ಪ್ಲೇ ಮಾಡುತ್ತಿದ್ದಾರೆ. ಇನ್ನು ಮೇಘನಾ ರಾಜ್ ದೇವರ ತಾಣ ದಲ್ಲಿ ರಾಣಿಯಾಗಿ ಕಾಣಿಸಿಕೊಂಡರೆ, ಸಂಗೀತ ಬಾರ್ ನಲ್ಲಿ ನಾಯಕಿಯಾಗಿ ಜೊತೆಯಾಗುತ್ತಾರೆ. ಉಳಿದಂತೆ ಪ್ರಮೋದ್ ಶೆಟ್ಟಿ, ಪ್ರಕಾಶ್ ತುಮ್ಮಿನಾಡ್, ವಜ್ರಧೀರ್ ಜೈನ್, ಉತ್ಸವ್, ಕಾರ್ತಿಕ್ ರಾವ್, ರಾಘು ರಾಮನಕೊಪ್ಪ, ಸಿರಿಜಾ, ವರ್ಧನ್, ಕರಣ್ , ರಾಧಿಕ ರಾವ್ ದಿವ್ಯಶ್ರೀ, ಅಕ್ಷತಾ, ಅರಸು, ಮಹೇಶ್, ನಾಗರಾಜ್ , ಚಿತ್ರಕಲಾ, ಉಮೇಶ್ ಕಿನ್ನಾಳ್, ಮನೀಶ್ ಶೆಟ್ಟಿ, ರಾಧಾಕೃಷ್ಣ, ಮಹಾಬಲೇಶ್ವರ ಭಟ್ ಹೀಗೆ ದೊಡ್ಡ ಕಲಾವಿದರ ಬೃಹತ್ ತಾರಾಗಣವೇ ಚಿತ್ರದಲ್ಲಿದೆ. ನಿರ್ದೇಶಕ ಸಂದೇಶ್ ಶೆಟ್ಟಿ ಆಜ್ರಿ ಕೂಡ ಚಿತ್ರದ ಪಾತ್ರವೊಂದಕ್ಕೆ ತೆರೆಮೇಲೆ ಬಣ್ಣ ಹಚ್ಚಿದ್ದಾರೆ. ಚಿತ್ರದಲ್ಲಿ ನಾಲ್ಕು ವಿಭಿನ್ನ ಹಾಡುಗಳು, ಫೈಟ್ಸ್, ಕಾಮಿಡಿ, ಎಮೋಶನ್, ಜೊತೆಗೊಂದು ಸ್ಪಿರಿಚುಯಲ್ ಸ್ಟೋರಿ... ಹೀಗೆ ಒಂದು ಕಂಪ್ಲೀಟ್ ಎಂಟರ್‌ಟೈನ್ಮೆಂಟ್ ಸಿನಿಮಾಕ್ಕೆ ಏನೇನೂ ಇರಬೇಕೋ, ಅದೆಲ್ಲವೂ ಸಂಗೀತ ಬಾರ್ ಅಂಡ್ ರೆಸ್ಟೋರೆಂಟ್ ನಲ್ಲಿ ಸಿಗುತ್ತದೆ ಎಂಬುದು ಚಿತ್ರತಂಡದ ಭರವಸೆಯ ಮಾತು.

## ಬಿಡುಗಡೆಯಾಯ್ತು ಲವ್‌ಮಾಕ್ಟೇಲ್-3 ಚಿತ್ರದ ಟ್ರೈಲರ್!

ಡಾರ್ಲಿಂಗ್ ಕೃಷ್ಣ ನಿರ್ದೇಶನ ಮಾಡಿ ನಟಿಸಿರುವ ಚಿತ್ರ ಲವ್ ಮಾಕ್ಟೇಲ್3. ಮಾರ್ಚ್ 19ರಂದು ಬಿಡುಗಡೆಗೊಳ್ಳಲಿರುವ ಈ ಚಿತ್ರದ ಟ್ರೈಲರ್ ಇದೀಗ ಬಿಡುಗಡೆಗೊಂಡಿದೆ. ಲವ್ ಮಾಕ್ಟೇಲ್ ಮೊದಲ ಆವೃತ್ತಿಯ ಟ್ರೈಲರ್ ಅನ್ನು ಕಿಚ್ಚಾ ಸುದೀಪ್ ಬಿಡುಗಡೆಗೊಳಿಸಿದ್ದರು. ಎರಡನೇ ಆವೃತ್ತಿಯ ಟ್ರೈಲರ್ ಕ್ರೇಜಿಸ್ಟಾರ್ ರವಿಚಂದ್ರನ್ ಅವರ ಕಡೆಯಿಂದ ಬಿಡುಗಡೆಗೊಂಡಿತ್ತು. ಆದರೆ, ಮೂರನೇ ಆವೃತ್ತಿಯ ಈ ಟ್ರೈಲರ್ ಅನ್ನು ಡಾರ್ಲಿಂಗ್ ಕೃಷ್ಣ ಮತ್ತು ಮಿಲನಾ ನಾಗರಾಜ್ ಪುತ್ರಿ ಪರಿ ಬಿಡುಗಡೆಗೊಳಿಸಿರುವುದು ವಿಶೇಷ.

ಈ ಟ್ರೈಲರ್ ಬಿಡುಗಡೆಯ ಪತ್ರಿಕಾಗೋಷ್ಠಿಯಲ್ಲಿ ನಿರ್ದೇಶಕ ಹಾಗೂ ಈ ಚಿತ್ರಕ್ಕೊಂದು ಹಾಡನ್ನು ಬರೆದಿರುವ ಶಶಾಂಕ್ ಮತ್ತು ಕೆವಿಎನ್ ಪ್ರೊಡಕ್ಷನ್ಸ್ ಸಂಸ್ಥೆಯ ಸುಪ್ರೀತ್ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದರು. ಮಿಲನಾ ನಾಗರಾಜ್, ಡಾರ್ಲಿಂಗ್ ಕೃಷ್ಣ, ದಿಲೀಪ್ ರಾಜ್, ಶ್ವೇತಾ ಪ್ರಸಾದ್, ಅಮೃತಾ ಅಯ್ಯಂಗಾರ್, ಗೀತರಚನೆಕಾರ ರಾಘವೇಂದ್ರ ಕಾಮತ್, ನಟ ಜಗದೀಶ್, ರೆಚೆಲ್ ಡೇವಿಡ್, ಶ್ರೀ ಕ್ರೇಜಿ ಮೈಂಡ್ಸ್, ಸಂವೃತ, ಅಭಿಲಾಶ್, ರಜನಿ, ನಯಾರಾ ಮುಂತಾದವರು ಉಪಸ್ಥಿತರಿದ್ದರು.

ಈ ಪತ್ರಿಕಾಗೋಷ್ಠಿಯ ಕೇಂದ್ರಬಿಂದುಗಳಾದ ಮಿಲನಾ ನಾಗರಾಜ್ ಮತ್ತು ಡಾರ್ಲಿಂಗ್ ಕೃಷ್ಣ, ಲವ್ ಮಾಕ್ಟೇಲ್3 ರೂಪುಗೊಂಡಿದ್ದರ ಹಿಂಚುಮುಂಚಿನ ವಿಚಾರಗಳನ್ನು ತೆರೆದಿಡುತ್ತಲೇ, ಇದರಲ್ಲಿ ಪಾತ್ರಗಳನ್ನು ನಿರ್ವಹಿಸಿರುವ ಕಲಾವಿದರ ನಟನಾ ಚಾತುರ್ಯವನ್ನು ತೆರೆದಿಟ್ಟರು. ಡಾರ್ಲಿಂಗ್ ಕೃಷ್ಣ ಮಾತನಾಡುತ್ತಾ 'ಯಾವುದೋ ಕ್ಷಣದಲ್ಲಿ ಈ ಸಿನಿಮಾದ ಒಂದೆಳೆ ಕಥೆ ಹೊಳೆಯಿತು. ಅದರ ಗುಂಗುಹತ್ತಿಸಿಕೊಂಡ ನಂತರ ಮನೆಯಲ್ಲಿ ಕಥೆ ಬರೆಯಲು ಸಾಧ್ಯವಿಲ್ಲವೆನ್ನಿಸಿ ಮೂರು ದಿನಗಳ ಕಾಲ ಗೋವಾಕ್ಕೆ ಹೋಗಿದ್ದೆ. ಅಲ್ಲಿಯೇ ಕಥೆ ಚಿತ್ರಕಥೆಗೊಂದು ರೂಪುರೇಷೆ ಕೊಟ್ಟು ಮತ್ತೆ ಮರಳಿದ್ದೆ' ಎನ್ನುತ್ತಲೇ ಕಥೆ ಹುಟ್ಟಿದ ಬಗೆಯನ್ನು ವಿವರಿಸಿದರು. ಇದಲ್ಲದೇ ಈ ಸಿನಿಮಾದ ಪಾತ್ರಗಳ ಬಗ್ಗೆ, ಅದನ್ನು ನಿರ್ವಹಿಸಿರುವ ಕಲಾವಿದರ ಬಗ್ಗೆ ಎಳೆ ಎಳೆಯಾಗಿ ಮಾಹಿತಿಗಳನ್ನು ಹಂಚಿಕೊಂಡರು.

ಮಿಲನಾ ನಾಗರಾಜ್ ಟ್ರೈಲರ್ ಸಿದ್ಧಗೊಂಡ ಬಗೆಗಿನ ವಿವರಗಳ ಮೂಲಕ ಮಾತುಗಳನ್ನಾರಂಭಿಸಿ 'ಎಲ್ಲರೂ ಇಷ್ಟೊಂದು ಆತ್ಮವಿಶ್ವಾಸದಿಂದ ದೊಡ್ಡ ಸಿನಿಮಾದ ಮುಂದೆ ತೆರೆಗಾಣಲು ಸಿದ್ಧವಾದ ಬಗ್ಗೆ ಅಚ್ಚರಿಯಿಂದ ಪ್ರಶ್ನಿಸುತ್ತಿದ್ದಾರೆ. ಅದಕ್ಕೆ ಕಾರಣವಾಗಿರೋದು ಸಿನಿಮಾ ಮೂಡಿ ಬಂದಿರುವ ರೀತಿ. ಈ ಚಿತ್ರ ಅಷ್ಟೊಂದು ಚೆನ್ನಾಗಿ ಮೂಡಿ ಬಂದಿದೆ ಅನ್ನೋ ವಿಶ್ವಾಸವಿದೆ. ಅದನ್ನು ಎಲ್ಲರೂ ನೋಡಿ, ಈ ಹಿಂದಿನ ಎರಡು ಸರಣಿಗಳಿಗೆ ಕೊಟ್ಟಷ್ಟೇ ಪ್ರೀತಿ, ಪ್ರೋತ್ಸಾಹ ಕೊಡುತ್ತಾರೆಂಬ ನಂಬಿಕೆ ಇದೆ' ಎಂದರು.

ಅಮೃತಾ ಅಯ್ಯಂಗಾರ್, ದಿಲೀಪ್ ರಾಜ್, ರೆಚೆಲ್ ಡೇವೀಡ್, ಶ್ವೇತಾ ಪ್ರಸಾದ್ ಮುಂತಾದವರು ಈ ಸಿನಿಮಾದಲ್ಲಿನ ತಮ್ಮ ಪಾತ್ರದ ಬಗ್ಗೆ ವಿವರಿಸುತ್ತಲೇ, ಇಂಥಾ ಅವಕಾಶ ದಕ್ಕಿದ ಬಗ್ಗೆ ಡಾಲಿಂಗ್ ಕೃಷ್ಣ ಮತ್ತು ಮಿಲನಾ ನಾಗರಾಜ್ ದಂಪತಿಗಳಿಗೆ ಕೃತಜ್ಞತೆ ಸಲ್ಲಿಸಿದರು. ಕ್ರಿಸ್‌ಮಿ ಬ್ಯಾನರಿನಡಿಯಲ್ಲಿ ಡಾರ್ಲಿಂಗ್ ಕೃಷ್ಣ ಮತ್ತು ಮಿಲನಾ ನಾಗರಾಜ್ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಡಾರ್ಲಿಂಗ್ ಕೃಷ್ಣ, ಮಿಲನಾ ನಾಗರಾಜ್, ಸಂವೃತ, ಅಮೃತಾ ಅಯ್ಯಂಗಾರ್, ದಿಲೀಪ್ ರಾಜ್, ಶ್ವೇತಾ ಪ್ರಸಾದ್, ರಚೆಲ್ ಡೇವಿಡ್, ನಯೇರಾ, ಜಗದೀಶ್, ಅಭಿಲಾಶ್, ಗಿರಿರಾಜ್, ದಳಪತಿ ಮುಂತಾದವರ ತಾರಾಗಣ ಈ ಚಿತ್ರಕ್ಕಿದೆ. ಶ್ರೀ ಕ್ರೇಜಿ ಮೈಂಡ್ಸ್ ಛಾಯಾಗ್ರಹಣ ಮತ್ತು ಸಂಕಲನ, ನಕುಲ್ ಅಭಯಂಕರ್ ಸಂಗೀತ, ಅಮರ್ ಮತ್ತು ಜೋನಾ ಕಲಾ ನಿರ್ದೇಶನ ಈ ಚಿತ್ರಕ್ಕಿದೆ.



## ಮಹಿಳಾ ದಿನದ ವಿಶೇಷ: ಮುಳ್ಳಿನ ಗುಲಾಬಿ ಪೋಸ್ಟರ್ ಬಿಡುಗಡೆ



ಹಿರಿಯನಟ ಅನಂತನಾಗ್, ಆರತಿ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿರುವ ಮುಳ್ಳಿನ ಗುಲಾಬಿ 1982ರಲ್ಲಿ ತೆರೆಕಂಡಿತ್ತು. 44 ವರ್ಷಗಳ ನಂತರ ಮತ್ತೊಮ್ಮೆ ಅದೇ ಹೆಸರಿನಲ್ಲಿ ಮಹಿಳಾ ಪ್ರಧಾನ ಕಥಾಹಂದರ ಒಳಗೊಂಡ ಚಿತ್ರವೊಂದು ನಿರ್ಮಾಣವಾಗುತ್ತಿದೆ.

ಒಂದು ಹೆಣ್ಣು ತನ್ನ ಕಾಲೇಜ್ ಲೈಫಲ್ಲಿ, ಚಿಕ್ಕ ವಯಸಿನಲ್ಲೇ ಮದುವೆಯಾಗಿ ಗಂಡನ ಮನೆಗೆ ಹೋದಾಗ ಆ ಮನೆಯಲ್ಲಿ ಅತ್ತೆ, ಮಾವನ ಕಡೆಯಿಂದ ಏನೆಲ್ಲ ಕಿರುಕುಳ, ಕಷ್ಟ ಕಾರ್ಪಣ್ಯಗಳನ್ನು ಅನುಭವಿಸುತ್ತಾಳೆ, ಕೊನೆಗೆ ಅದನ್ನೆಲ್ಲ ಎದುರಿಸಿ ಹೇಗೆ ಸಮಾಜದಲ್ಲಿ ಬೆಳೆದು ನಿಲ್ಲುತ್ತಾಳೆ ಎಂಬುದನ್ನು ಈ ಚಿತ್ರದ ಮೂಲಕ ಹೇಳಲಾಗುತ್ತಿದೆ.

ಲೇಖಕಿ ಆಶಾ ಗುರುಲಿಂಗಯ್ಯ ಅವರು ರಚಿಸಿರುವ ಕಾದಂಬರಿಯನ್ನಾಧರಿಸಿ ತಯಾರಾಗುತ್ತಿರುವ 'ಮುಳ್ಳಿನ ಗುಲಾಬಿ' ಚಿತ್ರಕ್ಕೆ ಸ್ಟೈಲ್ ಶಿವು ಅವರು ಚಿತ್ರಕಥೆ, ಸಂಭಾಷಣೆಗಳನ್ನು ಬರೆದು ನಿರ್ದೇಶನ ಮಾಡುತ್ತಿದ್ದಾರೆ.

ಈ ಹಿಂದೆ ನಿಸರ್ಗ ಎಂಬ ಚಿತ್ರ ನಿರ್ದೇಶಿಸಿದ್ದ ಸ್ಟೈಲ್ ಶಿವು ಅವರ ಸಾರಥ್ಯದ ಎರಡನೇ ಚಿತ್ರವಿದು.

ನಿನ್ನೆ ನಡೆದ ಮಹಿಳಾ ದಿನಾಚರಣೆಯ ಅಂಗವಾಗಿ, ಮಹಿಳಾ ಪ್ರಧಾನ ಕಥಾಹಂದರ ಒಳಗೊಂಡ ಈ ಚಿತ್ರದ ಪೋಸ್ಟರ್ ಬಿಡುಗಡೆ ಕಾರ್ಯಕ್ರಮ ಬೆಂಗಳೂರಿನ ನಯನ ಸಭಾಂಗಣದಲ್ಲಿ ನೆರವೇರಿತು.

ವೇದಿಕೆಯಲ್ಲಿ ಸಹಾಯಕ ಪೊಲೀಸ್ ಕಮೀಷನರ್ ಡಾ.ಪ್ರಿಯದರ್ಶಿನಿ ಈಶ್ವರ್ ಸಾಣೆಕೊಪ್ಪ ಅವರು ಮುಳ್ಳಿನ ಗುಲಾಬಿ ಚಿತ್ರದ ಪೋಸ್ಟರ್ ಬಿಡುಗಡೆ ಮಾಡಿ ಚಿತ್ರತಂಡಕ್ಕೆ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಹಿರಿಯ ನಟ ಮೈಸೂರು ರಮಾನಂದ್ ಅವರು ಹಾಜರಿದ್ದರು. ಭೂಮಿಕಾ ಸಿನಿ ಪ್ರೊಡಕ್ಷನ್ಸ್ ಲಾಂಛನದಲ್ಲಿ ಬಿ.ಕೆ. ಶಿವಕುಮಾರ್ ಅವರು ನಿರ್ಮಿಸುತ್ತಿರುವ ಈ ಚಿತ್ರದಲ್ಲಿ ಕಥಾಲೇಖಕಿ ಆಶಾ ಗುರುಲಿಂಗಯ್ಯ ಅವರೇ ಸಮಾಜದಲ್ಲಿ ನೊಂದ ಹೆಣ್ಣುಮಕ್ಕಳ ಪ್ರತಿನಿಧಿಯಾದ, ನಾಯಕಿಯ ಪಾತ್ರವನ್ನು ನಿರ್ವಹಿಸಲಿದ್ದಾರೆ. ರವಿ ಸುವರ್ಣ ಅವರ ಛಾಯಾಗ್ರಹಣ, ವಿನು ಮನಸು ಅವರ ಸಂಗೀತ ಸಂಯೋಜನೆ, ಮನ್ವರ್ಷಿ ಹಾಗೂ ವೇಣು ಅವರ ಸಾಹಿತ್ಯ ಈ ಚಿತ್ರಕ್ಕಿದೆ. ಉಳಿದ ತಾರಾಗಣ ಹಾಗೂ ತಾಂತ್ರಿಕ ವರ್ಗದ ಆಯ್ಕೆ ಪ್ರಕ್ರಿಯೆ ನಡೆಯುತ್ತಿದ್ದು, ಸಧ್ಯದಲ್ಲೇ ಚಿತ್ರದ ಚಿತ್ರೀಕರಣ ಪ್ರಾರಂಭವಾಲಿದೆ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,